ಸಂಪುಟ: 06 ಸಂಚಿಕೆ: 117 ಪುಟಗಳು: 08 ಶುಕ್ರವಾರ 10 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಕ್ಷತ್ರಗಳನ್ನೆಣಿಸುವ ನಮಗೆ ಜನ್ಮ ನೀಡಿದವಳು, ನಮಗಾಗಿ ಜನ್ಮವೆತ್ತಿದವಳು ಹಾಗೂ ನಮ್ಮಿಂದ ಜನ್ಮ ಪಡೆದವಳು ಈ ಮೂವರನ್ನೂ ಗೌರವದಿಂದ ಕಾಣೋಣ!

## ಭಾರತ-ಆಸ್ಟ್ರೇಲಿಯಾ ಸಂಬಂಧಕ್ಕೆ ಬಲ



**ಪ್ರಧಾನಮಂತ್ರಿ ನರೇಂದ್ರ ಮೋದಿ ಆಸ್ಟ್ರೇಲಿಯಾ ಪ್ರವಾಸದಲ್ಲಿದ್ದು, ಈ ವೇಳೆ ಭಾರತ-ಆಸ್ಟ್ರೇಲಿಯಾ ಯುರೇನಿಯಂ ಪೂರೈಕೆ ಒಪ್ಪಂದಕ್ಕೆ, ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ಸಹಿ ಹಾಕಿದ್ದಾರೆ. ಈ ಒಪ್ಪಂದವು ಭಾರತದ ನಾಗರಿಕ ಪರಮಾಣು ವಿದ್ಯುತ್ ಕಾರ್ಯಕ್ರಮಕ್ಕಾಗಿ, ಆಸ್ಟ್ರೇಲಿಯಾದ ಯುರೇನಿಯಂನ ವಾಣಿಜ್ಯ ಪೂರೈಕೆಯನ್ನು ಖಚಿತಪಡಿಸುತ್ತದೆ. ಇಷ್ಟೇ ಅಲ್ಲದೇ ಉಭಯ ನಾಯಕರು ಕಡಲ ಭದ್ರತೆ, ನಿರ್ಣಾಯಕ ಖನಿಜ ಸೇರಿದಂತೆ ಇತರ ಪ್ರಮುಖ ಒಪ್ಪಂದಗಳಿಗೂ ಉಭಯ ನಾಯಕರು ಸಹಿ ಹಾಕಿದ್ದಾರೆ.**

• ಉದಯವಾಹಿನಿ, ನವದೆಹಲಿ

ಪ್ರಸ್ತುತ ಆಸ್ಟ್ರೇಲಿಯಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಅಲ್ಲಿನ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು. ಭಾರತ-ಆಸ್ಟ್ರೇಲಿಯಾ ಸಂಬಂಧಗಳನ್ನು ಬಲಪಡಿಸುವಲ್ಲಿ ಭಾರತೀಯ ಸಮುದಾಯವು ಪ್ರಮುಖ ಪಾತ್ರವಹಿಸಿದೆ. ಕಳೆದ 12 ವರ್ಷಗಳಲ್ಲಿ ಆಸ್ಟ್ರೇಲಿಯಾಕ್ಕೆ ಇದು ತಮ್ಮ ಮೂರನೇ ಭೇಟಿ. ಇದನ್ನು ಮೋದಿ 'ಹ್ಯಾಟ್ರಿಕ್' ಎಂದು ಕರೆದರು.ಮೆಲ್ಬೋರ್ನ್‌ನಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿದ ಮಾತನಾಡಿದ ಪ್ರಧಾನಿ ಮೋದಿ, ವಲಸಿಗರ ದೈನಂದಿನ ದಿನಚರಿ ಅವರನ್ನು ಭಾರತದೊಂದಿಗೆ ಸಂಪರ್ಕದಲ್ಲಿರಿಸುತ್ತದೆ. ಆಸ್ಟ್ರೇಲಿಯಾದ ಅಭಿವೃದ್ಧಿಗೆ ಸಹ ಕೊಡುಗೆ ನೀಡುತ್ತಿದ್ದಾರೆ ಎಂದು ಹೇಳಿದರು. ಈ ಕಾರ್ಯಕ್ರಮವು ಮನೆ ತುಂಬಿದೆ. ಇದು ಬ್ಲಾಕ್ ಬಸ್ಟರ್. ನಾನು ನಿಮ್ಮೆಲ್ಲರನ್ನೂ ಸಿಡ್ನಿಯಲ್ಲಿ ಎರಡು ಬಾರಿ ಭೇಟಿ ಮಾಡಿದ್ದೇನೆ. ಮೆಲ್ಬೋರ್ನ್ ಜನರನ್ನು ಭೇಟಿಯಾಗಲು ನಾನು ಸಹ ಎದುರು ನೋಡುತ್ತಿದ್ದೆ. ಆದ್ದರಿಂದ ಈ ಬಾರಿ ನಾನು ಮೆಲ್ಬೋರ್ನ್ ಜನರೊಂದಿಗೆ ಒಂದು ಕಾಫಿ ಕುಡಿಯಬೇಕೆಂದು ಭಾವಿಸಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಇದು ಭಾರತ-ಆಸ್ಟ್ರೇಲಿಯಾ ಸಂಬಂಧಗಳು ಎಷ್ಟು ಎತ್ತರಕ್ಕೆ ತಲುಪಿವೆ ಎಂಬುದನ್ನು ತೋರಿಸುತ್ತದೆ. ನೀವೆಲ್ಲರೂ ಈ ಸಂಬಂಧಗಳನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದೀರಿ ಎಂದರು. ನೀವೆಲ್ಲರೂ ನಿಮ್ಮ ಕಠಿಣ ಪರಿಶ್ರಮದಿಂದ ಆಸ್ಟ್ರೇಲಿಯಾದ ಅಭಿವೃದ್ಧಿಯನ್ನು ಪೋಷಿಸುತ್ತಿದ್ದೀರಿ. ಭಾರತ ಏನು ಮಾಡುತ್ತಿದೆ ಎಂಬುದರ ಮೇಲೆ ನೀವು ನಿರಂತರವಾಗಿ ಕಣ್ಣಿಟ್ಟಿದ್ದೀರಿ ಎಂದು ನನಗೆ ತಿಳಿದಿದೆ.

21ನೇ ಶತಮಾನದ ಭಾರತ ಇಂದು ಅಭಿವೃದ್ಧಿ ಹೊಂದಲು ಶ್ರಮಿಸುತ್ತಿದೆ ಎಂದರು. ಮೆಲ್ಬೋರ್ನ್ ನಿಜವಾಗಿಯೂ ಎಲ್ಲರ ಹೃದಯಗಳನ್ನು ಗೆದ್ದಿದೆ. ನನ್ನ ಸ್ನೇಹಿತ ಮತ್ತು ಭಾರತದ ಸ್ನೇಹಿತ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರಿಗೂ ನಾನು ತುಂಬಾ ಕೃತಜ್ಞನಾಗಿದ್ದೇನೆ. ನೀವು ಸಿಡ್ನಿಯಲ್ಲಿ ನಮ್ಮೊಂದಿಗಿದ್ದೀರಿ, ಮತ್ತು ಇಂದು ನೀವು ಮೆಲ್ಬೋರ್ನ್‌ನಲ್ಲಿರುವ ಭಾರತೀಯ ಸಮುದಾಯವನ್ನು ಸೇರಿದ್ದೀರಿ. ಒಂದು ರೀತಿಯಲ್ಲಿ ಈ ಪ್ರಯಾಣವು ಪೂರ್ಣ ವೃತ್ತವನ್ನು ತಲುಪಿದೆ ಎಂದರು. ವಿಶ್ವದ ಅತಿದೊಡ್ಡ ಕ್ರಿಕೆಟ್ ಕ್ರೀಡಾಂಗಣವನ್ನು ಹೊಂದಿರುವ ಅಹಮದಾಬಾದ್ ನಗರದಿಂದ, ಪ್ರಸಿದ್ಧ ಕ್ರೀಡಾಂಗಣವನ್ನು ಹೊಂದಿರುವ ಮೆಲ್ಬೋರ್ನ್‌ವರೆಗೆ, ನಾವು ಎರಡೂ ಸ್ಥಳಗಳಲ್ಲಿ ಒಟ್ಟಿಗೆ ಇದ್ದೇವೆ. ಪ್ರಧಾನಿ ಅಲ್ಬನೀಸ್ ಮಾತನಾಡಿದಾಗಲೆಲ್ಲಾ ಅವರು ಭಾರತೀಯರ ಹೃದಯ ಮತ್ತು ಮನಸ್ಸನ್ನು ಗೆಲ್ಲುತ್ತಾರೆ ಎಂದು ನಾವೆಲ್ಲರೂ ನೋಡಿದ್ದೇವೆ. ನೀವು ಸಿಡ್ನಿಯಲ್ಲಿ ಅದ್ಭುತವಾದ ಪ್ರಭಾವ ಬೀರಿದ್ದೀರಿ ಮತ್ತು ನೀವು ಇಲ್ಲಿಯೂ ಎಲ್ಲರ ಹೃದಯಗಳನ್ನು ಗೆದ್ದಿದ್ದೀರಿ ಎಂದರು.

**ನಮೋ ವಿದೇಶ ಪ್ರವಾಸ**

- ಭಾರತ-ಆಸ್ಟ್ರೇಲಿಯಾ ಸಂಬಂಧ ಉತ್ತುಂಗದಲ್ಲಿದೆ
- ಇದರಲ್ಲಿ ನಿಮ್ಮ ಪಾತ್ರ ದೊಡ್ಡದು
- ಅನಿವಾಸಿ ಭಾರತೀಯರನ್ನು ಶ್ಲಾಘಿಸಿದ ಮೋದಿ
- ಮೋದಿ-ಅಲ್ಬನೀಸ್ ಮಹತ್ವದ ಸಭೆ,
- ಅಣುಶಕ್ತಿ ಸೇರಿ ಹಲವು ಕ್ಷೇತ್ರಗಳಲ್ಲಿ ಐತಿಹಾಸಿಕ ಒಪ್ಪಂದ

1 ಪ್ರಧಾನಮಂತ್ರಿ ನರೇಂದ್ರ ಮೋದಿ ಆಸ್ಟ್ರೇಲಿಯಾ ಪ್ರವಾಸ.
2 ಭಾರತಕ್ಕೆ ವಾಣಿಜ್ಯ ಯುರೇನಿಯಂ ಮಾರಾಟಕ್ಕೆ ಆಸ್ಟ್ರೇಲಿಯಾ ಒಪ್ಪಿಗೆ.
3 ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ಆದ ಪ್ರಮುಖ ಒಪ್ಪಂದಗಳ ಪಟ್ಟಿ.

**ಬ್ಲಾಕ್ ಬಸ್ಟರ್ ಶೋ**

**ಪ್ರಮುಖ ಒಪ್ಪಂದಗಳಿಗೂ ಉಭಯ ನಾಯಕರು ಸಹಿ**

**ಭಯೋತ್ಪಾದನೆ ವಿರುದ್ಧ ಜಂಟಿ ಹೋರಾಟ**

**ಇಂಧನ ಭದ್ರತೆಗೆ ಬಲ**



"ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಸಂಬಂಧಗಳು ಇಷ್ಟು ಮಟ್ಟಿಗೆ ಸುಧಾರಿಸಲು ಅಲ್ಲಿನ ಅನಿವಾಸಿ ಭಾರತೀಯರೇ ಕಾರಣ. ಪ್ರಧಾನಿ ಮೋದಿ

ಭಯೋತ್ಪಾದನೆ ಕುರಿತು ಮಾತನಾಡಿದ ಮೋದಿ, ಭಯೋತ್ಪಾದನೆ ಒಂದು ದೇಶಕ್ಕಷ್ಟೇ ಅಲ್ಲ, ಇಡೀ ಮಾನವಕುಲಕ್ಕೆ ಸವಾಲಾಗಿದೆ. ಆದ್ದರಿಂದ ಭಯೋತ್ಪಾದನೆ ವಿರುದ್ಧದ ನಮ್ಮ ಹೋರಾಟವೂ ಜಂಟಿಯಾಗಿದೆ. ನಮ್ಮ ಸಂಕಲ್ಪ ಅಚಲವಾಗಿದ್ದು, ಸಹಕಾರ ಮತ್ತಷ್ಟು ಬಲಗೊಳ್ಳಲಿದೆ ಎಂದು ಹೇಳಿದರು.

ಜಾಗತಿಕ ಸಂಘರ್ಷಗಳನ್ನು ಸಂವಾದ ಮತ್ತು ರಾಜತಾಂತ್ರಿಕ ಮಾತುಕತೆಗಳ ಮೂಲಕವೇ ಪರಿಹರಿಸಬೇಕು ಎಂದು ಪುನರುಚ್ಚರಿಸಿದ ಪ್ರಧಾನಿ, ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ, ಸ್ಥಿರತೆ, ನೌಕಾಯಾನ ಸ್ವಾತಂತ್ರ್ಯ ಮತ್ತು ನಿಯಮಾಧಾರಿತ ವ್ಯವಸ್ಥೆ ಬಲಪಡಿಸಲು ಭಾರತ ಹಾಗೂ ಆಸ್ಟ್ರೇಲಿಯಾ ಒಟ್ಟಾಗಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು. ಇದೇ ವೇಳೆ ಸಮಗ್ರ ಆರ್ಥಿಕ ಸಹಕಾರ ಒಪ್ಪಂದ ಕುರಿತ ಮಾತುಕತೆಯನ್ನು ವೇಗಗೊಳಿಸಲು ಹಾಗೂ ದ್ವಿಪಕ್ಷೀಯ ಹೂಡಿಕೆ ಒಪ್ಪಂದವನ್ನು ಶೀಘ್ರದಲ್ಲೇ ಅಂತಿಮಗೊಳಿಸಲು ಉಭಯ ದೇಶಗಳು ಒಪ್ಪಿಕೊಂಡಿವೆ.

ಆಸ್ಟ್ರೇಲಿಯಾ ಪ್ರಧಾನಿ ಆಂಥನಿ ಅಲ್ಬನೀಸ್ ಮಾತನಾಡಿ, ಭಾರತವು ಆಸ್ಟ್ರೇಲಿಯಾದ ಅತ್ಯಂತ ಪ್ರಮುಖ ಕಾರ್ಯತಂತ್ರದ ಪಾಲುದಾರ ರಾಷ್ಟ್ರಗಳಲ್ಲಿ ಒಂದಾಗಿದೆ. ವ್ಯಾಪಾರ, ತಂತ್ರಜ್ಞಾನ, ಇಂಧನ ಮತ್ತು ಭದ್ರತೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಹಕಾರ ವಿಸ್ತರಿಸುವ ಮೂಲಕ ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು.

**ಹೆಚ್ಚು ಬೆಳೆಯಿರಿ, ಹೆಚ್ಚು ಸಾಧಿಸಿ**

ಆಸ್ಟ್ರೇಲಿಯಾದಲ್ಲಿ ನೆಲೆಸಿರುವ ಭಾರತೀಯ ಸಮುದಾಯದ ಯುವ ಸಮೂಹ ಮತ್ತು ಉದ್ಯಮಿಗಳಿಗೆ ಪ್ರೋತ್ಸಾಹದ ನುಡಿಗಳನ್ನಾಡಿದ ಪ್ರಧಾನಿ ಮೋದಿ, ಇನ್ನೂ ಹೆಚ್ಚು ಬೆಳೆಯಿರಿ, ಭವಿಷ್ಯದಲ್ಲಿ ಇನ್ನೂ ದೊಡ್ಡ ಸಾಧನೆಗಳನ್ನು ಮಾಡಿ ಎಂದು ಕರೆ ನೀಡಿದರು.

ಬದಲಾಗುತ್ತಿರುವ ಜಾಗತಿಕ ರಾಜಕೀಯ ಮತ್ತು ಆರ್ಥಿಕ ಸನ್ನಿವೇಶದಲ್ಲಿ ಭಾರತ ಮತ್ತು ಆಸ್ಟ್ರೇಲಿಯಾದ ನಡುವಿನ ನಿಕಟ ಸಂಬಂಧ ಬಹಳ ಮಹತ್ವದ್ದಾಗಿದೆ.



ಭಾರತ-ಆಸ್ಟ್ರೇಲಿಯಾ ನಾಗರಿಕ ಪರಮಾಣು ಒಪ್ಪಂದದ ಅಡಿಯಲ್ಲಿನ ಆಡಳಿತಾತ್ಮಕ ವ್ಯವಸ್ಥೆಯು, ಭಾರತದ ನಾಗರಿಕ ಪರಮಾಣು ವಿದ್ಯುತ್ ಕಾರ್ಯಕ್ರಮಕ್ಕಾಗಿ ಆಸ್ಟ್ರೇಲಿಯಾದ ಯುರೇನಿಯಂನ ವಾಣಿಜ್ಯ ಪೂರೈಕೆಯನ್ನು ಸುಗಮಗೊಳಿಸುತ್ತದೆ. ಈ ಒಪ್ಪಂದವು ಭಾರತದ ಇಂಧನ ಮೂಲಗಳನ್ನು ವೈವಿಧ್ಯಗೊಳಿಸುತ್ತದೆ. ದೀರ್ಘಕಾಲೀನ ಇಂಧನ ಭದ್ರತೆಯನ್ನು ಬಲಪಡಿಸುವುದಲ್ಲದೇ, ಶಾಂತಿ ಕಾಯ್ದೆಗೆ ಅನುಗುಣವಾಗಿ ದೇಶದ ಶುದ್ಧ ಇಂಧನ ಗುರಿಗಳನ್ನು ಬೆಂಬಲಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಇದು ಪರಮಾಣು ಶಕ್ತಿಯ ಸುರಕ್ಷಿತ ಮತ್ತು ಜವಾಬ್ದಾರಿಯುತ ಬಳಕೆಯನ್ನು ಖಚಿತಪಡಿಸುವ ಜೊತೆಗೆ, ಭಾರತದ ಪರಮಾಣು ಶಕ್ತಿಯ ಸಾಮರ್ಥ್ಯವನ್ನು ವಿಸ್ತರಿಸುವ ಗುರಿಯನ್ನೂ ಹೊಂದಿದೆ ಎಂದು ವಿದೇಶಾಂಗ ಸಚಿವಾಲಯ ಹಂಚಿಕೊಂಡ ಮಾಹಿತಿಯಲ್ಲಿ ಸ್ಪಷ್ಟಪಡಿಸಲಾಗಿದೆ. ಯುರೇನಿಯಂ ಒಪ್ಪಂದದ ಮಹತ್ವವನ್ನು ಒತ್ತಿ ಹೇಳುತ್ತಾ ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರು, ಹೇಳಿದರು, ಈ ಒಪ್ಪಂದವು ಪಳೆಯುಳಿಕೆಯೇತರ ಇಂಧನ ವಿದ್ಯುತ್ ಸಾಮರ್ಥ್ಯದ ಪಾಲನ್ನು ಹೆಚ್ಚಿಸಲು ಸಹಾಯ ಮಾಡಲು, ಆಸ್ಟ್ರೇಲಿಯಾದ ಯುರೇನಿಯಂನ್ನು ಭಾರತಕ್ಕೆ ರಫ್ತು ಮಾಡಲು ಸಹಾಯ ಮಾಡುತ್ತದೆ. ಈ ಒಪ್ಪಂದ ಆಸ್ಟ್ರೇಲಿಯಾದ ಸಂಪನ್ಮೂಲ ವಲಯಕ್ಕೆ ಹೆಚ್ಚುವರಿ ಮಾರುಕಟ್ಟೆಯನ್ನು ಒದಗಿಸುತ್ತದೆ ಎಂದು ಹೇಳಿದ್ದಾರೆ.

## ಶಿಕ್ಷೆ ರದ್ದು ಕೋರಿ ವಿನಯ್ ಕುಲಕರ್ಣಿ ಸಲ್ಲಿಸಿದ ಅರ್ಜಿಯ ತೀರ್ಪು ಕಾಯ್ದಿರಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಧಾರವಾಡದ ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ವಿಧಿಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶ ಪ್ರಶ್ನಿಸಿ ಮಾಜಿ ಸಚಿವ ವಿನಯ್ ಕುಲಕರ್ಣಿ ಸಲ್ಲಿಸಿರುವ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್, ಆದೇಶವನ್ನು ಕಾಯ್ದಿರಿಸಿದೆ.

ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ರದ್ದುಕೋರಿ ಮತ್ತು ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ಜಾಮೀನು ನೀಡಬೇಕು ಎಂದು ಕೋರಿ ವಿನಯ್ ಕುಲಕರ್ಣಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಮೊಹಮ್ಮದ್ ನವಾಜ್ ಮತ್ತು ನ್ಯಾಯಮೂರ್ತಿ ಜಿ.ಬಸವರಾಜು ಅವರಿದ್ದ ನ್ಯಾಯಪೀಠ, ತೀರ್ಪು ಕಾಯ್ದಿರಿಸಿದೆ. ನ್ಯಾಯಪೀಠ ನೀಡುವ ಆದೇಶದ ಮೇಲೆ ವಿನಯ್ ಕುಲಕರ್ಣಿ ಅವರು ಅವರ ಶಾಸಕ ಸ್ಥಾನದ ಉಳಿಯುವುದೇ ಎಂಬ ಅಂಶ ನಿರ್ಧಾರವಾಗಬೇಕಾಗಿದೆ.

## ಕನಿಷ್ಠ ಬೆಂಬಲ ಬೆಲೆಯ ಬಾಕಿ ಹಣ ಬಿಡುಗಡೆಗೆ ಕೇಂದ್ರಕ್ಕೆ ಕೆ.ಎಚ್.ಮುನಿಯಪ್ಪ ಮನವಿ

• ಉದಯವಾಹಿನಿ, ಬೆಂಗಳೂರು

ರಾಜ್ಯಕ್ಕೆ ಬರಬೇಕಿದ್ದ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅನುದಾನ ಬಿಡುಗಡೆ ಮಾಡಬೇಕೆಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಅವರು ಕೇಂದ್ರ ಸಚಿವ ಪಹ್ಲಾದ್ ಜೋಶಿಯವರಲ್ಲಿ ಮನವಿ ಮಾಡಿದ್ದಾರೆ. ದೆಹಲಿಯಲ್ಲಿ ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಹ್ಲಾದ್ ಜೋಶಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ ಅವರು, ಕೆಎಂಎಸ್ 2025-26ರಲ್ಲಿ ರಾಜ್ಯವು 5.69 ಲಕ್ಷ ಮೆಟ್ರಿಕ್ ಟನ್ ರಾಗಿ, 2.21 ಲಕ್ಷ ಮೆಟ್ರಿಕ್ ಟನ್ ಜೋಳ ಹಾಗೂ 0.0567 ಲಕ್ಷ ಮೆಟ್ರಿಕ್ ಟನ್ ಭತ್ತ ಖರೀದಿ ಮಾಡಿದ್ದು, ಈ ಪೈಕಿ ಕೇಂದ್ರ ಸರ್ಕಾರ ಇದುವರೆಗೆ 190.10 ಕೋಟಿ ಬಿಡುಗಡೆ ಮಾಡಿದೆ. ಉಳಿದ 4,232.07 ಕೋಟಿ ಮರುಪಾವತಿಯನ್ನು ಶೀಘ್ರ ಬಿಡುಗಡೆ ಮಾಡುವಂತೆ ಮನವಿ ಮಾಡಿದರು.

ಅಲ್ಲದೆ ಕೆಎಂಎಸ್ 2022-23ಕ್ಕೆ ಸಂಬಂಧಿಸಿದ 375.99 ಕೋಟಿ ತಾತ್ಕಾಲಿಕ ಸಬ್ಸಿಡಿ ಹಕ್ಕುಪತ್ರವು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದ್ದು, ಅದನ್ನೂ ಶೀಘ್ರ ಮಂಜೂರು ಮಾಡುವಂತೆ ಕೋರಿದರು. ಇದರ ಜೊತೆಗೆ ಕೆಎಂಎಸ್ 2009-10 ರಿಂದ 2024-25ರವರೆಗಿನ ಅವಧಿಗೆ ಸಂಬಂಧಿಸಿದ 1,902.58 ಕೋಟಿ ಕೆಎಂಎಸ್ ಬಾಕಿ ಮರುಪಾವತಿ ಮೊತ್ತವನ್ನು ಶೀಘ್ರ ಬಿಡುಗಡೆ ಮಾಡುವಂತೆ ಮುನಿಯಪ್ಪ ಮನವಿ ಮಾಡಿದರು. 1,902.58 ಕೋಟಿ ಬಾಕಿ ಮರುಪಾವತಿ ಪ್ರಕರಣವನ್ನು ಆದ್ಯತೆಯ ಮೇರೆಗೆ ಪರಿಶೀಲಿಸಿ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದು, ಕೆಎಂಎಸ್ 2025-26ರ ಮರುಪಾವತಿ ಹಕ್ಕುಪತ್ರಗಳು ರಾಜ್ಯ ಸರ್ಕಾರದಿಂದ ಸಲ್ಲಿಕೆಯಾದ ತಕ್ಷಣ ನಿಯಮಾನುಸಾರ ಪರಿಶೀಲಿಸಿ ಬಿಡುಗಡೆ ಮಾಡುವುದಾಗಿ ತಿಳಿಸಿದರು.

## ಎಸ್.ಆರ್ ವಿಶ್ವನಾಥ್ ಜೊತೆ ಜಟಾಪಟಿ ಮುಗಿದ ವಿಚಾರ ಪಕ್ಷದ ಹಿತದೃಷ್ಟಿಯಿಂದ ಒಟ್ಟಿಗೆ ಕಾರ್ಯನಿರ್ವಹಣೆ: ಡಾ.ಸುಧಾಕರ್

• ಉದಯವಾಹಿನಿ, ಬೆಂಗಳೂರು

ಎಸ್.ಆರ್ ವಿಶ್ವನಾಥ್ ಜೊತೆ ಜಟಾಪಟಿ ಮುಗಿದ ವಿಚಾರ. ಹೀಗಾಗಿ ಪಕ್ಷದ ಹಿತದೃಷ್ಟಿಯಿಂದ ಒಟ್ಟಿಗೆ ಕಾರ್ಯನಿರ್ವಹಿಸುತ್ತಿದ್ದೇವೆ ಎಂದು ಸಂಸದ ಡಾ.ಸುಧಾಕರ್ ಅವರು ತಿಳಿಸಿದ್ದಾರೆ. ನಗರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ರಾಜ್ಯ ಉಸ್ತುವಾರಿ ಡಾ.ರಾಧಾಮೋಹನ್ ದಾಸ್ ಅಗರ್ ವಾಲ್ ಅವರು ನಮ್ಮನ್ನು ಕರೆದಿದ್ದರು.

ನಮ್ಮ ಭಾಗದಲ್ಲಿ ಅನ್ಯೋನ್ಯವಾಗಿ ಬಿಜೆಪಿಯನ್ನು ಸದೃಢವಾಗಿ ಕಟ್ಟಬೇಕು. ಪರಸ್ಪರ ಏನೇ ಭಿನ್ನಾಭಿಪ್ರಾಯವಿದ್ದರೂ ಅದು ಪಕ್ಷದ ಮೇಲೆ ಪ್ರಭಾವ ಆಗಬಾರದು. ಪಕ್ಷಕ್ಕೆ ನಷ್ಟ ಆಗಬಾರದೆಂದು ಹೇಳಿದ್ದು, ಒಪ್ಪಿದ್ದೇವೆ. ಸಣ್ಣಪುಟ್ಟ ಅಭಿಪ್ರಾಯ ಹೇಳಿದ್ದೇವೆ ಎಂದಿದ್ದಾರೆ. ಪಕ್ಷದ ಅಡಿಯಲ್ಲಿ ಪಕ್ಷಕ್ಕೆ ನಷ್ಟ ಆಗದಂತೆ ಸದೃಢವಾಗಿ ನಮ್ಮ ನಮ್ಮ ಕಾರ್ಯವ್ಯಾಪ್ತಿಯಲ್ಲಿ ಹೇಗೆ ಸಂಘಟನೆ ಮಾಡಬೇಕು. ಹೇಗೆ ಪಕ್ಷವನ್ನು ಒಳ್ಳೆಯ ರೀತಿ ಕಟ್ಟಬೇಕೆಂಬ ಬಗ್ಗೆ ಅಂಶಗಳು ಚರ್ಚೆ ಆಗಿವೆ. ಪಕ್ಷ ಸಂಘಟನೆ ವೇಳೆ ಸ್ವಲ್ಪ ವ್ಯತ್ಯಾಸಗಳನ್ನು ಹೊಟ್ಟೆಯಲ್ಲಿ ಇಟ್ಟುಕೊಂಡು ಪಕ್ಷದ ಹಿತದೃಷ್ಟಿಯಿಂದ ನಾವೆಲ್ಲ ಒಳ್ಳೆಯ ನಿರ್ಧಾರ ತೆಗೆದುಕೊಳ್ಳುತ್ತೇವೆ. ಬೇಡಿಕೆಯೂ ಇಲ್ಲ. ದೂರುಗಳೂ ಇಲ್ಲ. ಇದು ಪ್ರಬುದ್ಧ ನಾಯಕರ ನಡುವಿನ ಚರ್ಚೆ ಅಷ್ಟೇ ಎಂದು ನುಡಿದಿದ್ದಾರೆ.

## ಮುಖ್ಯಮಂತ್ರಿಗಳ ಮಾಧ್ಯಮ ಕಾರ್ಯದರ್ಶಿಗಳ ನೇಮಕ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಚಿವಾಲಯಕ್ಕೆ ಮೂವರು ಪತ್ರಕರ್ತರನ್ನು ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ-1 ಆಗಿ ಹಿರಿಯ ಪತ್ರಕರ್ತರಾದ ಪಿ.ತ್ಯಾಗರಾಜ್, ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ-2 ಆಗಿ ಆರ್.ಜಯಪ್ರಕಾಶ್ ಹಾಗೂ ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ-3 ಆಗಿ ರಾಘವೇಂದ್ರ ಭಟ್ ಅವರನ್ನು ನೇಮಕ ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶಿಸಿದೆ.

ಈ ಸಂಬಂಧ ನಿನ್ನೆ ಅಧಿಕೃತ ಆದೇಶ ಹೊರಡಿಸಲಾಗಿದ್ದು, ತಕ್ಷಣದಿಂದಲೇ ಜಾರಿಗೆ ಬಂದಿದೆ.

ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಒಂದು ತಿಂಗಳ ನಂತರ ಈ ಆದೇಶ ಹೊರಡಿಸಲಾಗಿದೆ.

## ಒಂದೆರಡು ವಾರದಲ್ಲಿ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆ : ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು



ಒಂದೆರಡು ವಾರದಲ್ಲಿ ಪೂರ್ಣ ಪ್ರಮಾಣದ ಸಂಪುಟ ವಿಸ್ತರಣೆಯಾಗಲಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೂರ್ಣಪ್ರಮಾಣದಲ್ಲಿ ಸಂಪುಟ ವಿಸ್ತರಣೆ ಮಾಡುವುದಾಗಿ ಮುಖ್ಯಮಂತ್ರಿಯವರೇ ಹೇಳಿದ್ದಾರೆ. ಸರ್ಕಾರ ನಡೆಯಲು ಅಧಿಕಾರ ವಿಕೇಂದ್ರೀಕರಣವಾಗಬೇಕು. ಎಲ್ಲರಿಗೂ ಅನುಕೂಲವಾಗಬೇಕೆಂದು ಎಂದರು. ಕಾಂಗ್ರೆಸ್ ನವರು ಒಟ್ಟಿಗೆ ಕಾಫಿ ಕುಡಿದರೂ ಪ್ರತ್ಯೇಕ ಸಭೆಯೆಂದು ಬಿಂಬಿಸಲಾಗುತ್ತದೆ. ಒಟ್ಟಾಗಿ ಊಟ ಮಾಡಲು ಯಾವುದಾದರೂ ನಿರ್ಬಂಧವಿದೆಯೇ? ಮಲ್ಲಿಕಾರ್ಜುನ ಖರ್ಗೆಯವರು ನನ್ನ ತಂದೆ. ದೆಹಲಿಗೆ ಹೋದಾಗ ನಾನು ಮನೆಗೆ ಹೋದರೆ, ಪ್ರಿಯಾಂಕ ಖರ್ಗೆಯಿಂದ ಎಐಸಿಸಿ ಅಧ್ಯಕ್ಷರ ಭೇಟಿ ಎಂದು ವರದಿ ಪ್ರಕಟವಾಗುತ್ತದೆ. ನಾನು ವಾಸವಿರುವುದು ಅವರ ಮನೆಯಲ್ಲೇ. ಈ ರೀತಿಯ ಸುದ್ದಿಗಳಿಗೆ ಏನೆಂದು ಸ್ಪಷ್ಟನೆ ನೀಡಬೇಕು ಎಂದರು.


ಜಾಗತಿಕ ಹೂಡಿಕೆ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸ್ಥಾಪಿಸುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಇದು ಎನ್‌ಐಆರ್‌ಗೆ ಸಂಬಂಧಪಟ್ಟ ವಿಷಯ ಅಲ್ಲ. ಬಂಡವಾಳ ಹೂಡಿಕೆ, ಉದ್ಯೋಗವಕಾಶಕ್ಕೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಸದ್ಯಕ್ಕೆ ಈ ವಿಚಾರಗಳನ್ನು ಬೇರೆ ಬೇರೆ ಇಲಾಖೆಗಳು ನಿರ್ವಹಣೆ ಮಾಡುತ್ತಿವೆ. ಹೊಸ ಇಲಾಖೆ ರಚಿಸುವುದರಿಂದ ಯಾವುದೇ ಇಲಾಖೆ ಅಧಿಕಾರ ವ್ಯಾಪ್ತಿಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಲಾಗುವುದು. ಶಿಷ್ಟಾಚಾರ ಮತ್ತು ನೀತಿಗಳಿಗೂ ತೊಂದರೆಯಾಗದಂತೆ ಮತ್ತು ಗಡಿ ರೇಖೆ ಮೀರದಂತೆ ಇಲಾಖೆ ರೂಪಿಸಬೇಕು ಎಂದರು. ಕೃಷಿಸಾಲ ಮನ್ನಾ ಮಾಡಲಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಕೇಂದ್ರ ಸರ್ಕಾರದಿಂದ ಹೆಚ್ಚಿನ ಹಣ ಕೊಡಿಸಲಿ, ಪ್ರಧಾನಮಂತ್ರಿಯವರು ಈ ಬಗ್ಗೆ ಗಮನ ಹರಿಸಿ ರಾಷ್ಟ್ರ ಮಟ್ಟದಲ್ಲಿ ನಿರ್ಧಾರ ತೆಗೆದುಕೊಳ್ಳಲಿ ಎಂದರು.

ವಿಬಿಜಿ-ರಾಮ್‌ಜಿ ಯೋಜನೆಗೂ ರಾಜ್ಯ ಸರ್ಕಾರವೇ ಹಣ ಕೊಡಬೇಕು. ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳಿಗೂ ರಾಜ್ಯ ಪಾಲುದಾರರಾಗಬೇಕು, ಸಾಲ ಮನ್ನಾವನ್ನು ರಾಜ್ಯವೇ ಮಾಡಬೇಕು. ಹಾಗಿದ್ದರೆ ಕೇಂದ್ರ ಸರ್ಕಾರದ ಜವಾಬ್ದಾರಿ ಏನು? ಎಂದರು. ಯಡಿಯೂರಪ್ಪರವರು ಮುಖ್ಯಮಂತ್ರಿಯಾಗಿದ್ದಾಗ ಸಾಲ ಮನ್ನಾ ಮಾಡಲು ಒತ್ತಾಯಿಸಲಾಯಿತು. ನಾವು ನೋಟು ಮುದ್ರಿಸುವ ಯಂತ್ರ ಇಟ್ಟಿಲ್ಲ ಎಂದು ಯಡಿಯೂರಪ್ಪ ಪ್ರತ್ಯುತ್ತರಿಸಿದ್ದರು. ಬರ ನಿರ್ವಹಣೆಗೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಹೆಚ್ಚಿನ ನೆರವು ನೀಡಬೇಕಿದೆ ಎಂದು ಅವರು ಆಗ್ರಹಿಸಿದ್ದಲ್ಲದೇ, ರೈತರ ಸಾಲ ಮನ್ನಾಗೆ ದೆಹಲಿಗೆ ಹೋಗಿ ಪ್ರಧಾನಿಯವರ ಮೇಲೆ ಬಿಜೆಪಿಯವರು ಒತ್ತಡ ಹಾಕಲಿ. ಕೇವಲ ಮನ್‌ಕೀಬಾತ್ ಕೇಳಿಕೊಂಡು ಕುಳಿತುಕೊಳ್ಳಬೇಡಿ ಎಂದರು.

ರಾಜ್ಯದಲ್ಲಿ ನಡೆದಿರುವ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯನ್ನು ಜಾರಿಗೊಳಿಸಬೇಕೆಂದು ಬಿಜೆಪಿಯವರು ಒತ್ತಾಯಿಸುತ್ತಿದ್ದಾರೆ. ಉಪದೇಶ ಮಾಡುವುದನ್ನು ಬಿಟ್ಟು, ಬಿಜೆಪಿಯ ಆಡಳಿತದಲ್ಲಿರುವ ರಾಜ್ಯಗಳಲ್ಲೂ ಸಮೀಕ್ಷೆ ಮಾಡಲಿ ಎಂದು ಸವಾಲು ಹಾಕಿದರು.ಎಂಇಎಸ್‌ಗೆ ಮಹಾರಾಷ್ಟ್ರ ಸರ್ಕಾರ ಬೆಂಬಲ ನೀಡುವುದಕ್ಕೆ ತೀವ್ರ ಅಸಮಾಧಾನ ಪಡಿಸಿದ ಅವರು, ರಾಜ್ಯದ ನೆಲ, ಜಲ, ಭಾಷೆಯ ವಿಚಾರದಲ್ಲಿ ಸೂಕ್ಷ್ಮತೆಯಿಂದಿರಬೇಕು ಎಂದರು.

## ಒಂದೇ ದಿನ ಆಲಮಟ್ಟಿಗೆ 11 ಟಿಎಂಸಿ ನೀರು ಲಿಂಗನಮಕ್ಕಿ, ಭದ್ರಾದ ಮಟ್ಟವೂ ಏರಿಕೆ

• ಉದಯವಾಹಿನಿ, ಬೆಂಗಳೂರು



ಕರ್ನಾಟಕ ಹಾಗೂ ಮಹಾರಾಷ್ಟ್ರದ ಮಲೆನಾಡು ಭಾಗದಲ್ಲಿ ಉತ್ತಮ ಮಳೆ ಸುರಿದು ಹಲವು ಜಲಾಶಯಗಳಿಗೆ ಹೆಚ್ಚಿನ ನೀರು ಒಂದೇ ದಿನದಲ್ಲಿ ಹರಿದು ಬಂದಿದೆ. ವಿಜಯಪುರ ಜಿಲ್ಲೆ ಆಲಮಟ್ಟಿಯ ಲಾಲ್ ಬಹದ್ದೂರು ಶಾಸ್ತ್ರಿ ಜಲಾಶಯಕ್ಕೆ ಅತ್ಯಧಿಕ 11 ಟಿಎಂಸಿ ನೀರು ಒಂದೇ ದಿನದಲ್ಲಿ ಹರಿದಿದೆ. ಲಿಂಗನಮಕ್ಕಿ ಜಲಾಶಯಕ್ಕೆ 3 ಟಿಎಂಸಿ ನೀರು ಹರಿದು ಬಂದರೆ, ಭದ್ರಾ, ಹೇಮಾವತಿ ಹಾಗೂ ಕಬಿನಿ ಜಲಾಶಯಗಳಿಗೆ ತಲಾ 2 ಟಿಎಂಸಿಯಷ್ಟು ನೀರು ಬಂದಿದೆ.

14 ಜಲಾಶಯಗಳಲ್ಲಿ ಗುರುವಾರ ಬೆಳಿಗ್ಗೆ ಹೊತ್ತಿಗೆ 277 ಟಿಎಂಸಿ ನೀರು ಸಂಗ್ರಹವಾಗಿದೆ. ಒಟ್ಟು ಸಾಮರ್ಥ್ಯದಲ್ಲಿ ಶೇ 31ರಷ್ಟು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಎಲ್ಲಾ ಜಲಾಶಯಗಳಲ್ಲಿ 617.44 ಟಿಎಂಸಿ ನೀರು ಸಂಗ್ರಹವಿತ್ತು. 895.65 ಟಿಎಂಸಿ ನೀರನ್ನು ಜಲಾಶಯಗಳಲ್ಲಿ ಸಂಗ್ರಹಿಸಲು ಅವಕಾಶವಿದೆ.

ಆಲಮಟ್ಟಿ ಜಲಾಶಯಕ್ಕೆ ಈಗಲೂ 1,31, 940 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದ ಮಟ್ಟವು ಸದ್ಯ 512.56 ಮೀಟರ್‌ಗೆ ತಲುಪಿದೆ. ಜಲಾಶಯದಲ್ಲಿ 519.60 ಮೀಟರ್ ಸಂಗ್ರಹಿಸಬಹುದು. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 517.19 ಮೀಟರ್ ನೀರು ಸಂಗ್ರಹವಿತ್ತು. ಸದ್ಯ ಜಲಾಶಯದಲ್ಲಿ 44.70 ಟಿಎಂಸಿ ನೀರು ಸಂಗ್ರಹವಿದೆ. ಕಳೆದ ವರ್ಷ 87.23 ಟಿಎಂಸಿ ನೀರು ಇತ್ತು. ಇಲ್ಲಿ 123.08 ಟಿಎಂಸಿ ನೀರು ಸಂಗ್ರಹಿಸಬಹುದು. ಜಲಾಶಯ ಶಿವಮೊಗ್ಗದ ಲಿಂಗನಮಕ್ಕಿ ಜಲಾಶಯಕ್ಕೆ ಸದ್ಯ 36,867 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಎರಡು ದಿನಕ್ಕೆ ಹೋಲಿಸಿದರೆ ಒಳಹರಿವುದು ತಗ್ಗಿದೆ. ಜಲಾಶಯದಲ್ಲಿ ಈಗ 28.59 ಟಿಎಂಸಿ ನೀರು ಸಂಗ್ರಹವಿದೆ. ಕಳೆದ ವರ್ಷ 86.14 ಟಿಎಂಸಿ ನೀರು ಸಂಗ್ರಹವಿತ್ತು. ಇಲ್ಲಿ 151.75 ಟಿಎಂಸಿ ನೀರು ಸಂಗ್ರಹಿಸಬಹುದು. 1819.12 ಅಡಿ ನೀರು ಸಂಗ್ರಹಿಸಲು ಅವಕಾಶವಿದ್ದು. ಸದ್ಯ 1760.85 ಅಡಿ ನೀರಿದೆ. ಕಳೆದ ವರ್ಷ 1795.90 ಅಡಿ ನೀರಿತ್ತು. ಈಗ ಜಲಾಶಯವು ಶೇ 19ರಷ್ಟು ಮಾತ್ರ ತುಂಬಿದೆ.

## ಬರಗಾಲ-ಪ್ರವಾಹ ಸಂತ್ರಸ್ತ ರೈತರಿಗೆ ತುರ್ತು ಪರಿಹಾರ ನೀಡುವಂತೆ ರಾಜ್ಯ ಸರ್ಕಾರಕ್ಕೆ ಅಶೋಕ್ ಒತ್ತಾಯ

### ಸಂಕಷ್ಟದಲ್ಲಿರುವ ಲಕ್ಷಾಂತರ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಕುಟುಂಬಗಳು ಸರ್ಕಾರದ ತುರ್ತು ನೆರವು ನಿರೀಕ್ಷಿಸುತ್ತಿದ್ದಾರೆ.

• ಉದಯವಾಹಿನಿ, ಬೆಂಗಳೂರು



ಬರಗಾಲ ಮತ್ತು ಪ್ರವಾಹದಿಂದ ಸಂತ್ರಸ್ತರಾಗಿರುವ ರೈತರ ನೆರವಿಗೆ ರಾಜ್ಯ ಸರ್ಕಾರ ಕೂಡಲೇ ಧಾವಿಸಬೇಕೆಂದು ಆಗ್ರಹಿಸಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ್, ತುರ್ತು ಪರಿಹಾರದ ಜೊತೆಗೆ ತಲಾ 50,000 ರೂ.ವರೆಗೆ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಈ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಪತ್ರ ಬರೆದಿರುವ ಅವರು, ಒಂದೆಡೆ ರಾಜ್ಯದ ಹಲವಾರು ಜಿಲ್ಲೆಗಳು ತೀವ್ರ ಬರಗಾಲದಿಂದ ತತ್ತರಿಸಿದ್ದರೆ, ಮತ್ತೊಂದೆಡೆ ಉತ್ತರ ಕರ್ನಾಟಕ ಹಾಗೂ ಮಲೆನಾಡು ಭಾಗಗಳಲ್ಲಿ ಅತಿವೃಷ್ಟಿ, ಪ್ರವಾಹದ ಆತಂಕ ಎದುರಾಗಿದೆ.

ಸಂಕಷ್ಟದಲ್ಲಿರುವ ಲಕ್ಷಾಂತರ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಕುಟುಂಬಗಳು ಸರ್ಕಾರದ ತುರ್ತು ನೆರವು ನಿರೀಕ್ಷಿಸುತ್ತಿದ್ದಾರೆ. ಇತ್ತೀಚೆಗೆ ತಾವು ಬರಪೀಡಿತ ರೈತರ ಸಾಲಮನ್ನಾ ಕುರಿತು ಪರಿಶೀಲಿಸುವುದಾಗಿ ಹೇಳಿಕೆ ನೀಡಿದ್ದೀರಿ. ಆದರೆ ರೈತರಿಗೆ ಈಗ ಬೇಕಾಗಿರುವುದು ಪರಿಶೀಲನೆ ಅಲ್ಲ, ತಕ್ಷಣದ ನಿರ್ಧಾರ. ವಿಳಂಬ ಮಾಡದೆ ಬರ ಮತ್ತು ಪ್ರವಾಹದಿಂದ ಸಂತ್ರಸ್ತರಾಗಿರುವ ರೈತರಿಗೆ 50,000 ವರೆಗೆ ಸಾಲಮನ್ನಾ ಘೋಷಿಸಿ ಅವರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಆಗ್ರಹಿಸಿದ್ದಾರೆ.

ಕೆಪಿಸಿಸಿ ಸರ್ವಸದಸ್ಯರ ಸಭೆಯಲ್ಲಿ ಬರ ಪರಿಹಾರ ಕಾರ್ಯಕ್ಕಾಗಿ 10 ಸಾವಿರ ಕೋಟಿ ರೂ. ಮೊತ್ತವನ್ನು ಕೇಂದ್ರ ಸರ್ಕಾರ ಕೂಡಲೇ ಬಿಡುಗಡೆ ಮಾಡಬೇಕೆಂದು ಮಾಡಿರುವ ನಿರ್ಣಯ ಬೇಜವಾಬ್ದಾರಿಯುತ ಮತ್ತು ದುರದೃಷ್ಟಕರ. ರಾಜ್ಯ ಸರ್ಕಾರ ತನ್ನ ವೈಫಲ್ಯ ಮುಚ್ಚಿಹಾಕಲು, ಹಾಗೂ ರೈತರ ಗಮನ ಬೇರೆಡೆ ಸೆಳೆಯಲು ಕೇಂದ್ರದ ವಿರುದ್ಧ ರಾಜಕೀಯ ನಿರ್ಣಯ ಅಂಗೀಕರಿಸಿರುವುದು ಖಂಡನೀಯ. ಪ್ರಕೃತಿ ವಿಕೋಪವನ್ನು ಎದುರಿಸುವ ಸಂದರ್ಭದಲ್ಲೂ ರಾಜಕೀಯ ಲಾಭ-ನಷ್ಟದ ಲೆಕ್ಕಾಚಾರ ಮಾಡುವ ಮನಸ್ಥಿತಿ ಈ ನಿರ್ಣಯದಲ್ಲಿ ಪ್ರತಿಫಲಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬರ ನಿರ್ವಹಣೆ, ಬೆಳೆಹಾನಿ ಸಮೀಕ್ಷೆ, ಎಸ್‌ಡಿಆರ್ ಎಫ್ ನಿಧಿಯ ಸಮರ್ಪಕ ಬಳಕೆ, ರೈತರಿಗೆ ಮಧ್ಯಂತರ ಪರಿಹಾರ ವಿತರಣೆ ಹಾಗೂ ಕೇಂದ್ರ ಸರ್ಕಾರಕ್ಕೆ ಕಾಲಮಿತಿಯೊಳಗೆ ಸಮಗ್ರ ವರದಿ ಸಲ್ಲಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿ. ಇದನ್ನು ಸಮರ್ಪಕವಾಗಿ ನಿರ್ವಹಿಸುವ ಬದಲು ತನ್ನ ಆಡಳಿತ ವೈಫಲ್ಯ ಮರೆಮಾಚಲು ಕೇಂದ್ರ ಸರ್ಕಾರದ ವಿರುದ್ಧ ಆರೋಪಗಳ ನಿರ್ಣಯ ಕೈಗೊಂಡಿರುವುದು ರಾಜ್ಯದ ರೈತರಿಗೆ ಮಾಡುವ ದೊಡ್ಡ ದ್ರೋಹ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕರ್ನಾಟಕವು ವಿಪತ್ತು ನಿರ್ವಹಣೆ ಮತ್ತು ಪರಿಹಾರಕ್ಕಾಗಿ ಕೇಂದ್ರ ಸರ್ಕಾರದಿಂದ ದಾಖಲೆ ಪ್ರಮಾಣದ ನೆರವು ಪಡೆದಿದೆ. ಕಳೆದ 12 ವರ್ಷಗಳಲ್ಲಿ ಎನ್‌ಡಿಆರ್‌ಎಫ್‌ನಡಿ 12,542.97 ಕೋಟಿಗೂ ಅಧಿಕ ನೆರವು ರಾಜ್ಯಕ್ಕೆ ಬಿಡುಗಡೆಯಾಗಿದೆ.

ಇದರ ಜೊತೆಗೆ ಎಸ್‌ಡಿಆರ್‌ಎಫ್‌ನಡಿ ಕೇಂದ್ರದ ಪಾಲಿನ 3,806.30 ಕೋಟಿ ರೂ. ನಿಯಮಾನುಸಾರ ನಿರಂತರವಾಗಿ ಬಿಡುಗಡೆ ಮಾಡಲಾಗಿದೆ. ಎನ್‌ಡಿಆರ್‌ಎಫ್ ನೆರವು ಯಾವುದೇ ಸರ್ಕಾರದ ಇಚ್ಛೆಯಂತೆ ಬಿಡುಗಡೆಯಾಗುವುದಿಲ್ಲ. ರಾಜ್ಯ ಸರ್ಕಾರ ಸಮಗ್ರ ಸಮೀಕ್ಷೆ ನಡೆಸಿ ಕೇಂದ್ರ ಸರ್ಕಾರಕ್ಕೆ ವರದಿ ಸಹಿತ ಮನವಿ ಸಲ್ಲಿಸಬೇಕು. ಆ ನಂತರ ಇದೇ ರೀತಿ ಇತರೆ ರಾಜ್ಯಗಳು ಸಲ್ಲಿಸಿರುವ ಎಲ್ಲಾ ಅರ್ಜಿಗಳನ್ನು ಒಟ್ಟುಗೂಡಿಸಿ ಕೇಂದ್ರದ ಗೃಹ ಸಚಿವರ ನೇತೃತ್ವದ ಸಮಿತಿ ಸಭೆ ನಿಯಮಾನುಸಾರ ರಾಜ್ಯಗಳಿಗೆ ಕಾನೂನುಬದ್ಧ ಪ್ರಕ್ರಿಯೆಯಂತೆ ನೆರವು ಬಿಡುಗಡೆ ಮಾಡುತ್ತದೆ. ಅಲ್ಲಿಯವರೆಗೆ ಎಸ್‌ಡಿಆರ್‌ಎಫ್ ನಿಧಿ ಬಳಸಿಕೊಂಡು ರೈತರಿಗೆ ತಕ್ಷಣದ ಪರಿಹಾರ ನೀಡುವುದು ರಾಜ್ಯ ಸರ್ಕಾರದ ಮೊದಲ ಕರ್ತವ್ಯ. ಈ ಮೂಲಭೂತ ಸತ್ಯವನ್ನು ಉದ್ದೇಶಪೂರ್ವಕವಾಗಿ ಮರೆಮಾಚುತ್ತಿರುವ ಕೆಪಿಸಿಸಿ ನಡೆ ಅತ್ಯಂತ ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಬೇಡಿಕೆಗಳು**

ಸರ್ಕಾರ ಕೂಡಲೇ ಬರ ಮತ್ತು ಪ್ರವಾಹದಿಂದ ಸಂಕಷ್ಟಕ್ಕೊಳಗಾದ ಎಲ್ಲಾ ರೈತರಿಗೆ ಕನಿಷ್ಠ 50,000 ವರೆಗೆ ಸಾಲ ಮನ್ನಾ ಘೋಷಿಸಬೇಕು, ಎಸ್‌ಡಿಆರ್ ಎಫ್ ನಿಧಿಯಿಂದ ತಕ್ಷಣ ಮಧ್ಯಂತರ ಪರಿಹಾರ ಬಿಡುಗಡೆ ಮಾಡಿ ಯಾವುದೇ ರೈತ ನೆರವಿನಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು, ಪ್ರತಿ ತಾಲ್ಲೂಕಿನಲ್ಲಿ ಸ್ಥಳೀಯ ಶಾಸಕರ ನೇತೃತ್ವದಲ್ಲಿ ವಿಶೇಷ ಟಾಸ್ಕ್ ಫೋರ್ಸ್ ರಚಿಸಿ ಬೆಳೆಹಾನಿ ಸಮೀಕ್ಷೆ, ಪರಿಹಾರ ವಿತರಣೆ ಹಾಗೂ ಪುನರ್ವಸತಿ ಕಾರ್ಯಗಳ ಮೇಲ್ವಿಚಾರಣೆ ನಡೆಸಬೇಕು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14,444/Gram 24ct ₹13,240/Gram 22ct ಬೆಳ್ಳಿ: ₹235.00/Gram

## ರಾಜ್ಯದ ಏಳು ಜಿಲ್ಲೆಗಳಿಗೆ ಇಂದು ಯೆಲ್ಲೋ ಅಲರ್ಟ್; ಗುಡುಗುಸಹಿತ ಮಳೆ ಸಾಧ್ಯತೆ!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದ ಕರಾವಳಿ ಜಿಲ್ಲೆಗಳು, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು ಸೇರಿ 7 ಜಿಲ್ಲೆಗಳಿಗೆ ಹವಾಮಾನ ಇಲಾಖೆಯು ಇಂದು ಯೆಲ್ಲೋ ಅಲರ್ಟ್ ಘೋಷಿಸಿದ್ದು, ಗುಡುಗುಸಹಿತ ಮಳೆಯಾಗುವ ಸಾಧ್ಯತೆ ಇದೆ.

ಇನ್ನು ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 24 ಗಂಟೆಗಳ ಕಾಲ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ಇರಲಿದ್ದು, ಕೆಲವು ಪ್ರದೇಶಗಳಲ್ಲಿ ಗಂಟೆಗೆ 50-60 ಕಿ.ಮೀ ವೇಗದಲ್ಲಿ ಗಾಳಿಯೊಂದಿಗೆ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 29 ಮತ್ತು 21ಇರುವ ಸಾಧ್ಯತೆಯಿದೆ. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಇಂದು ಒಂದು ಅಥವಾ ಎರಡು ಸ್ಥಳಗಳಲ್ಲಿ ನಿರಂತರ ಗಾಳಿಯೊಂದಿಗೆ (40-50ಕಿ.ಮೀ.) ಭಾರೀ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲ್ಬುರ್ಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ನಿರಂತರ ಗಾಳಿಯೊಂದಿಗೆ (40-50 ಕಿಮೀ) ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಮತ್ತು ಕೊಡಗು ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ನಿರಂತರ ಗಾಳಿಯೊಂದಿಗೆ (40-50 ಕಿಮೀ) ಭಾರೀ ಮಳೆಯಾಗುವ ಸಾಧ್ಯತೆಯಿದೆ.

## ವ್ಯಾಪಾರಸ್ಥರ ನೆರವಿಗಾಗಿ ಮೆಟಾ ಬಿಸಿನೆಸ್ ಏಜೆಂಟ್ ಎಐ ತಂತ್ರಜ್ಞಾನ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಜಾಗತಿಕ ತಂತ್ರಜ್ಞಾನ ದೈತ್ಯ ಮೆಟಾ ಮಾಲೀಕತ್ವದ ಪ್ರಸಿದ್ಧ ಮೆಸೇಜಿಂಗ್ ಆ್ಯಪ್ ವಾಟ್ಸಾಪ್, ಮುಂಬೈನಲ್ಲಿ ನಡೆದ ತನ್ನ ಮೂರನೇ ವಾರ್ಷಿಕ ಬಿಸಿನೆಸ್ ಶೃಂಗಸಭೆಯಲ್ಲಿ ಉದ್ಯಮಿ ಗಳಿಗಾಗಿ ಅತ್ಯಾಧುನಿಕ ಎಐ ತಂತ್ರಜ್ಞಾನ ಆಧಾರಿತ ಮೆಟಾ ಬಿಸಿನೆಸ್ ಏಜೆಂಟ್ ಅನ್ನು ಅಧಿಕೃತ ವಾಗಿ ಬಿಡುಗಡೆ ಮಾಡಿದೆ. ಈ ತಂತ್ರಜ್ಞಾನವು ಪ್ರತಿಯೊಂದು ಸಣ್ಣ ಮತ್ತು ದೊಡ್ಡ ವ್ಯವಹಾರ ಸಂಸ್ಥೆಗಳು ದಿನದ 24 ಗಂಟೆಯೂ, ವಾರದ ಏಳೂ ದಿನಗಳ ಕಾಲ ಗ್ರಾಹಕರಿಗೆ ನಿರಂತರ ಸೇವೆ ನೀಡಲು ಸಹಾಯ ಮಾಡಲಿದೆ.

ಇದರೊಂದಿಗೆ, ಬೃಹತ್ ಉದ್ಯಮಗಳು ತಮ್ಮದೇ ಆದ ಕಸ್ಟಮೈಸ್ಡ್ ಬಿಸಿನೆಸ್ ಏಜೆಂಟ್ ಗಳನ್ನು ದೊಡ್ಡ ಮಟ್ಟದಲ್ಲಿ ನಿರ್ಮಿಸಲು ಮತ್ತು ಕಾರ್ಯಗತಗೊಳಿಸಲು ಅಗತ್ಯವಿರುವ ಮೂಲಸೌಕರ್ಯ ಒದಗಿಸುವ ಮೆಟಾ ಬಿಸಿನೆಸ್ ಏಜೆಂಟ್ ಪ್ಲಾಟ್ ಫಾರ್ಮ್ ಅನ್ನು ಸಹ ಕಂಪನಿ ಬಿಡುಗಡೆ ಮಾಡಿದೆ. ಮೆಟಾ ಸಂಸ್ಥೆಯ ಪ್ರಕಾರ, ಈ ಹೊಸ ಮೆಟಾ ಬಿಸಿನೆಸ್ ಏಜೆಂಟ್ ತಂತ್ರಜ್ಞಾನವು ಪ್ರತಿಯೊಬ್ಬ ಗ್ರಾಹಕನಿಗೆ ಪ್ರತಿ ಕ್ಷಣದಲ್ಲೂ ತಕ್ಷಣವೇ ಸ್ಪಂದಿಸುವಂತೆ ವ್ಯವಹಾರಗಳನ್ನು ಸಜ್ಜುಗೊಳಿಸುತ್ತದೆ. ಇದು ಕಂಪನಿಯೊಂದರ ಹಿಂದೆ ಒಂದು ಬೃಹತ್ ಅಥವಾ ಅನಂತ ಉದ್ಯೋಗಿಗಳ ತಂಡವೇ ಕೆಲಸ ಮಾಡುತ್ತಿರುವಂತಹ ಅನುಭವವನ್ನು ನೀಡುತ್ತದೆ. ವ್ಯಾಪಾರಸ್ಥರು ತಮ್ಮ ಗ್ರಾಹಕರಿಗೆ ಅತ್ಯಂತ ವೇಗವಾದ ಹಾಗೂ ಹೆಚ್ಚು ವೈಯಕ್ತಿಕಗೊಳಿಸಿದ ಗ್ರಾಹಕ ಸೇವಾ ಅನುಭವವನ್ನು ನೀಡಲು ಇದನ್ನು ವಿನ್ಯಾಸಗೊಳಿಸಲಾಗಿದೆ.

> ಗ್ರಾಹಕರ ಪ್ರಮುಖ ಪ್ರಶ್ನೆಗಳು ಮತ್ತು ಸಂವಹನಗಳನ್ನು ಆರಂಭದಿಂದ ಕೊನೆಯವರೆಗೆ ಯಶಸ್ವಿಯಾಗಿ ನಿರ್ವಹಿಸುವ ಸಾಮರ್ಥ್ಯವನ್ನು ಇದು ಹೊಂದಿದ್ದು, ಪ್ರಮುಖವಾಗಿ ಈ ಕೆಳಗಿನ ಸೇವೆಗಳನ್ನು ದಿನದ 24 ಗಂಟೆಯೂ ಒದಗಿಸಲಿದೆ.

## ಸ್ಪಾರ್ಕ್ಸ್‌ನಿಂದ ಚಂಕಿ ಸೋಲ್ ಸ್ಯಾಂಡಲ್ಸ್ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಇಂದಿನ ಫ್ಯಾಷನ್ ಕೇವಲ ನೀವು ಏನನ್ನು ಧರಿಸುತ್ತೀರಿ ಎಂಬುದರ ಬಗ್ಗೆ ಮಾತ್ರವಲ್ಲ, ನೀವು ಜಗತ್ತಿನಲ್ಲಿ ಹೇಗೆ ಆತ್ಮವಿಶ್ವಾಸದಿಂದ ಹೆಜ್ಜೆ ಇಡುತ್ತೀರಿ ಎಂಬುದರ ಬಗ್ಗೆಯೂ ಆಗಿದೆ. ಒಂದು ಕಾಲದಲ್ಲಿ ಕೇವಲ ಫ್ಯಾಷನ್ ರನ್ ವೇಗಳಿಗೆ ಮಾತ್ರ ಸೀಮಿತವಾಗಿದ್ದ ಚಂಕಿ ಸೋಲ್ಸ್ ಇಂದು ದಪ್ಪನಾದ ಆಕರ್ಷಕ ವಿನ್ಯಾಸ ಮತ್ತು ಇಡೀ ದಿನದ ಆರಾಮದಾಯಕತೆಯನ್ನು ಸಲೀಸಾಗಿ ಸಂಯೋಜಿಸಿ ದೈನಂದಿನ ಅತ್ಯಗತ್ಯ ವಸ್ತುವಾಗಿ ಮಾರ್ಪಟ್ಟಿವೆ. ಈ ಜಾಗತಿಕ ಟ್ರೆಂಡ್ ಅನ್ನು ಭಾರತೀಯ ಗ್ರಾಹಕರಿಗೆ ಪರಿಚಯಿಸುತ್ತಾ, ಭಾರತದ ಪ್ರಮುಖ ಯುವ ಫುಟ್ವೇರ್ ಬ್ರಾಂಡ್ ಗಳಲ್ಲಿ ಒಂದಾದ ಸ್ಪಾರ್ಕ್ಸ್ ಹೊಸ ಸ್ಪಾರ್ಕ್ಸ್ ಚಂಕಿ ಸೋಲ್ ಸ್ಯಾಂಡಲ್ಸ್ ಸಂಗ್ರಹವನ್ನು ಮಾರುಕಟ್ಟೆಗೆ ತಂದಿದೆ. ಪಾದರಕ್ಷೆಗಳನ್ನು ತಮ್ಮ ವೈಯಕ್ತಿಕ ಶೈಲಿಯ ಪ್ರತಿಬಿಂಬ ಎಂದು ಭಾವಿಸುವ ಯುವ ಗ್ರಾಹಕರಿಗಾಗಿಯೇ ಇದನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ.

ಆತ್ಮವಿಶ್ವಾಸದ, ಮುಂಚೂಣಿಯಲ್ಲಿರುವ ಈ ಪಾದರಕ್ಷೆಗಳ ಶ್ರೇಣಿಯು, ಎತ್ತರದ ಚಂಕಿ ಸೋಲ್ಸ್ ಮತ್ತು ಆರಾಮದಾಯಕತೆಯನ್ನು ಅದ್ಭುತವಾಗಿ ಸಂಯೋಜಿಸುತ್ತದೆ.

## ಲೋಕಾಯುಕ್ತ ಸಂಸ್ಥೆ ವಿರುದ್ಧ ಅವಹೇಳನಕಾರಿ ಕಾಮೆಂಟ್: ಇಬ್ಬರು ವೈದ್ಯರ ವಿರುದ್ಧ ಕೇಸ್ ದಾಖಲು..!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಾಮಾಜಿಕ ಜಾಲತಾಣದಲ್ಲಿ ಲೋಕಾಯುಕ್ತ ಸಂಸ್ಥೆ ಹಾಗೂ ಉಪ ಲೋಕಾಯುಕ್ತರ ಕುರಿತು ಅವಹೇಳನಕಾರಿ ಕಾಮೆಂಟ್‌ಗಳನ್ನು ಮಾಡಿದ್ದ ಆರೋಪದ ಮೇಲೆ ಇಬ್ಬರು ವೈದ್ಯರ ವಿರುದ್ಧ ಲೋಕಾಯುಕ್ತ ಪೊಲೀಸರು ಪ್ರತ್ಯೇಕ ಪ್ರಕರಣ ದಾಖಲಿಸಿ ನೋಟಿಸ್ ಜಾರಿಗೊಳಿಸಿದ್ದಾರೆ.

ಆರೋಪಿಗಳನ್ನು ವಿಜಯಪುರದ ಆದರ್ಶ ನಗರ ನಿವಾಸಿ ಡಾ. ಅಮಿತ್ ಪುಂಡಲೀಕ್ ಕಾಳೆ ಹಾಗೂ ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಕೌಠಾ (ಬಿ) ಗ್ರಾಮದ ಡಾ. ಸಿದ್ದು ಎಂದು ಗುರುತಿಸಲಾಗಿದೆ.

ಇವರು ಇನ್‌ಸ್ಟಾಗ್ರಾಂನಲ್ಲಿ ವೈರಲ್ ಆಗಿದ್ದ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ವಿಡಿಯೊಗೆ ಅವಹೇಳನಕಾರಿ ಕಾಮೆಂಟ್‌ಗಳನ್ನು ಮಾಡಿದ್ದರು ಎನ್ನಲಾಗಿದೆ.

ಜೂನ್ 19 ಮತ್ತು 20ರಂದು ಬೀದರ್ ಜಿಲ್ಲಾ ಪ್ರವಾಸದ ವೇಳೆ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರು ಬಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದ ಪ್ರಯೋಗಾಲಯ ತಂತ್ರಜ್ಞ ಸಂಜುಕುಮಾರ್ ಅವರ ಬಳಿ ರೂ.90 ಸಾವಿರ ನಗದು, ರೂ.8.61 ಲಕ್ಷ ಮೌಲ್ಯದ ಚೆಕ್‌ಗಳ ದಾಖಲೆಗಳು, 10 ಎಟಿಎಂ ಹಾಗೂ ಕ್ರೆಡಿಟ್ ಕಾರ್ಡ್‌ಗಳು ಪತ್ತೆಯಾಗಿದ್ದವು.

ಈ ಪೈಕಿ ಏಳು ಡೆಬಿಟ್ ಕಾರ್ಡ್‌ಗಳು ಸಂಜುಕುಮಾರ್ ಹೆಸರಿನಲ್ಲಿದ್ದು, ಉಳಿದವು ಅವರ ಪತ್ನಿಯ ಹೆಸರಿನಲ್ಲಿದ್ದವು. ಈ ಬಗ್ಗೆ ಪ್ರಶ್ನಿಸಿದಾಗ ಅವರು ಸಮರ್ಪಕ ಉತ್ತರ ನೀಡದೆ ಅಧಿಕಾರಿಗಳೊಂದಿಗೆ ಅನುಚಿತವಾಗಿ ವರ್ತಿಸಿದ್ದಾರೆ ಎಂದು ವರದಿಯಾಗಿದೆ. ಪರಿಶೀಲನೆ ವೇಳೆ ಆಸ್ಪತ್ರೆಯ ವಾರ್ಡ್‌ಗಳಲ್ಲಿ ರೋಗಿಗಳಿಗೆ ನೀಡಲಾಗುತ್ತಿದ್ದ ದಿಂಬು, ಹಾಸಿಗೆ ಹಾಗೂ ಬೆಡ್‌ಶೀಟ್‌ಗಳು ಹರಿದು ಹೋಗಿದ್ದು, ಕೆಟ್ಟ ಸ್ಥಿತಿಯಲ್ಲಿರುವುದು ಬೆಳಕಿಗೆ ಬಂದಿತ್ತು.

## ಬೆಳಗ್ಗೆಯೇ ಕೆಟ್ಟು ನಿಂತ ಮೆಟ್ರೋ; ಹಸಿರು ಮಾರ್ಗದಲ್ಲಿ ಸಂಚಾರ ವ್ಯತ್ಯಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಹಸಿರು ಮಾರ್ಗದಲ್ಲಿ ತಾಂತ್ರಿಕ ಸಮಸ್ಯೆಯಿಂದಾಗಿ ರೈಲು ಸಂಚಾರದಲ್ಲಿ ವ್ಯತ್ಯಯ ಉಂಟಾಗಿ ಪ್ರಯಾಣಿಕರು ತೀವ್ರ ತೊಂದರೆ ಅನುಭವಿಸಿದ್ದಾರೆ. ಈ ಕುರಿತು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಪ್ರಕಟಣೆ ಹೊರಡಿಸಿ, ತಾಂತ್ರಿಕ ಸಮಸ್ಯೆಯನ್ನು ನಮ್ಮ ತಾಂತ್ರಿಕ ತಂಡ ಆದ್ಯತೆಯ ಮೇರೆಗೆ ಪರಿಹರಿಸುತ್ತಿದ್ದು, ಸಾಧ್ಯವಾದಷ್ಟು ಬೇಗ ಸಾಮಾನ್ಯ ಸೇವೆಯನ್ನು ಪುನಃ ಆರಂಭಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಲಾಗಿದೆ.

ಹಸಿರು ಮಾರ್ಗ ಮೆಟ್ರೋ ಸೇವೆಯಲ್ಲಿ ಪ್ರಸ್ತುತ ವಿಳಂಬ ಉಂಟಾಗಿದೆ. ಸಮಸ್ಯೆಯನ್ನು ತುರ್ತಾಗಿ ಪರಿಹರಿಸಲು ನಮ್ಮ ತಾಂತ್ರಿಕ ಸಿಬ್ಬಂದಿ ಆದ್ಯತೆಯ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದು, ಸಾಧ್ಯವಾದಷ್ಟು ಬೇಗ ಸಾಮಾನ್ಯ ಮೆಟ್ರೋ ಸಂಚಾರವನ್ನು ಪುನಃಸ್ಥಾಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಉಂಟಾದ ಅನಾನುಕೂಲತೆಗೆ ವಿಷಾದಿಸುತ್ತೇವೆ. ಟ್ವೀಟ್ ಮೂಲಕ ತಿಳಿಸಿದೆ. ಆಫೀಸ್‌ಗೆ ಹೊರಡಬೇಕಾದ ಸಮಯದಲ್ಲಿ ಈ ರೀತಿ ಸಮಸ್ಯೆಯಾಗಿದೆ ಎಂದು ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಮರಕ್ಕೆ ಡಿಕ್ಕಿ ಹೊಡೆದು ಧಗಧಗನೆ ಹೊತ್ತಿ ಉರಿದ ಪೆಟ್ರೋಲ್ ಟ್ಯಾಂಕರ್; ಹಾಲಿನ ಲಾರಿಯೂ ಬೆಂಕಿಗಾಹುತಿ

• ಉದಯವಾಹಿನಿ, ದೊಡ್ಡಬಳ್ಳಾಪುರ


ಉದಯವಾಹಿನಿ ಚಿತ್ರ

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ಹೊರವಲಯದಲ್ಲಿ ಪೆಟ್ರೋಲ್ ತುಂಬಿದ್ದ ಟ್ಯಾಂಕರ್ ಲಾರಿಯೊಂದು ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದು ಬೆಂಕಿಗಾಹುತಿಯಾದ ಪರಿಣಾಮ, ಸಮೀಪದಲ್ಲಿದ್ದ ಮತ್ತೊಂದು ಲಾರಿಗೂ ಬೆಂಕಿ ವ್ಯಾಪಿಸಿದ ಘಟನೆ ನಡೆದಿದೆ.

ಈ ಘಟನೆ ದೊಡ್ಡಬೆಳವಂಗಲ ಪೊಲೀಸ್ ಠಾಣೆ ವ್ಯಾಪ್ತಿಯ 11ನೇ ಮೈಲಿ ಸಮೀಪ ಸಂಭವಿಸಿದೆ. ಪೆಟ್ರೋಲ್ ಟ್ಯಾಂಕರ್ ಚಾಲಕ ವಾಹನದ ಮೇಲಿನ ನಿಯಂತ್ರಣ ಕಳೆದುಕೊಂಡು ಮರಕ್ಕೆ ಡಿಕ್ಕಿ ಹೊಡೆದಿದ್ದು, ಡಿಕ್ಕಿಯ ರಭಸಕ್ಕೆ ಟ್ಯಾಂಕರ್‌ಗೆ ಕ್ಷಣಾರ್ಧದಲ್ಲೇ ಬೆಂಕಿ ಹೊತ್ತಿಕೊಂಡಿದೆ.

ಬೆಂಕಿ ವೇಗವಾಗಿ ವ್ಯಾಪಿಸಿ, ಅದೇ ವೇಳೆ ಸಮೀಪದಲ್ಲಿ ರಿವರ್ಸ್ ಮಾಡುತ್ತಿದ್ದ ಹಾಲಿನ ಲಾರಿಗೂ ಹರಡಿದೆ. ಕೆಲವೇ ಕ್ಷಣಗಳಲ್ಲಿ ಎರಡೂ ವಾಹನಗಳು ಸಂಪೂರ್ಣವಾಗಿ ಬೆಂಕಿಗಾಹುತಿಯಾಗಿ ಸುಟ್ಟು ಕರಕಲಾಗಿವೆ. ಆದರೆ, ಬೆಂಕಿ ಕಾಣಿಸಿಕೊಂಡ ತಕ್ಷಣವೇ ಪೆಟ್ರೋಲ್ ಟ್ಯಾಂಕರ್ ಹಾಗೂ ಹಾಲಿನ ಲಾರಿಯ ಚಾಲಕರು ವಾಹನಗಳಿಂದ ಹೊರಗೆ ಜಿಗಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

**ನಗರದ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ಬೆನ್ನಲ್ಲೇ, ನಗರದಲ್ಲಿ ಸಂಚಾರದಟ್ಟಣೆಗೆ ಕಾರಣವಾಗುವ ರಸ್ತೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಅನಾಥವಾಗಿ ನಿಲ್ಲಿಸಲಾಗಿರುವ ವಾಹನಗಳನ್ನು ತೆರವುಗೊಳಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ಸಂಚಾರ ಪೊಲೀಸರು ಜುಲೈ 10ರಿಂದ ಜಂಟಿ ಕಾರ್ಯಾಚರಣೆ ಆರಂಭಿಸಲಿದ್ದಾರೆ. ಜಿಬಿಎ ಕಾಯ್ದೆ-2024ರ ಅನ್ವಯ ಇಂತಹ ವಾಹನಗಳಿಗೆ 7 ದಿನಗಳ ಗಡುವಿನ ಸ್ಟಿಕ್ಕರ್ ನೋಟಿಸ್ ಅಂಟಿಸಿ ವೀಲ್ ಕ್ಲಾಂಪ್ ಹಾಕಲಾಗುತ್ತದೆ. ಈ ಸಮಯದಲ್ಲಿ ವಾಹನಗಳ ಮಾಲೀಕರಿಗೆ ಸ್ವಯಂಪ್ರೇರಿತವಾಗಿ ವಾಹನಗಳನ್ನು ತೆರವುಮಾಡುವ ಅವಕಾಶ ನೀಡಲಾಗುತ್ತಿದೆ. ಈ ಅವಧಿಯಲ್ಲಿ ಮಾಲೀಕರು ತೆರವುಗೊಳಿಸದಿದ್ದರೆ ವಾಹನಗಳನ್ನು ಜಪ್ತಿ ಮಾಡಿ ಬಹಿರಂಗ ಹರಾಜು ಹಾಕಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ.**

# ಫುಟ್‌ಪಾತ್ ವಾಹನ ಜಪ್ತಿಗೆ ಕಠಿಣ ನಿಯಮ ಜಾರಿ..!

## ವಾಹನಗಳ ಮೇಲೆ ಸ್ಟಿಕ್ಕರ್ ಅಂಟಿಸಿ, ಮಾಲೀಕರಿಗೆ 7 ದಿನಗಳ ಕಾಲಾವಕಾಶ ನೀಡಲಾಗುತ್ತದೆ

• ಉದಯವಾಹಿನಿ, ಬೆಂಗಳೂರು

ಸಾರ್ವಜನಿಕ ರಸ್ತೆ, ಖಾಲಿ ಜಾಗ ಹಾಗೂ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಹಲವು ದಿನಗಳಿಂದ ಬಿಟ್ಟುಹೋಗಿರುವ ಅನಾಥ ವಾಹನಗಳ ವಿರುದ್ಧ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜುಲೈ 10ರಿಂದ ನಗರಾದ್ಯಂತ ವಿಶೇಷ ಕಾರ್ಯಾಚರಣೆ ಆರಂಭಿಸುತ್ತಿದೆ.

ಬೆಂಗಳೂರು ಸಂಚಾರ ಪೊಲೀಸರ ಸಹಯೋಗದಲ್ಲಿ ಐದು ನಗರ ನಿಗಮಗಳು ಈ ಕಾರ್ಯಾಚರಣೆಯನ್ನು ನಡೆಸಲಿದ್ದು, ಗುರುತಿಸಲಾದ ವಾಹನಗಳಿಗೆ ನೋಟಿಸ್ ನೀಡಿ, ಬಳಿಕ ಅವುಗಳನ್ನು ವಶಕ್ಕೆ ಪಡೆದು ಹರಾಜು ಪ್ರಕ್ರಿಯೆ ನಡೆಸಲಾಗುತ್ತದೆ.

ಜಿಬಿಎ ಕಾಯ್ದೆ-2024ರ ಸೆಕ್ಷನ್ 324ರ ಅಡಿಯಲ್ಲಿ ಈ ಕಾರ್ಯಾಚರಣೆ ನಡೆಯಲಿದ್ದು, ಜುಲೈ 8ರಂದು ಸಾರ್ವಜನಿಕ ಪ್ರಕಟಣೆ ಹೊರಡಿಸಲಾಗಿದೆ.

ಇತ್ತೀಚೆಗೆ ಪಾದಚಾರಿ ಮಾರ್ಗಗಳನ್ನು ಅತಿಕ್ರಮಣದಿಂದ ಮುಕ್ತಗೊಳಿಸುವ ಉದ್ದೇಶದಿಂದ ಕೈಗೊಂಡಿದ್ದ 'ಸೇಫ್ ಫುಟ್‌ಪಾತ್ ಕ್ಯಾಂಪೇನ್' ಜುಲೈ 10ಕ್ಕೆ ಅಂತ್ಯಗೊಳ್ಳಲಿದ್ದು, ಅದರ ಬೆನ್ನಲ್ಲೇ ಅನಾಥ ವಾಹನಗಳ ತೆರವು ಕಾರ್ಯಾಚರಣೆ ಆರಂಭವಾಗುತ್ತಿದೆ. ಜಿಬಿಎ ಅಧಿಕಾರಿಗಳ ಮಾತನಾಡಿ, ಮೊದಲಿಗೆ ಹಲವು ದಿನಗಳಿಂದ ರಸ್ತೆ, ಖಾಲಿ ಜಾಗ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ನಿಲ್ಲಿಸಿ ಯಾರೂ ಬಳಸದ ವಾಹನಗಳನ್ನು ಗುರುತಿಸಲಾಗುತ್ತದೆ. ನಂತರ ವಾಹನಗಳ ಮೇಲೆ ಸ್ಟಿಕ್ಕರ್ ಅಂಟಿಸಿ, ಮಾಲೀಕರಿಗೆ 7 ದಿನಗಳ ಕಾಲಾವಕಾಶ ನೀಡಲಾಗುತ್ತದೆ. ನೋಟಿಸ್ ಅಂಟಿಸುವ ವೇಳೆ ವಾಹನಕ್ಕೆ ವೀಲ್ ಕ್ಲ್ಯಾಂಪ್ ಅಳವಡಿಸಲಾಗುತ್ತದೆ. ಏಳು ದಿನಗಳೊಳಗೆ ವಾಹನವನ್ನು ತೆರವುಗೊಳಿಸದಿದ್ದರೆ, ಜಿಬಿಎ ಹಾಗೂ ಸಂಚಾರ ಪೊಲೀಸರು ಜಂಟಿಯಾಗಿ ವಾಹನವನ್ನು ಟೋಯಿಂಗ್ ಮಾಡಿ ವಶಕ್ಕೆ ಪಡೆಯಲಿದ್ದಾರೆ. ಕಾರ್ಯಾಚರಣೆಗೆ ಮುನ್ನವೇ ಬೆಂಗಳೂರು ಸಂಚಾರ ಪೊಲೀಸರು ನಗರದ ವಿವಿಧ ಭಾಗಗಳಲ್ಲಿ 1,518 ಅನಾಥ ವಾಹನಗಳನ್ನು ಗುರುತಿಸಿದ್ದಾರೆ.

ಇದರಲ್ಲಿ ಬೆಂಗಳೂರು ಕೇಂದ್ರ ನಗರ ನಿಗಮ ವ್ಯಾಪ್ತಿಯಲ್ಲೇ 403 ವಾಹನಗಳು ಪತ್ತೆಯಾಗಿವೆ. ಈ ವಾಹನಗಳ ಮಾಲೀಕರನ್ನು ಸಂಪರ್ಕಿಸಿ, ಜುಲೈ 10ರೊಳಗೆ ವಾಹನ ತೆರವುಗೊಳಿಸುವಂತೆ ಸೂಚಿಸಲಾಗಿದೆ.

ಈಗಲೇ ವಾಹನ ತೆರವುಗೊಳಿಸಿದರೆ ನೋ-ಪಾರ್ಕಿಂಗ್ ದಂಡ ಮಾತ್ರ ವಿಧಿಸಲಾಗುತ್ತದೆ. ಆದರೆ, ವಾಹನವನ್ನು ಟೋಯಿಂಗ್ ಮಾಡಿದ ಬಳಿಕ ಮಾಲೀಕರು ಟೋಯಿಂಗ್ ಶುಲ್ಕ ಹಾಗೂ ಇತರೆ ದಂಡಗಳನ್ನು ಪಾವತಿಸಿ ವಾಹನವನ್ನು ವಾಪಸ್ ಪಡೆಯಬೇಕಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

1 ಸಾರ್ವಜನಿಕರ ಸಹಕಾರಕ್ಕೂ ಜಿಬಿಎ ಕರೆ
2 ಅನಾಥ ವಾಹನಗಳ ತೆರವು ಕಾರ್ಯಾಚರಣೆ
3 ಜುಲೈ 8ರಂದು ಸಾರ್ವಜನಿಕ ಪ್ರಕಟಣೆ

### ಅನಾಥ ವಾಹನಗಳ ಜಪ್ತಿ, ಸಾರ್ವಜನಿಕ ಹರಾಜು

ಈ ಸಮಯದಲ್ಲಿ ಅದರ ಮಾಲೀಕರು ಅದನ್ನು ತೆರವುಗೊಳಿಸಬಹುದು, ಇಲ್ಲವಾದಲ್ಲಿ ಈ ವಾಹನಗಳನ್ನು ಜಪ್ತಿ ಮಾಡಲಾಗುವುದು. ಅಲ್ಲದೆ, ಹೀಗೆ ಜಪ್ತಿ ಮಾಡಲಾಗಿರುವ ಅನಾಥ ವಾಹನಗಳನ್ನು ನಿಯಮಾನುಸಾರ ಬಹಿರಂಗವಾಗಿ ಹರಾಜು ಹಾಕಲಾಗುವುದು ಎಂದು ಪ್ರಕಟಣೆಯಲ್ಲಿ ಆಯುಕ್ತರು ತಿಳಿಸಿದ್ದಾರೆ.


ಇನ್ನು, ಇದೇ ವೇಳೆ ರಸ್ತೆ, ಪಾದಚಾರಿ ಮಾರ್ಗ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ನಿಮ್ಮ ವಾಹನಗಳನ್ನು ಅನಾಥವಾಗಿ ಬಿಟ್ಟಿದ್ದರೆ, ದಯವಿಟ್ಟು ತಕ್ಷಣವೇ ನಿಮ್ಮ ಸ್ವಂತ ಜಾಗಕ್ಕೆ ಸ್ಥಳಾಂತರಿಸಿ. ನಿಯಮ ಉಲ್ಲಂಘಿಸಿದ ವಾಹನಗಳ ವಿರುದ್ಧ ಜಿಬಿಎ ಕಾಯ್ದೆ2024ರ ಸೆಕ್ಷನ್ 324ರ ಅನ್ವಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ.

**ಸಾರ್ವಜನಿಕರ ಸಹಭಾಗಿತ್ವ** ಈ ಕಾರ್ಯಾಚರಣೆಯಲ್ಲಿ ಸಾರ್ವಜನಿಕರ ಸಹಭಾಗಿತ್ವವನ್ನೂ ಜಿಬಿಎ ಕೋರಿದೆ. ತಮ್ಮ ಪ್ರದೇಶದಲ್ಲಿ ಹಲವು ದಿನಗಳಿಂದ ಬಿಟ್ಟುಹೋಗಿರುವ ವಾಹನಗಳ ಮಾಹಿತಿ ಇದ್ದರೆ, ಬೆಂಗಳೂರು ಟ್ರಾಫಿಕ್ ಪೊಲೀಸರ 'ಸೌಲಭ್ಯದ ಮೂಲಕ ದೂರು ಸಲ್ಲಿಸಬಹುದು ಎಂದು ತಿಳಿಸಿದೆ.

**ಸಾರ್ವಜನಿಕ ಸ್ಥಳಗಳಲ್ಲಿನ ಅನಾಥ ವಾಹನಗಳ ತೆರವು ಕಾರ್ಯ**

> ಈಗಾಗಲೇ ಗುರುತಿಸಿರುವ ವಾಹನಗಳ ಛಾಯಾಚಿತ್ರ ಹಾಗೂ ಜಿಪಿಎಸ್ ಸ್ಥಳ ಮಾಹಿತಿಯನ್ನು ಜಿಬಿಎ ಅಧಿಕಾರಿಗಳಿಗೆ ಹಂಚಿಕೊಳ್ಳಲಾಗಿದೆ. ಇದರಿಂದ ಕಾರ್ಯಾಚರಣೆಯನ್ನು ವೇಗವಾಗಿ ನಡೆಸಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ. – ಡಿಸಿಪಿ ಗೋಪಾಲ್ ಎಂ

> ನಂತರ ನ್ಯಾಯಾಲಯದ ಅನುಮತಿ ಪಡೆದು ವಾಹನಗಳನ್ನು ಸಾರ್ವಜನಿಕ ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತದೆ. ಹರಾಜಿನ ಬಳಿಕ ವಾಹನಗಳ ಮೇಲೆ ಯಾವುದೇ ಹಕ್ಕು ಮಂಡಿಸಲು ಅವಕಾಶ ಇರುವುದಿಲ್ಲ ಎಂದು ಹೇಳಿದ್ದಾರೆ. ಜಿಬಿಎ ಅಧಿಕಾರಿಗಳು



### ವಾಹನಗಳ ಮಾಲೀಕರಿಗೆ ಸ್ಟಿಕ್ಕರ್ ಮಾದರಿಯ ನೋಟಿಸ್

ಇನ್ನು, ಇದರನ್ವಯ ಶುಕ್ರವಾರದಿಂದ ನಗರದ ಪ್ರಮುಖ ರಸ್ತೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಲವಾರು ದಿನಗಳಿಂದ ಯಾವುದೇ ಕಾಳಜಿಯಿಲ್ಲದೆ, ಅನಾಥವಾಗಿ ನಿಲ್ಲಿಸಿಲಾಗಿರುವ ತೆರವುಗೊಳಿಸಲು ಸಿದ್ದತೆ ನಡೆಸಲಾಗುತ್ತದೆ. ಆದರೆ, ಅದಕ್ಕೂ ಮೊದಲು 5 ನಗರ ಪಾಲಿಕೆಗಳಲ್ಲಿ ಗುರುತಿಸಲಾದ ಅನಾಥ ವಾಹನಗಳ ಸ್ವಯಂಪ್ರೇರಿತ ತೆರವಿಗೆ 7 ದಿನಗಳ ಕಾಲಾವಕಾಶ ನೀಡಿ, ಅಧಿಕೃತ ಸ್ಟಿಕ್ಕರ್ ಮಾದರಿಯ ನೋಟಿಸ್‌ಗಳನ್ನು ಅಂಟಿಸಲಾಗುತ್ತದೆ. ನೋಟಿಸ್ ಅಂಟಿಸಿದ ವಾಹನಗಳ ಚಕ್ರಗಳಿಗೆ ವೀಲ್ ಕ್ಲಾಂಪ್ ಹಾಕಲಾಗುತ್ತದೆ.

## ಆರ್‌ಎಸ್‌ಎಸ್ ಕಾರ್ಯಕ್ರಮಕ್ಕೆ ಸರ್ಕಾರದ ಅನುಮತಿ ಅಗತ್ಯವಿಲ್ಲ; ಮೆರವಣಿಗೆ ನಡೆಸಿದರೆ ಮಾತ್ರ ಅನುಮತಿ ಕಡ್ಡಾಯ: ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರ


ಉದಯವಾಹಿನಿ ಚಿತ್ರ

ಬೆಳಗಾವಿಯಲ್ಲಿ ಜುಲೈ 10ರಿಂದ ಆರಂಭವಾಗಲಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಅಖಿಲ ಭಾರತೀಯ ಪ್ರಾಂತ ಪ್ರಚಾರಕ್ ಬೈಠಕ್‌ಗೆ ಸರ್ಕಾರದ ಅನುಮತಿ ಅಗತ್ಯವಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಖಿಲ ಭಾರತೀಯ ಪ್ರಾಂತ ಪ್ರಚಾರಕ್ ಬೈಠಕ್ ಖಾಸಗಿ ಕಾರ್ಯಕ್ರಮವಾಗಿರುವುದರಿಂದ ಸರ್ಕಾರದ ಅನುಮತಿ ಬೇಕಾಗುವುದಿಲ್ಲ. ಆದರೆ, ಸಾರ್ವಜನಿಕ ರಸ್ತೆಯಲ್ಲಿ ಮೆರವಣಿಗೆ ಅಥವಾ ಬೃಹತ್ ಸಾರ್ವಜನಿಕ ಸಮಾವೇಶ ಆಯೋಜಿಸಲು ಬಯಸಿದರೆ ಸ್ಥಳೀಯ ಪೊಲೀಸ್ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು ಎಂದು ಹೇಳಿದ್ದಾರೆ.

ಇದೇ ವೇಳೆ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮಾಡಿರುವ ಆರೋಪಕ್ಕೂ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ. ಹಿಂದೂ ಕಾರ್ಯಕರ್ತ ತೇಜಸ್ ಗೌಡ ಅವರು ತಮ್ಮ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಿರುವ ಹಿನ್ನೆಲೆಯಲ್ಲಿ, ಅವರನ್ನು ಬೆದರಿಸಲು ಪೊಲೀಸರು ಮನೆಗೆ ಹೋಗಿದ್ದರು ಎಂದು ಸಿ.ಟಿ. ರವಿ ಆರೋಪಿಸಿದ್ದರು.

ಇದಕ್ಕೆ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಸಿ.ಟಿ. ರವಿ ಮೊದಲು ನನ್ನ ವಿರುದ್ಧ ದೂರು ದಾಖಲಿಸಲಿ. ನಂತರ ಮಾತನಾಡಲಿ. ಮೊದಲು ಅವರು ತಮ್ಮ ಧ್ವನಿ ಮಾದರಿಯನ್ನು ನೀಡಬೇಕು ಎಂದು ವ್ಯಂಗ್ಯವಾಡಿದರು.


ಬೆಳಗಾವಿ ವಿಧಾನಮಂಡಲ ಅಧಿವೇಶನದ ವೇಳೆ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅವಹೇಳನಕಾರಿ ಪದ ಬಳಕೆ ಮಾಡಿದ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಧ್ವನಿ ಮಾದರಿ ನೀಡುವ ವಿಚಾರವನ್ನು ಉಲ್ಲೇಖಿಸಿ ಅವರು ಈ ಹೇಳಿಕೆ ನೀಡಿದರು.

### 'ವಿಜಯ ದಶಮಿಗೆ ಒಂದು ದಿನ ಚಡ್ಡಿ ಪ್ಯಾಂಟ್ ಹಾಕೋದು ಅಷ್ಟೇ

ವಿಜಯ ದಶಮಿಗೆ ಒಂದು ದಿನ ಚಡ್ಡಿ ಪ್ಯಾಂಟ್ ಹಾಕೋದು ಬಿಟ್ಟರೆ ಬಿಜೆಪಿಯ ಯಾವೊಬ್ಬ ನಾಯಕನ ಮಗನೂ ಆರ್.ಎಸ್.ಎಸ್‌ನಲ್ಲಿ ಪೂರ್ಣ ಪ್ರಚಾರಕರಾಗಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಷ್ಟು ದಿನ ನಾನು ಹೇಳ್ತಾ ಇದ್ದೆ.

## GBA ವ್ಯಾಪ್ತಿಯಲ್ಲಿ ಪ್ರತ್ಯೇಕ SIR: ರಾಜ್ಯ ಸರ್ಕಾರ, SEC, ECIUಗೆ ಹೈಕೋರ್ಟ್ ನೋಟಿಸ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಕೆಲವು ವಾರ್ಡ್‌ಗಳಲ್ಲಿ ರಾಜ್ಯ ಚುನಾವಣಾ ಆಯೋಗ ನಡೆಸುತ್ತಿರುವ ಪ್ರತ್ಯೇಕ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗೆ ಸಂಬಂಧಿಸಿದಂತೆ ಹೈಕೋರ್ಟ್ ರಾಜ್ಯ ಸರ್ಕಾರ, ರಾಜ್ಯ ಚುನಾವಣಾ ಆಯೋಗ ಹಾಗೂ ಭಾರತದ ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಿದೆ.

ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ಪೀಠ, ಪ್ರತಿವಾದಿಗಳು ಜುಲೈ 15ರೊಳಗೆ ಆಕ್ಷೇಪಣೆಗಳ ಹೇಳಿಕೆ ಸಲ್ಲಿಸಬೇಕು ಎಂದು ಸೂಚಿಸಿ ನೋಟಿಸ್ ನೀಡಿದೆ.

ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದ ಮತದಾರರಾದ ವಿವೇಕ್ ಎಂ., ಶ್ರೀನಾಥ್ ಎಂ., ಟಿ. ಮಂಜುನಾಥ, ಸತೀಶ್ ಟಿ.ಆರ್. ಹಾಗೂ ಆನಂದಮೂರ್ತಿ ಕೆ.ಆರ್. ಅವರು ಈ ಅರ್ಜಿ ಸಲ್ಲಿಸಿದ್ದಾರೆ.


ಅರ್ಜಿಯಲ್ಲಿ, ಜೂನ್ 19ರಂದು ಹೊರಡಿಸಿದ ಆದೇಶದ ಆಧಾರದಲ್ಲಿ ರಾಜ್ಯ ಚುನಾವಣಾ ಆಯೋಗವು ಪ್ರತ್ಯೇಕ ನಡೆಸಲು ಯಾವುದೇ ಕಾನೂನುಬದ್ಧ ಅಧಿಕಾರ ಹೊಂದಿಲ್ಲ ಎಂದು ವಾದಿಸಲಾಗಿದೆ. ಭಾರತದ ಚುನಾವಣಾ ಆಯೋಗ ಈಗಾಗಲೇ ದೇಶಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭಿಸಿದ್ದು, ಕರ್ನಾಟಕವನ್ನು ಅದರ ಮೂರನೇ ಹಂತದಲ್ಲಿ ಸೇರಿಸಲಾಗಿದೆ ಎಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ, ಜೂನ್ 16ರಂದು ಚುನಾವಣಾ ಆಯೋಗವು ಕರ್ನಾಟಕದ ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಸ್ಥಿರಗೊಳಿಸಿದ್ದು ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸುವಂತೆ ವೇಳಾಪಟ್ಟಿಯನ್ನೂ ಪ್ರಕಟಿಸಿದೆ ಎಂದು ಅರ್ಜಿದಾರರು ನ್ಯಾಯಾಲಯದ ಗಮನಕ್ಕೆ ತಂದಿದ್ದಾರೆ. ಈ ಹಿನ್ನೆಲೆಯಲ್ಲಿ,

ರಾಜ್ಯ ಚುನಾವಣಾ ಆಯೋಗ ಪ್ರತ್ಯೇಕವಾಗಿ ನಡೆಸುತ್ತಿರುವ ಕ್ರಮವನ್ನು ರದ್ದುಪಡಿಸುವಂತೆ ಅರ್ಜಿದಾರರು ಹೈಕೋರ್ಟ್‌ಗೆ ಮನವಿ ಮಾಡಿದ್ದಾರೆ.

## 'ಬೆಂಗಳೂರಿನ ನೈಸ್ ರೋಡ್ ಸಮೀಪ ಚಿರತೆ ಪ್ರತ್ಯಕ್ಷ: ಸಿಸಿಟಿವಿಯಲ್ಲಿ ದೃಶ್ಯ ಸೆರೆ; ಸ್ಥಳೀಯರು ಆತಂಕ

• ಉದಯವಾಹಿನಿ, ಬೆಂಗಳೂರ



ನಗರದ ಮಾಗಡಿ ಮುಖ್ಯರಸ್ತೆ ಸಮೀಪದ ಬ್ಯಾಡರಹಳ್ಳಿ ಮತ್ತು ಭಾರತ್ ನಗರ ಪ್ರದೇಶಗಳಲ್ಲಿ ಚಿರತೆಯೊಂದು ಪ್ರತ್ಯಕ್ಷವಾಗಿದ್ದು, ಸ್ಥಳೀಯ ನಿವಾಸಿಗಳಲ್ಲಿ ತೀವ್ರ ಭೀತಿ ಸೃಷ್ಟಿಸಿದೆ. ನೈಸ್ ರಸ್ತೆ ಬಳಿ ಬೆಳಗ್ಗೆ 4 ಗಂಟೆ ಸುಮಾರಿಗೆ ಚಿರತೆ ಕಾಣಿಸಿಕೊಂಡಿದ್ದು, ಸದ್ಯ ಚರ್ಚೆಗೆ ಗ್ರಾಸವಾಗಿದೆ. ಈ ಬಗ್ಗೆ ಮಾಹಿತಿ ತಿಳಿದ ತಕ್ಷಣ ಅರಣ್ಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ ಚಿರತೆಯನ್ನು ಸೆರೆ ಹಿಡಿಯುವ ಕಾರ್ಯಾಚರಣೆ ಆರಂಭಿಸಿದ್ದಾರೆ. ಕೆಲ ಸ್ಥಳಗಳಲ್ಲಿ ಬಲೆ ಹಾಕಲಾಗಿದ್ದು, ಅದನ್ನು ಹೊರಬರುವಂತೆ ಮಾಡಲು ಪಟಾಕಿ ಸಹ ಹೊಡೆಯಲಾಗಿದೆ. ಸ್ಥಳೀಯರ ಪ್ರಕಾರ, ಕಳೆದ 10 ವರ್ಷಗಳಲ್ಲಿ ಈ ಪ್ರದೇಶದಲ್ಲಿ ಚಿರತೆ ಕಾಣಿಸಿಕೊಂಡಿರುವುದು ಇದೇ ಮೊದಲು. ಸದ್ಯ ಸ್ಥಳೀಯರು ಆತಂಕಗೊಂಡಿದ್ದು, ಸೆರೆ ಹಿಡಿಯುವಂತೆ ಆಗ್ರಹಿಸಿದ್ದಾರೆ.

# 'ಅಧಿವೇಶನದಲ್ಲಿ ಜಾತಿ ಗಣತಿ ಸಮೀಕ್ಷೆ ವರದಿ ಮಂಡಿಸಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾದ ಮಧುಸೂದನ್ ನಾಯಕ್ ಅವರ ನೇತೃತ್ವದಲ್ಲಿ ತಯಾರಾದ 'ಕರ್ನಾಟಕ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ' (ಜಾತಿ ಗಣತಿ) ವರದಿಯ ಕುರಿತು ರಾಜ್ಯ ಸರ್ಕಾರ ತನ್ನ ನಿಲುವು ಪ್ರಕಟ ಮಾಡಬೇಕು ಹಾಗೂ ಮುಂದಿನ ವಿಧಾನಮಂಡಲ ಅಧಿವೇಶನದಲ್ಲಿ ಮಂಡಿಸಬೇಕು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ಶಾಸಕ ವಿ.ಸುನಿಲ್ ಕುಮಾರ್ ಆಗ್ರಹಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 450 ಕೋಟಿ ರೂ.ಗೂ ಹೆಚ್ಚು ಜನರ ತೆರಿಗೆ ಹಣವನ್ನು ವೆಚ್ಚ ಮಾಡಿ ನಡೆಸಲಾದ ಸಮೀಕ್ಷೆಯ ಬಗ್ಗೆ ಚರ್ಚೆಗೆ ಸಿದ್ಧರಿದ್ದೇವೆ. ಅಧಿವೇಶನದಲ್ಲಿ ಅದಕ್ಕಾಗಿ ಪ್ರತ್ಯೇಕ ಸಮಯ ನಿಗದಿಪಡಿಸಬೇಕು.

ಸರ್ಕಾರದ ಬಳಿ ರಾಜ್ಯದ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ದತ್ತಾಂಶವೇ ಇಲ್ಲದಿದ್ದರೆ, ಬಜೆಟ್ ಕಾರ್ಯಕ್ರಮಗಳನ್ನು ಹೇಗೆ ಮಾಡಲು ಸಾಧ್ಯ? ಸೌಲಭ್ಯಗಳನ್ನು ಹೇಗೆ ಕೊಡಲು ಸಾಧ್ಯ? ಈ ಸರ್ಕಾರ ಯಾವುದನ್ನು ಘೋಷಣೆ ಮಾಡುತ್ತದೆಯೋ ಅದನ್ನು ಪೋಷಣೆ ಮಾಡುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ. ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತರಾತುರಿಯಲ್ಲಿ ಮಧುಸೂದನ್ ನಾಯಕ್ ವರದಿಯನ್ನು ಸ್ವೀಕಾರ ಮಾಡಿದರು. ಕಾಂತರಾಜು ವರದಿಯನ್ನು ಹಿಂದಿನ ಸಿಎಂ ತೆಗೆದುಕೊಳ್ಳಲೇ ಇಲ್ಲ.

ಅದಾದ ನಂತರ ಜಯಪ್ರಕಾಶ್ ಹೆಗ್ಡೆ ವರದಿಯನ್ನು ಸಂಪುಟದ ಮುಂದೆ ತಂದರೂ ಸಹೋದ್ಯೋಗಿಗಳು ವಿರೋಧ ಮಾಡಿದರು ಎಂದು ಚರ್ಚೆ ಮಾಡಿ, ಸಾರ್ವಜನಿಕವಾಗಿ ಬಿಡುಗಡೆ ಮಾಡಲು ಹಿಂದೇಟು ಹಾಕಿದರು. ರಾಹುಲ್ ಗಾಂಧಿ ಸೂಚನೆ ಮೇರೆಗೆ ಹೆಗ್ಡೆ ವರದಿಯನ್ನು ಕಸದ ಬುಟ್ಟಿಗೆ ಹಾಕಿದರು. ಈಗ ಮಧುಸೂದನ್ ನಾಯಕ್ ವರದಿಯನ್ನೂ ಸಹ ಈ ಸರ್ಕಾರ ಕಸದ ಬುಟ್ಟಿಗೆ ಹಾಕಲಿದೆ. ಡಿ.ಕೆ ಶಿವಕುಮಾರ್ ಅವರ ಸರ್ಕಾರ ನಾಯಕ್ ವರದಿಯನ್ನು ಘನತ್ಯಾಜ್ಯ ವಿಲೇವಾರಿ ಮಾಡಲಿದೆ ಎಂದು ವ್ಯಂಗ್ಯವಾಡಿದರು.


ಉದಯವಾಹಿನಿ

> ವರದಿಯನ್ನು ತರಾತುರಿಯಲ್ಲೇ ಮಾಡಬೇಕು ಎಂದು 2025ರ ಸೆಪ್ಟೆಂಬರ್‌ನಲ್ಲಿ ಸಿಎಂ ಹೇಳಿದ್ದರು. ಆಗ ಬಿಜೆಪಿ ವಿರೋಧ ಮಾಡಿತ್ತು. ಮೂರು ತಿಂಗಳ ಒಳಗೆ ವರದಿ ಕೊಡ್ತೇವೆ ಅಂತ ಸಿಎಂ ಹೇಳಿದ್ರು. ಈಗ ಜುಲೈ ಬಂದರೂ ವರದಿ ಕುರಿತು ಏನೂ ಇಲ್ಲ. ಆದ್ದರಿಂದ ಈಗಿನ ಸಿಎಂ ವರದಿ ಬಗ್ಗೆ ತಮ್ಮ ನಿಲುವು ತಿಳಿಸಲಿ ಎಂದು ಆಗ್ರಹಿಸಿದರು.
> ಶಾಸಕ ವಿ.ಸುನಿಲ್ ಕುಮಾರ್

1 ಸಮೀಕ್ಷೆಯ ಚರ್ಚೆಗೆ ಸಿದ್ಧರಿದ್ದೇವೆ
2 ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ
3 ಸರ್ಕಾರ ಕಸದ ಬುಟ್ಟಿಗೆ ಹಾಕಲಿದೆ

**ಹಿಂದಿನಂತೆ ಕಸದ ಬುಟ್ಟಿಗೆ ಹಾಕಬೇಡಿ ಶಾಸಕ ವಿ.ಸುನಿಲ್**

**ಚುನಾವಣೆ ವೇಳೆ ಒಬಿಸಿ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್ ನಂತರ ಅವರ ಕಡೆ ನೋಡುವುದಿಲ್ಲ**

### ಕಾಂಗ್ರೆಸ್ ಸರ್ಕಾರ ಅನ್ಯಾಯ

ಚುನಾವಣೆ ವೇಳೆ ಒಬಿಸಿ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್ ನಂತರ ಅವರ ಕಡೆ ನೋಡುವುದಿಲ್ಲ. ಹಿಂದುಳಿದ ವರ್ಗಕ್ಕೆ ಕಾಂಗ್ರೆಸ್ ಸರ್ಕಾರ ಅನ್ಯಾಯ ಮಾಡುತ್ತಿದೆ. ಮಧುಸೂದನ್ ನಾಯಕ್ ಆಯೋಗದ ವರದಿಯ ಬಗ್ಗೆ ರಾಜ್ಯ ಸರ್ಕಾರ ಜನತೆಯನ್ನು ಕತ್ತಲೆಯಲ್ಲಿ ಇಟ್ಟಿದೆ.

> ವರದಿಯಲ್ಲಿ ಏನಿದೆ ಎಂದು ತಿಳಿಯಲು ನಾವು ಬಯಸಿದ್ದೇವೆ. ಒಬಿಸಿ ಪರವಾಗಿ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡುತ್ತಾರೆ. ಆದರೆ ರಾಜ್ಯಪಾಲರ ಭಾಷಣದಲ್ಲಿ ಆಯೋಗದ ಕುರಿತು ಪ್ರಸ್ತಾಪವೇ ಇರಲ್ಲ. ಹೊರಗಡೆ ಮಾತ್ರ ಅಹಿಂದ, ಒಬಿಸಿ ಎಂದು ಮಾತನಾಡುತ್ತಾರೆ. ಬಜೆಟ್‌ನಲ್ಲಿ ಒಂದು ಸಾಲು ಸೇರಿಸಲಿಲ್ಲ ಎಂದು ದೂರಿದ್ದಾರೆ.
> – ಶಾಸಕ ವಿ.ಸುನಿಲ್‌ಕುಮಾರ್

# 30 ಕೆಜಿ ಜಿಂಕೆ ಮಾಂಸ ಪರವಾನಗಿರಹಿತ ಬಂದೂಕು ಮಾರಕಾಸ್ತ್ರ ವಶ

## ಇಬ್ಬರು ಕಳ್ಳ ಬೇಟೆಗಾರರ ಬಂಧನ

• ಉದಯವಾಹಿನಿ, ಗುಂಡ್ಲುಪೇಟೆ

ಜಿಂಕೆಯನ್ನು ಬೇಟೆಯಾಡಿ ಮಾಂಸ ಸಾಗಿಸುತ್ತಿದ್ದ ಇಬ್ಬರು ಆರೋಪಿಗಳನ್ನು ವಿಶೇಷ ಹುಲಿ ಸಂರಕ್ಷಣಾ ದಳ (ಎಸ್ಟಿಪಿಎಫ್) ಬಂಧಿಸಿರುವ ಘಟನೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಗೋಪಾಲಸ್ವಾಮಿ ಬೆಟ್ಟ ವಲಯದ ಚೌಡಹಳ್ಳಿ ಸಮೀಪ ಗುರುವಾರ ಮುಂಜಾನೆ ನಡೆದಿದೆ.

ಬಂಧಿತ ಆರೋಪಿಗಳನ್ನ ಕೋಡಹಳ್ಳಿ ಗ್ರಾಮದ ಮಣಿಕಂಠ (27) ಹಾಗೂ ಚೌಡಹಳ್ಳಿ ಗ್ರಾಮದ ಶಿವಯ್ಯ (45) ಎಂದು ಗುರುತಿಸಲಾಗಿದೆ.ಗೋಪಾಲಸ್ವಾಮಿ ಬೆಟ್ಟ ವಲಯದ ಉಪವಲಯ ಅರಣ್ಯಾಧಿಕಾರಿ ಕಾರ್ತಿಕ್ ಯಾದವ್ ಅವರ ನೇತೃತ್ವದಲ್ಲಿ ಜ್ಞಾನಶೇಖರ್, ರವಿಕುಮಾರ್, ವಿನಯ್ ಹಾಗೂ ವಾಹನ ಚಾಲಕ ಸೋಮು ಅವರನ್ನ ಒಳಗೊಂಡ ಎಸ್ಟಿಪಿಎಫ್ ತಂಡ ಗಸ್ತಿನಲ್ಲಿದ್ದ ವೇಳೆ ಅನುಮಾನಾಸ್ಪದವಾಗಿ ದ್ವಿಚಕ್ರ ವಾಹನದಲ್ಲಿ ಸಂಚರಿಸುತ್ತಿದ್ದ ಇಬ್ಬರನ್ನ ತಡೆದು ತಪಾಸಣೆಗೆ ಒಳಪಡಿಸಿದಾಗ ಜಿಂಕೆಯನ್ನ ಬೇಟೆಯಾಡಿ ಮಾಂಸ ಸಾಗಿಸುತ್ತಿರುವುದು ಬೆಳಕಿಗೆ ಬಂದಿದೆ.

ಆರೋಪಿಗಳಿಂದ ಸುಮಾರು 30 ಕೆಜಿ ಜಿಂಕೆ ಮಾಂಸ, ಪರವಾನಗಿ ಇಲ್ಲದ ಮಜಲ್ ಲೋಡಿಂಗ್ ಬಂದೂಕು, ಎರಡು ಮಾರಕಾಸ್ತ್ರಗಳು, ಬ್ಯಾಟರಿ/ಹೆಡ್‌ಲೈಟ್ ಉಪಕರಣ ಹಾಗೂ ದ್ವಿಚಕ್ರ ವಾಹನವನ್ನ ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ಗೋಪಾಲಸ್ವಾಮಿ ಬೆಟ್ಟ ವಲಯದ ಸಿಬ್ಬಂದಿ ಭಾಗವಹಿಸಿದ್ದು, ಇಲಾಖೆಯ ಶ್ವಾನಗಳಾದ ದ್ರೋಣಾ ಹಾಗೂ ಶಕ್ತಿಯನ್ನ ಸಹ ಬಳಸಿಕೊಳ್ಳಲಾಗಿದೆ.

ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಸಿಎಫ್) ನಂದೀಶ್, ಎಸ್ಟಿಪಿಎಫ್ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ್ ಹಾಗೂ ವಲಯ ಅರಣ್ಯಾಧಿಕಾರಿ ವೆಂಕಟೇಶ್ ಅವರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ಯಶಸ್ವಿಯಾಗಿ ನಡೆದಿದ್ದು, ಪ್ರಕರಣದ ತನಿಖೆ ಮುಂದುವರಿದಿದೆ ಬಂಧಿತ ಆರೋಪಿಗಳನ್ನು ಹೆಚ್ಚಿನ ವಿಚಾರಣೆಗಾಗಿ ಜಿ.ಎಸ್. ಬೆಟ್ಟ ವಲಯಕ್ಕೆ ಒಪ್ಪಿಸಲಾಗಿದೆ.


ಉದಯವಾಹಿನಿ ಚಿತ್ರ

# ಇತಿಹಾಸದಲ್ಲೇ ಮೊದಲ ಬಾರಿ ದಸರಾ ಆನೆಗಳ ಹೃದಯ ಪರೀಕ್ಷೆ!

## 20ಕ್ಕೂ ಅಧಿಕ ಗಜಗಳ ಆರೋಗ್ಯ ತಪಾಸಣೆ; ರಕ್ತ ಮತ್ತು ಮಲದ ಮಾದರಿಗಳನ್ನು ಸಂಗ್ರಹಿಸಿ ವಿವಿಧ ಪ್ರಯೋಗಾಲಯಗಳಿಗೆ ಕಳುಹಿಸಲಾಗುತ್ತಿದೆ


• ಉದಯವಾಹಿನಿ, ಮೈಸೂರು

ವಿಶ್ವವಿಖ್ಯಾತ ದಸರಾ ಮಹೋತ್ಸವಕ್ಕೆ ದಿನಗಣನೆ ಶುರುವಾಗಿದ್ದು, ಇದೇ ಮೊದಲ ಬಾರಿಗೆ ದಸರಾ ಆನೆಗಳ ಹೃದಯ ಆರೋಗ್ಯ ತಪಾಸಣೆಗಾಗಿ ಅರಣ್ಯ ಇಲಾಖೆ ಇಸಿಜಿ ಪರೀಕ್ಷೆ ಕೈಗೊಳ್ಳುತ್ತಿದೆ. ನಾಡಹಬ್ಬ ದಸರೆಯ ಪ್ರಮುಖ ಆಕರ್ಷಣೆ ಜಂಜೂಸವಾರಿ. ಇದರಲ್ಲಿ ಪಾಲ್ಗೊಳ್ಳುವ ಗಜಪಡೆಯ ಆರೋಗ್ಯ ತಪಾಸಣೆಗೆ ಅರಣ್ಯ ಇಲಾಖೆ ಮುಂದಡಿ ಇಟ್ಟಿದೆ. ಮತ್ತಿಗೋಡು, ಭೀಮನಕಟ್ಟೆ, ದುಬಾರೆ ಮತ್ತು ರಾಮಪುರ ಆನೆಗಳ ಶಿಬಿರಗಳಿಗೆ ಪಶುವೈದ್ಯಾಧಿಕಾರಿಗಳ ತಂಡವು ಭೇಟಿ ನೀಡಿ ಸುಮಾರು 20ಕ್ಕೂ ಅಧಿಕ ಆನೆಗಳ ಆರೋಗ್ಯ ತಪಾಸಣೆ ನಡೆಸುತ್ತಿದೆ. ಈ ಪ್ರಕ್ರಿಯೆಯನ್ನು ಅತ್ಯಂತ ವೈಜ್ಞಾನಿಕ ಹಾಗೂ ಸುಧಾರಿತ ಮಾದರಿಯಲ್ಲಿ ನಡೆಸಲು ತೀರ್ಮಾನಿಸಿದೆ.

ಇದಕ್ಕಾಗಿ ದಸರಾ ಇತಿಹಾಸದಲ್ಲಿ ಪ್ರಥಮ ಬಾರಿಗೆ ಆನೆಗಳ ಹೃದಯದ ಆರೋಗ್ಯ ಹಾಗೂ ಸಾಮರ್ಥ್ಯವನ್ನು ಪರೀಕ್ಷಿಸಲು ಇಸಿಜಿ (ಎಲೆಕ್ಟ್ರೋಕಾರ್ಡಿಯೋಗ್ರಾಮ್) ಪರೀಕ್ಷೆಯನ್ನು ನಡೆಸಲಾಗುತ್ತಿದೆ. ಬಳಿಕ ರಕ್ತ ಮತ್ತು ಮಲದ ಮಾದರಿಗಳನ್ನು ಸಂಗ್ರಹಿಸಿ ವಿವಿಧ ಪ್ರಯೋಗಾಲಯಗಳಿಗೆ ಕಳುಹಿಸಲಾಗುತ್ತಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

ಸಾಮಾನ್ಯವಾಗಿ ದಸರಾ ಆನೆಗಳಿಗೆ ಜನರ ಗದ್ದಲ, ವಾಹನ ದಟ್ಟಣೆ ನಡುವೆಯೇ ತಾಲೀಮು ನಡೆಸಬೇಕಾಗುತ್ತದೆ. ಹೀಗಾಗಿ ಆನೆಗಳ ಹೃದಯ ಬಡಿತ ಯಾವ ರೀತಿ ಕೆಲಸ ಮಾಡುತ್ತದೆ ಎಂದು ತಿಳಿದುಕೊಳ್ಳುವ ಉದ್ದೇಶದಿಂದ ಇಸಿಜಿ ಪರೀಕ್ಷೆ ನಡೆಸಲಾಗುತ್ತಿದೆ. ಇದಕ್ಕಾಗಿ ಇಸಿಜಿ ಯಂತ್ರವನ್ನು ಖರೀದಿಸಲಾಗಿದೆ. ಮೈಸೂರಿಗೆ ಆನೆಗಳು ಬಂದಾಗಲೂ ನಿಯಮಿತವಾಗಿ ಹೃದಯ ತಪಾಸಣೆ ನಡೆಸಲಾಗುತ್ತದೆ. ಇದರಿಂದ ಯಾವ ಆನೆ ಓಡುವಾಗ, ಆವೇಶಕ್ಕೆ ಒಳಗಾದಾಗ ಅದರ ಹೃದಯ ಬಡಿತ ಹೇಗಿರುತ್ತದೆ ಎಂದು ತಿಳಿದುಕೊಳ್ಳಬಹುದು. ಜತೆಗೆ ಆನೆಗಳ ವಯಸ್ಸನ್ನು ಇದರಿಂದ ಅರಿಯಬಹುದು ಎನ್ನುತ್ತಾರೆ ಡಿಸಿಎಫ್


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

**ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್:** 2022ರಲ್ಲಿ 21 ವರ್ಷದ ಲಕ್ಷ್ಮಿ ಆನೆಯನ್ನು ದಸರಾ ಮಹೋತ್ಸವಕ್ಕೆ ಕರೆತರಲಾಗಿತ್ತು. ಆದರೆ, ಇಲ್ಲಿಗೆ ಬಂದು ತಾಲೀಮು ಪಡೆದ ಕೆಲವು ದಿನಗಳ ಬಳಿಕ ಲಕ್ಷ್ಮಿ ಗರ್ಭಿಣಿ ಎಂಬುದು ತಿಳಿಯಿತು. ಅಲ್ಲದೆ, ಅರಮನೆ ಆವರಣದಲ್ಲಿ ಲಕ್ಷ್ಮಿ ಮರಿಯೊಂದಕ್ಕೆ ಜನ್ಮ ಕೂಡ ನೀಡಿತ್ತು. ಇದಕ್ಕೆ ವ್ಯಾಪಕ ಟೀಕೆ ವ್ಯಕ್ತವಾಗಿತ್ತು. ಹೀಗಾಗಿ ಕಳೆದ ವರ್ಷದಿಂದ ಶಿಬಿರಗಳಲ್ಲಿರುವ ಹೆಣ್ಣಾನೆಗಳು ಗರ್ಭ ಧರಿಸಿವೆಯೇ ಅಥವಾ ಇಲ್ಲವೇ ಎಂದು ತಿಳಿಯಲು ಅರಣ್ಯ ಇಲಾಖೆ ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್ ನಡೆಸುವ ಕಾರ್ಯಕ್ಕೆ ಚಾಲನೆ ನೀಡಿದೆ. ಅದರಂತೆ ಈ ಬಾರಿಯು 8ರಿಂದ 10 ಹೆಣ್ಣಾನೆಗಳಿಗೆ ಗರ್ಭಧಾರಣೆ ಪರೀಕ್ಷೆ ನಡೆಸಲಾಗುತ್ತಿದೆ. ಪ್ರಯೋಗಾಲಯಗಳಿಂದ ಮಾದರಿಗಳ ಪರೀಕ್ಷಾ ವರದಿಗಳು ಸ್ವೀಕೃತವಾದ ನಂತರ ಮೈಸೂರು ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಂಡವು ವಿವಿಧ ಆನೆ ಶಿಬಿರಗಳಿಗೆ ಭೇಟಿ ನೀಡಿ ಆನೆಗಳ ಆಯ್ಕೆ ಪ್ರಕ್ರಿಯೆಯನ್ನು ಕೈಗೊಳ್ಳಲಿದೆ. ಆನೆಗಳ ತಾತ್ಕಾಲಿಕ ಆಯ್ಕೆಯ ಪಟ್ಟಿಯನ್ನು ವಿವರಗಳೊಂದಿಗೆ ರಾಜ್ಯಮಟ್ಟದ ದಸರಾ ಆನೆಗಳ ಆಯ್ಕೆ ಸಮಿತಿಗೆ ಸಲ್ಲಿಸಲಿದೆ.

> **2026ನೇ ಸಾಲಿನ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ವಿಜಯದಶಮಿ ಜಂಬೂಸವಾರಿ ಮೆರವಣಿಗೆಯು ಕಳೆದ ಸಾಲಿಗಿಂತ ಈ ಬಾರಿ 20 ದಿನಗಳು ತಡವಾಗಿ ಬರಲಿದೆ.**
> **ಈ ಕಾರಣದಿಂದಾಗಿ ಆನೆಗಳ ಆಯ್ಕೆ ಪ್ರಕ್ರಿಯೆಯನ್ನು ಕಳೆದ ಸಾಲಿಗೆ ಹೋಲಿಸಿದರೆ ಕೊಂಚ ತಡವಾಗಿ ಆರಂಭಿಸಲಾಗುತ್ತಿದೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ತಿಳಿಸಿದ್ದಾರೆ. ವಿವಿಧ ಶಿಬಿರಗಳಲ್ಲಿರುವ 22 ಆನೆಗಳಿಗೆ ಸದ್ಯ ಇಸಿಜಿ ಪರೀಕ್ಷೆ ನಡೆಸಲಾಗಿದೆ. ಇದಲ್ಲದೆ, 8 ರಿಂದ 10 ಹೆಣ್ಣಾನೆಗಳಿಗೆ ಗರ್ಭಧಾರಣೆ ಪರೀಕ್ಷೆಯನ್ನೂ ಮಾಡಲಾಗುವುದು ಎಂದಿದ್ದಾರೆ ಡಾ.ಐ.ಬಿ.ಪ್ರಭುಗೌಡ, ಡಿಸಿಎಫ್.**

# ಅಯೋಧ್ಯೆ ರಾಮ ಮಂದಿರದ ದೇಣಿಗೆ ಹಣ ಲೂಟಿ ವಿರುದ್ಧ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ಪಂಜಿನ ಮೆರವಣಿಗೆ

• ಉದಯವಾಹಿನಿ, ಚಾಮರಾಜನಗರ

ಅಯೋಧ್ಯೆ ರಾಮ ಮಂದಿರದ ದೇಣಿಗೆ ಹಣ ಲೂಟಿ ವಿರುದ್ಧ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ನಗರದಲ್ಲಿ ಪಂಜಿನ ಮೆರವಣಿಗೆ ನಡೆಸಲಾಯಿತು.

ನಗರದ ಸತ್ತಿರಸ್ತೆಯಲ್ಲಿರುವ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಸಂಚಾಲಕ ಎಸ್.ನಾರಾಯಣ್, ಜಿಲ್ಲಾಧ್ಯಕ್ಷ ಮಧುಸೂದನ್ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು, ಚಾಮರಾಜೇಶ್ವರ ಉದ್ಯಾನವನದ ಮುಂಭಾಗದಿಂದ ಪಂಜು ಹಿಡಿದು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ರಸ್ತೆ ತಡೆ ನಡೆಸಿದರು. ಮೋದಿಜೀ ನಮಸ್ತೆ ಜೀ, ಕಳ್ಳ ಯಾರು ಹೇಳು ಜೀ, ಅಯ್ಯೋ ಅಯ್ಯೋ ರಾಮ, ನಿಂಗೆ ಯಾರು ಎಳೆದರೋ ನಾಮ, ಯೋಗಿಜೀ ಯೋಗಿಜೀ ಲೂಟಿಕೋರ ಎಲ್ಲಿ ಜೀ ಎಂಬತ್ಯಾದಿ ಭಿತ್ತಿ ಪತ್ರಗಳನ್ನು ಪ್ರದರ್ಶನ ಮಾಡುವ ಜೊತೆಗೆ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಸಾವಿರಾರು ಕೋಟಿ ಲೂಟಿಯಾಗಿದೆ. ವಾಹನಗಳಲ್ಲಿ ಹಣ ಸಾಗಿಸಿದ್ದಾರೆ ಉತ್ತರ ಪ್ರದೇಶದಲ್ಲಿ ನಿಮ್ಮದೇ ಸರ್ಕಾರ ಇದೆ. ದೊಡ್ಡ ಹಗರಣ ಆಗಿದೆ ಇದರ ಬಗ್ಗೆ ಸೂಕ್ತ ತನಿಖೆಯಾಗಬೇಕು. ಇದುವರೆಗೂ ಇದರ ಬಗ್ಗೆಯೂ ಸಹ ಮೋದಿಯವರು ಮಾತನಾಡಲಿಲ್ಲ ಇತರೆ ವಿಚಾರಗಳ ಬಗ್ಗೆ ತಕ್ಷಣವೇ ಪ್ರತಿಕ್ರಿಯೆ ನೀಡುವ ಮೋದಿಯವರು ಏಕೆ ಮಾತನಾಡುತ್ತಿಲ್ಲ ಎಂದು ತೀಕ್ಷ್ಣವಾಗಿ ಪ್ರಶ್ನಿಸಿದರು. ಅಯೋಧ್ಯ ರಾಮಮಂದಿರ ದೇಣಿಗೆ ಲೂಟಿ ಪ್ರಕರಣದಲ್ಲಿ ಈಗಾಗಲೇ ಬಂಧಿಸಿರುವ ಆರೋಪಿಗಳ ಹಿಂದೆ ದೊಡ್ಡ ದೊಡ್ಡವರ ಕೈವಾಡ ಇದೆ. ಇವರನ್ನು ಬಂಧಿಸಿ, ಉನ್ನತ ಮಟ್ಟದ ತನಿಖೆಯಾಗಬೇಕು ಎಂದು ಆಗ್ರಹಿಸಿದರು.



> **ದೇಶದ ಭಕ್ತರು ಅಯೋಧ್ಯೆ ರಾಮಮಂದಿರಕ್ಕೆ ನಂಬಿಕೆಯಿಂದ ನೀಡಿದ ದೇಣಿಗೆ ಹಣವನ್ನು ಲೂಟಿ ಮಾಡಲಾಗಿದೆ. ಕೋಟಿ ಕೋಟಿ ಹಣ ಲೂಟಿ ಮಾಡಿರುವುದು ಇಡೀ ದೇಶದ ಜನತೆ ತಲೆತಗ್ಗಿಸುವ ವಿಚಾರವಾಗಿದೆ. ಈ ಹಗರಣದ ಬಗ್ಗೆ ಮೋದಿ ಮಾತನಾಡಬೇಕು ಎಂದು ಒತ್ತಾಯಿಸಿದರು.**
> **-ಸಂಚಾಲಕ ಎಸ್.ನಾರಾಯಣ್**

## ರೈತರ ಭೂಮಿ ವಿವಾದ: ಜು.13ಕ್ಕೆ ತಹಶೀಲ್ದಾರ್ ಕಚೇರಿ ಎದುರು ಬೃಹತ್ ಪ್ರತಿಭಟನೆ: ಕೆ.ಸಿ.ರಾಜಾಕಾಂತ್

• ಉದಯವಾಹಿನಿ, ಚಿಕ್ಕಬಳ್ಳಾಪುರ

ಐವತ್ತು ವರ್ಷಗಳ ಹಿಂದೆ ಸರ್ಕಾರ ಮಂಜೂರು ಮಾಡಿರುವ ಭೂಮಿಯನ್ನು ಅರಣ್ಯ ಇಲಾಖೆಯದ್ದು ಎಂದು ಹೇಳಿ ಒಕ್ಕಲೆಬ್ಬಿಸಲು ನಡೆಸುತ್ತಿರುವ ಪ್ರಯತ್ನ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ ದಲಿತ ವಿರೋಧಿ ಧೋರಣೆಯನ್ನು ಖಂಡಿಸಿ ಜು.13ರಂದು ತಹಶೀಲ್ದಾರ್ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಸಂಘರ್ಷ ಸಮಿತಿ ಮುಖಂಡ ಕೆ.ಸಿ.ರಾಜಾಕಾಂತ್ ತಿಳಿಸಿದ್ದಾರೆ. ನಗರದಲ್ಲಿ ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.1972 73ರಲ್ಲಿ ಕಂದಾಯ ಇಲಾಖೆಯೇ ಸರ್ವೆ ನಂಬರ್ 67ರಲ್ಲಿ ಸಿಂಗಾಟಿಕದಿರೇನಹಳ್ಳಿ,ಕಣಿವೆ ನಾರಾಯಣಪುರ, ಸುದ್ದಹಳ್ಳಿಯ ಪ್ರತಿಫಲಾನುಭವಿಗೆ 2 ರಿಂದ 3 ಎಕರೆ ಭೂ ಮಂಜೂರಾತಿ ಮಾಡಿ ಇವರ ಹೆಸರಿಗೆ ಖಾತೆ ಪಹಣಿ ಸೇರಿ ಎಲ್ಲಾ ದಾಖಲೆಗಳನ್ನು ವಿತರಣೆ ಮಾಡಿದೆ. ಇದರಲ್ಲಿ ಬೆಳೆ ಬೆಳದುಕೊಂಡು ಸ್ವಾಧೀನದಲ್ಲಿರುತ್ತಾರೆ. ಆದರೆ ದಲಿತರಿಗೆ ಕಿರುಕುಳ ನೀಡುವ ಸಲುವಾಗಿಯೇ 1991-92ರಲ್ಲಿ ಆಡಳಿತಾತ್ಮಕ ಲೋಪಗಳಿಂದಾಗಿ ಅರಣ್ಯ ಇಲಾಖೆಗೆ ಈ ಭೂಮಿಯನ್ನು ಕಂದಾಯ ಇಲಾಖೆ ಮಾಡಿಕೊಟ್ಟಿದೆ ಎಂದು ಹೇಳಿಕೊಂಡು ದಲಿತ ರೈತರನ್ನು ಒಕ್ಕಲೆಬ್ಬಿಸುತ್ತಿದ್ದಾರೆ.

# ಅಲ್ಪಸ್ವಲ್ಪ ಅನುದಾನದಲ್ಲೇ ಅಭಿವೃದ್ಧಿಗೆ ಒತ್ತು ನೀಡುತ್ತಿದ್ದೇನೆ: ಶಾಸಕ ಹೆಚ್.ಟಿ.ಮಂಜು

• ಉದಯವಾಹಿನಿ, ಕೆ.ಆರ್.ಪೇಟೆ

ಸಮರ್ಪಕ ಅನುದಾನ ದೊರೆತರೆ ಇಡೀ ತಾಲ್ಲೂಕಿನ ರಸ್ತೆಗಳ ಚಿತ್ರಣವನ್ನೆ ಬದಲಿಸಬಹುದು ಆದರೆ ಅನುದಾನದ ಕೊರತೆಯಿಂದ ಅದು ಸಾಧ್ಯವಾಗುತ್ತಿಲ್ಲ ಆದರೂ ಬರುತ್ತಿರುವ ಅಲ್ಪಸ್ವಲ್ಪ ಅನುದಾನದಲ್ಲಿ ಸಮಸ್ಯೆ ಇರುವ ಕಡೆ ರಸ್ತೆಗಳ ಅಭಿವೃದ್ಧಿಗೆ ಒತ್ತು ನೀಡುತ್ತಿದ್ದೇನೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ಅವರು ತಾಲ್ಲೂಕಿನ ಸಂತೆಬಾಚಹಳ್ಳಿ ಹೋಬಳಿಯ ರಂಗನಾಥಪುರ ಕ್ರಾಸ್ ಬಳಿ ಲೋಕೋಪಯೋಗಿ ಇಲಾಖೆಯ ಅನುದಾನದಲ್ಲಿ ಕೊಟಗಹಳ್ಳಿಯಿಂದ -ಸಂತೆಬಾಚಹಳ್ಳಿಗೆ ಸಂಪರ್ಕ ಕಲ್ಪಿಸುವ 01.20 ಕಿಮೀ ಉದ್ದದ ಸುಮಾರು ಎರಡು ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ಮತ್ತು ಪಟ್ಟಣದ ಟಿಎಪಿಸಿಎಂಎಸ್ ಕಚೇರಿ ಆವರಣದಲ್ಲಿ ಸುಮಾರು ನಲವತ್ತು ಲಕ್ಷ ವೆಚ್ಚದ ಸಿಮೆಂಟ್ ಕಾಂಕ್ರೀಟ್ ಹಾಕುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಬಹಳ ದಿನಗಳಿಂದ ಟಿಎಪಿಸಿಎಂಎಸ್ ಪ್ರಾಂಗಣದ ಕಾಂಕ್ರೀಟ್ ಕಾಮಗಾರಿ ನೆನೆಗುದಿಗೆ ಬಿದ್ದಿತ್ತು ಈ ಹಿಂದೆ ಬಂದಿದ್ದ ಅನುದಾನವನ್ನು ಸರ್ಕಾರ ವಾಪಸ್ ಪಡೆದಿತ್ತು ಪ್ರತಿನಿತ್ಯ ಸಾವಿರಾರು ರೈತರು ಸಾರ್ವಜನಿಕರು ಟಿಎಪಿಸಿಎಂಎಸ್ ಸಂಸ್ಥೆಗೆ ಬಂದು ಹೋಗುತ್ತಾರೆ ಈ ಸಂಸ್ಥೆ ರೈತರು ವ್ಯವಹರಿಸುವ ಸ್ಥಳವಾಗಿದೆ ಆದರೆ ಈ ಆವರಣ ಗುಂಡಿ ಬಿದ್ದು ತಿರುಗಾಡಲು ತುಂಬಾ ತೊಂದರೆಯಾಗಿತ್ತು ಇಂದು ಆ ಸಮಸ್ಯೆಗೆ ಪರಿಹಾರ ದೊರಕಿದ್ದು ಗುತ್ತಿಗೆದಾರರು ಕೂಡಲೇ ಕೆಲಸ ಪ್ರಾರಂಭ ಮಾಡಿ ಬೇಗ ಮುಗಿಸುವಂತೆ ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

> **ಅನುದಾನದ ಕೊರತೆಯಿದ್ದರು ಬರುತ್ತಿರುವ ಅಲ್ಪಸ್ವಲ್ಪ ಅನುದಾಲ್ಲೇ ಅಭಿವೃದ್ಧಿಗೆ ಶಕ್ತಿ ಮೀರಿ ಪ್ರಯತ್ನಿಸುತ್ತಿದ್ದೇನೆ ಸೂರ್ಯ ಚಂದ್ರರು ಇರುವುದು ಎಷ್ಟು ಸತ್ಯವೋ 2028 ಕ್ಕೆ ಬಿಜೆಪಿ-ಜೆಡಿಎಸ್ ಸರ್ಕಾರ ಬರುವುದು ಅಷ್ಟೇ ಸತ್ಯ ಅಂದು ನಾನು ಅಂದುಕೊಂಡಿರುವ ತಾಲ್ಲೂಕಿನ ಅಭಿವೃದ್ಧಿಯ ಕನಸು ನನಸಾಗಲಿದೆ ಎಂದು ತಿಳಿಸಿದರು.**
> **-ಶಾಸಕ ಹೆಚ್.ಟಿ.ಮಂಜು**

# ಮಂಡ್ಯ ನಗರ ಸಾರಿಗೆ ಇಲ್ಲದೇ ಜನತೆ ಹೈರಾಣ !

• ಉದಯವಾಹಿನಿ, ಮಂಡ್ಯ :

ನಗರದ ವಾಸಿಗಳಿಗೆ ಸರಿಯಾದ ಸಾರಿಗೆ ವ್ಯವಸ್ಥೆ ಇರದೇ ಇದು ಉತ್ತಮ ಹಣಕಾಸಿನ ವ್ಯವಸ್ಥೆ ಇರುವ ಸಿರಿವಂತರಿಗೆ ಮಾತ್ರ ಸೃಷ್ಠಿಯಾದ ನಗರ ಎಂಬಂತಾಗಿದೆ. ಹೌದು.. ಇಲ್ಲಿ ವಾಸಿಸುವ ಕೇಂದ್ರದಲ್ಲಿನ ಬಸ್ ನಿಲ್ದಾಣ, ರೈಲ್ವೇ ನಿಲ್ದಾಣ ಮತ್ತು ಪೇಟೆಗೆ ತೆರಳು ನಗರ ಸಾರಿಗೆ ಇಲ್ಲವಾಗಿದೆ. ನಗರದ ಒಂದು ಭಾಗದಿಂದ ಮತ್ತೊಂದು ಭಾಗಕ್ಕೆ ಪ್ರಯಾಣ ಬೆಳೆಸಲು ಮನೆಯಲ್ಲಿ ವಾಹನ ಉಳ್ಳವರ ಅಥವಾ ಆಟೋ ರಿಕ್ಷಾಗಳನ್ನೇ ಅವಲಂಭಿಸಬೇಕಾದ ಅನಿವಾರ್ಯತೆ ಎದುರಾಗಿದೆ.

ಇದರಿಂದ ಇಲ್ಲಿನ ದಿನಗೂಲಿ ನೌಕರರು, ಬಡ ನಿವಾಸಿಗಳು, ವೃದ್ದರು ಸರಕಾರಿ ಸಾರಿಗೆ ವ್ಯವಸ್ಥೆ ಇಲ್ಲದೇ ವನವಾಸವನ್ನೇ ಅನುಭವಿಸುವಂತಾಗಿದೆ. ಕೇಂದ್ರ ಬಸ್ನಿಲ್ದಾಣಕ್ಕೆ ಬರುವ ಕೆಎಸ್‌ಆರ್ಟಿಸಿ ಸಾರಿಗೆ ಬಸ್ಗಳು ನಗರದೊಳಗೆ ಬರುತ್ತವೆ. ಆದರೆ ಅವುಗಳು ದೂರದ ಪ್ರದೇಶಗಳು ಎಂದರೆ ಸುತ್ತಮುತ್ತಲು ತಾಲ್ಲೂಕುಗಳು ಹಾಗೂ ಪಟ್ಟಣಗಳಿಂದ ನಗರದ ಸಂಪರ್ಕಕ್ಕೆ ಬರುತ್ತವೆ. ಆದರೆ ಇವುಗಳಲ್ಲಿ ಪಯಣ ಮಾಡಲು ಸ್ಥಳವೇ ಇಲ್ಲದ ಪರಿಸ್ಥಿತಿ ಇರುತ್ತದೆ. ಯೌವ್ವನಾವಸ್ಥೆಯ ಜನರು ನಿಲ್ಲಲೂ ಸ್ಥಳವಿಲ್ಲದೇ ಇದ್ದರೂ ಪಯಣ ಮಾಡಬಲ್ಲರು. ಆದರೆ ಆರೋಗ್ಯ ಸ್ಥಿತಿ ಸರಿಯಿಲ್ಲದವರು, ವೃದ್ಧರ ಕಥೆಯೇನು ಇದನ್ನು ಸಂಬಂಧಿತ ಅಧಿಕಾರಿಗಳು ಗಮನಿಸಬೇಕಿದೆ.

ನಗರದಲ್ಲಿನ ಬಡ ಕಾಲೇಜು ವಿದ್ಯಾರ್ಥಿಗಳು, ನಾಗರೀಕರು, ವೃದ್ದರು ಖಾಸಗಿ ವ್ಯವಸ್ಥೆಯನ್ನೇ ಅವಲಂಭಿಸುವಂತೆ ಪರಿಸ್ಥಿತಿ ನಿರ್ಮಿಸಲಾಗಿದೆ. ಇದಕ್ಕೆ ನಗರದಲ್ಲಿದ್ದ ''ಮಿಡಿ ಬಸ್ ವ್ಯವಸ್ಥೆ ಯನ್ನು ಸ್ಥಗಿತಗೊಳಿಸಿರುವುದೇ ಕಾರಣ. ಕೋವಿಡ್ ಸಂದರ್ಭಕ್ಕೂ ಮೊದಲು ನಗರದ ಬಡವಾಸಿ ಗಳಿಗೆ ಅನುಕೂಲವಾಗುವಂತೆ ಸಾಮಾನ್ಯ ಗಾತ್ರಕ್ಕಿಂತ ಸಣ್ಣ ಗಾತ್ರದ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಇದು ನಗರದೊಳಗೆ ಎಲ್ಲಡೆ ಸಂಚರಿಸುವಂತೆ ಮಾರ್ಗ ನಿರ್ಮಿಸಲಾಗಿತ್ತು. ಆದರದೀಗ ಆಟೋ ರಿಕ್ಷಾ ಸಂಘಗಳ ಒತ್ತಾಯದ ಮೇರೆಗೆ ಸಂಪೂರ್ಣವಾಗಿ ನಿಂತು ಹೋಗಿದೆ.


ಉದಯವಾಹಿನಿ ಚಿತ್ರ

## ಬಿಡದಿ ಟೌನ್‌ಶಿಪ್ ವಿರೋಧಿಸಿ ರೈತರಿಂದ ರಕ್ತ ಚಳವಳಿ ಆರಂಭ: ಪ್ರತಿಭಟನೆಗೆ ಸಂತೋಷ ಹೆಗ್ಡೆ ಸಾಥ್

• ಉದಯವಾಹಿನಿ, ರಾಮನಗರ

ಬೆಂಗಳೂರು ದಕ್ಷಿಣ ಜಿಲ್ಲೆ ಬಿಡದಿ ಟೌನ್‌ಶಿಪ್ ವಿರೋಧಿಸಿ ರೈತರಿಂದ ರಕ್ತ ಚಳವಳಿ ಆರಂಭಗೊಂಡಿದೆ. ರಕ್ತ ಕೊಡ್ತೀವಿ, ಭೂಮಿ ಕೊಡಲ್ಲ ಎಂದು ಹೋರಾಟ ಆರಂಭಿಸಿದ್ದಾರೆ. ಟೌನ್‌ಶಿಪ್ ಮ್ಯಾಪ್ ಮೇಲೆ ರಕ್ತದ ಹನಿ ಸುರಿಸಿ ವಿಭಿನ್ನ ಹೋರಾಟ ಆರಂಭಿಸಿದ್ದಾರೆ.

ಬಿಡದಿಯ ಟೌನ್‌ಶಿಪ್ ಹೋರಾಟ ದಿನದಿಂದ ದಿನಕ್ಕೆ ವಿಕೋಪಕ್ಕೆ ತೆರಳುತ್ತಿದೆ. ಭೈರಮಂಗಲ ಗ್ರಾಮದಲ್ಲಿ ಯೋಜನೆ ವಿರೋಧಿಸಿ ರೈತರ ಪ್ರತಿಭಟನೆ ನಡೆಸಿದ್ದಾರೆ. ಭೈರಮಂಗಲ ಗ್ರಾಮದಲ್ಲಿ ರಕ್ತ ಚಳವಳಿ ಆರಂಭಗೊಂಡಿದ್ದು, ರಕ್ತ ಕೊಡ್ತೀವಿ, ಭೂಮಿ ಕೊಡಲ್ಲ ಎಂದು ಹೋರಾಟ ಆರಂಭಿಸಿದ್ದಾರೆ. ಟೌನ್ ಶಿಪ್ ಮ್ಯಾಪ್ ಮೇಲೆ ರಕ್ತದ ಹನಿ ಹಾಕಿದ್ದಾರೆ. ಮಹಿಳೆಯರು, ರೈತರಿಂದ ರಕ್ತದ ಹನಿ ಸುರಿಸಿ ಆಕ್ರೋಶ ವ್ಯಕ್ತಪಡಿಸಿದ್ದು, ಕೂಡಲೇ ಸರ್ಕಾರ ಟೌನ್ ಶಿಪ್ ಯೋಜನೆ ಕೈಬಿಡಬೇಕು. ಇಲ್ಲವಾದಲ್ಲಿ ರಕ್ತ ಕೊಟ್ಟಿದ್ದೇವೆ, ಮುಂದೆ ಪ್ರಾಣ ಕೊಡುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

ಬಿಡದಿ ಪ್ರತಿಭಟನಾ ಸ್ಥಳದಲ್ಲೇ ಸರ್ಕಾರಕ್ಕೆ ಪತ್ರ ಬರೆದ ಸಂತೋಷ್ ಹೆಗ್ಡೆ ಅವರು ರೈತರಿಗೆ ಸಾಥ್ ಕೊಟ್ಟಿದ್ದಾರೆ. ಬಿಡದಿ ಟೌನ್ ಶಿಪ್‌ಗೆ ಬಲವಂತವಾಗಿ ಭೂಸ್ವಾಧೀನ ಮಾಡದಂತೆ ಮನವಿ ಪತ್ರ ಸಲ್ಲಿಸಲಾಗಿದ್ದು, ಅಭಿವೃದ್ಧಿ ಹೆಸರಲ್ಲಿ ರೈತರ ಹಕ್ಕುಗಳಿಗೆ ಧಕ್ಕೆ ಮಾಡಬೇಡಿ. ರೈತರ ಅಭಿಪ್ರಾಯ ಕಡೆಗಣಿಸಿ ಬಲವಂತ ಭೂಸ್ವಾಧೀನ ಮಾಡದಂತೆ ಪ್ರತಿಭಟನಾ ಸ್ಥಳದಲ್ಲೇ ಸರ್ಕಾರಕ್ಕೆ ಪತ್ರ ಬರೆದು ಮನವಿ ಮಾಡಲಾಯಿತು. ಈ ವೇಳೆ ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಮಾತನಾಡಿ, ನನಗೆ ಆರೋಗ್ಯ ಸಮಸ್ಯೆ, ವೈದ್ಯರು ಮನೆಯಿಂದ ಹೊರ ಹೋಗದಂತೆ ಸೂಚನೆ ನೀಡಿದ್ದರು. ಆದರೆ, ರೈತರು ರಸ್ತೆಯಲ್ಲಿ ಕುಳಿತು ಪ್ರತಿಭಟನೆ ಮಾಡುತ್ತಿರುವುದು ನೋವು ತಂದಿದೆ. ವ್ಯವಸಾಯ ಇಲ್ಲದೇ ಅಭಿವೃದ್ಧಿ ಸಾಧ್ಯವಿಲ್ಲ. ಯಾವುದೇ ಎಐ ಬಂದರೂ ಕೃಷಿ ಮಾಡದಿದ್ದರೆ ಹೊಟ್ಟೆ ತುಂಬಲ್ಲ. ಕೃಷಿ ಕ್ಷೀಣವಾದರೆ ಭವಿಷ್ಯದಲ್ಲಿ ಕೆಟ್ಟ ಪರಿಸ್ಥಿತಿ ಬರುತ್ತದೆ ಎಂದರು. ಪಟ್ಟಣದಲ್ಲಿರುವ ಕೆರೆಗಳ ಮುಚ್ಚಿ ಬಿಲ್ಡಿಂಗ್ ಕಟ್ಟುತ್ತಿದ್ದಾರೆ. ಇಂತಹ ನಿರ್ಧಾರ ತೆಗೆದುಕೊಳ್ಳುವಾಗ ಸರ್ಕಾರ ಅರ್ಥ ಮಾಡಿಕೊಳ್ಳಬೇಕು.


ಉದಯವಾಹಿನಿ ಚಿತ್ರ

# ಮಹಿಳೆಯರಿಗೆ ಹೊಲಿಗೆ ಯಂತ್ರಗಳ ವಿತರಣೆ

## ಮಹಿಳೆಯರು ಸ್ವಂತ ಗುಡಿ ಕೈಗಾರಿಕೆಗಳನ್ನು ಸ್ಥಾಪಿಸಿ ಬೇರೆಯವರಿಗೆ ಉದ್ಯೋಗ ನೀಡುವಂತೆ ಮಾಡಬೇಕು

• ಉದಯವಾಹಿನಿ, ಮೈಸೂರು

1 ಏಕಾಂಗಿಯಾಗಿ ಛಲದಿಂದ ಓದಿಸಿ
2 ದೇಶದ ಆರ್ಥಿಕತೆಗೆ ಸಹಕಾರಿ
3 ಗುಡಿ ಕೈಗಾರಿಕೆಗಳನ್ನು ಸ್ಥಾಪಿಸಿ

ಮಹಿಳೆಯರು ಕಾಯಕಜೀವಿಗಳಾಗಿ ಬದುಕುವ ಗುರಿ ಹೊಂದಬೇಕು. ಮಹಿಳೆ ನಾಲ್ಕು ಗೋಡೆಗಳಿಗೆ ಸೀಮಿತವಾಗದೆ ಸ್ವಂತ ಶ್ರಮದಿಂದ ಸಮಾಜದಲ್ಲಿ ಪುರುಷನಂತೆ ಸಮಾನವಾಗಿ ಬದುಕಿದರೆ ದೇಶದ ಆರ್ಥಿಕತೆಗೆ ಸಹಕಾರಿಯಾಗಲಿದೆ ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅವರು ಹೇಳಿದರು.

ನಗರದ ಜಲದರ್ಶಿನಿ ಅತಿಥಿಗೃಹದಲ್ಲಿರುವ ತಮ್ಮ ಕಚೇರಿಯ ಹೊರಾಂಗಣದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಚಾಮುಂಡೇಶ್ವರಿ ಕ್ಷೇತ್ರದಿಂದ ಆಯ್ಕೆಯಾಗಿದ್ದ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಿ ಮಾತನಾಡಿದರು.

ಒಂದು ಕಾಲದಲ್ಲಿ ಮಹಿಳೆಯರನ್ನು ಅಬಲೆಯರು ಎನ್ನುವಂತೆ ಹೇಳಲಾಗಿತ್ತು.ಈಗ ಮಹಿಳೆಯರು ಸಬಲೆಯರಾಗಿ ಕುಟುಂಬವನ್ನು ನಿರ್ವಹಣೆ ಮಾಡುವ ಜತೆಗೆ ಸಮಾಜಕ್ಕೆ ತಮ್ಮ ಕೈಲಾದಷ್ಟು ಕೊಡುಗೆ ನೀಡುತ್ತಿದ್ದಾರೆ. ಮಹಿಳೆಯರು ಮತ್ತು ಪುರುಷರು ಕುಟುಂಬವನ್ನು ನಿರ್ವಹಣೆ ಮಾಡಲು ಕಾಯಕ ಮಾಡಬೇಕು ಎಂದರು.

ಇಂದು ದುಡಿಯಲು ಅವಕಾಶ ಇದ್ದರೂ ಯುವ ಸಮುದಾಯ ಕೆಲಸ ಮಾಡದೆ ಬೇರೆ ಬೇರೆ ಅಡ್ಡದಾರಿಗಳನ್ನು ಹಿಡಿಯಬಾರದು ಎಂದು ಸಲಹೆ ನೀಡಿದರು. ಬ್ಯಾಂಕ್‌ನಲ್ಲಿ ಕೆಲಸ ಮಾಡುತ್ತಿದ್ದ ವ್ಯಕ್ತಿಯೊಬ್ಬ ತನ್ನ ಕೆಟ್ಟ ಚಟಗಳಿಂದ ಹೆಂಡತಿಯನ್ನು ಬಿಟ್ಟುಹೋದ. ಹೆಂಡತಿ ಯೋಚನೆ ಮಾಡದೆ ಟೈಲರಿಂಗ್ ಕೆಲಸ ಮಾಡಿಕೊಂಡು ತನ್ನ ಮಕ್ಕಳನ್ನು ಓದಿಸಿ ಇಂಜಿನಿಯರಿಂಗ್ ಮಾಡಿಸಿದ್ದಾಳೆ. ಏಕಾಂಗಿಯಾಗಿ ಛಲದಿಂದ ಓದಿಸಿ ಮದುವೆ ಮಾಡಿದ್ದರಿಂದ ಇಂದು ಮಕ್ಕಳು ಮೂರು ಲಕ್ಷ ರೂಪಾಯಿ ವೇತನ ಪಡೆಯುತ್ತಿದ್ದಾರೆ ಎಂದರು. ಹೆಣ್ಣು ಮಕ್ಕಳಿಗೆ ವಿದ್ಯಾಭ್ಯಾಸ ಮಾಡಿಸಬೇಕು. ಸ್ವಂತ ಕಾಲಿನಲ್ಲಿ ನಿಲ್ಲಲು,ಸ್ವಾಭಿಮಾನದಿಂದ ಬದುಕಲು ಗುರಿಹೊಂದಬೇಕು ಎಂದರು. ಮಹಿಳೆಯರು ಸ್ವಂತ ಗುಡಿ ಕೈಗಾರಿಕೆಗಳನ್ನು ಸ್ಥಾಪಿಸಿ ಬೇರೆಯವರಿಗೆ ಉದ್ಯೋಗ ನೀಡುವಂತೆ ಮಾಡಬೇಕು.


ಉದಯವಾಹಿನಿ ಚಿತ್ರ

> **ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿರುವ ತಮ್ಮ ಕಚೇರಿಯ ಹೊರಾಂಗಣದಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಚಾಮುಂಡೇಶ್ವರಿ ಕ್ಷೇತ್ರದಿಂದ ಆಯ್ಕೆಯಾಗಿದ್ದ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಿದರು.**
> **-ಶಾಸಕ ಜಿ.ಟಿ.ದೇವೇಗೌಡ**

> **ಮೊನ್ನೆಯಷ್ಟೇ ಐಎಎಸ್ ಆಗಬೇಕು ಎನ್ನುವ ಆಸೆಯಿಂದ ಒಬ್ಬ ವಿದ್ಯಾರ್ಥಿನಿ ನನ್ನಬಳಿ ಬಂದಿದ್ದಳು. ಆಗ ಆಕೆಗೆ ಐಎಎಸ್ ಯಾಕೆ ಮಾಡಬೇಕೆಂದು ಕೇಳಿದಾಗ ನನ್ನ ಗುರಿ ಅಂದಳು.ಆದರೆ, ಎನ್‌ಐಇ ಕಾಲೇಜಿನಲ್ಲಿ ಸೀಟು ಸಿಗಬೇಕಾದರೆ ಒಂದೂವರೆ ಲಕ್ಷ ಕಟ್ಟಬೇಕು ಅಂದಿದ್ದರಿಂದ ನಾನೇ ಕಾಲೇಜಿನ ಶುಲ್ಕ ಕಟ್ಟಿ ಪ್ರವೇಶ ಕೊಡಿಸಿದ್ದೇನೆ ಎಂದು ಹೇಳಿದರು.**
> **-ಶಾಸಕ ಜಿ.ಟಿ.ದೇವೇಗೌಡ**

## ಮಿನಿ ನ್ಯೂಸ್

### ಮಕ್ಕಳ ಗ್ರಾಮ ಸಭೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಬಗ್ಗೆ ಜಾಗೃತಿ ಮೂಡಿಸಿ: ಐಶ್ವರ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯು ಗ್ರಾಮ ಮಟ್ಟದಿಂದ ನಡೆಯಬೇಕು. ಮಕ್ಕಳ ಗ್ರಾಮ ಸಭೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಯ ಬಗ್ಗೆ ಜಾಗೃತಿ ಮೂಡಿಸಿ ಎಂದು ಅಪರ ಜಿಲ್ಲಾಧಿಕಾರಿಗಳು ಆರ್. ಐಶ್ವರ್ಯ ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಕಾರಿ ಹಾಗೂ ಕಾರ್ಯಪಡೆ ಸಮಿತಿಯ ಸಭೆ ನಡೆಸಿ ಮಾತನಾಡಿದರು. ಬಾಲಕಾರ್ಮಿಕರನ್ನು ಪತ್ತೆ ಹಚ್ಚಲು ಅಧಿಕಾರಿಗಳು ಪ್ರತಿ ಮಾಹೆ ನಿಗದಿಪಡಿಸಿರುವ ಕನಿಷ್ಠ 15 ತಪಾಸಣೆ ಅಥವಾ ದಾಳಿಗಳನ್ನು ನಡೆಸಿ ವರದಿ ನೀಡಬೇಕು ಎಂದರು.

ಏಪ್ರಿಲ್ 2026 ರಿಂದ ಜೂನ್ 2026 ರವರೆಗೆ ಕಾರ್ಮಿಕ ಅಧಿಕಾರಿಗಳು 434 ದಾಳಿಗಳನ್ನು ನಡೆಸಿ 14 ಕಿಶೋರ ಕಾರ್ಮಿಕರನ್ನು ಪತ್ತೆ ಹಚ್ಚಿ 12 ಜನ ಮಾಲೀಕರ ವಿರುದ್ಧ ಮೊಕದ್ದಮೆ ದಾಖಲಿಸಿ, 20000 ದಂಡ ವಸೂಲಿ ಮಾಡಲಾಗಿದೆ ಎಂದರು.

ದಾಳಿ ಅಥವಾ ತಪಾಸಣೆ ವೇಳೆ ಪತ್ತೆಯಾಗುವ ಬಾಲ ಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರು ಪಡಿಸಿದ ನಂತರ ಅವರ ಅರ್ಹತೆಯ ಅನುಗುಣವಾಗಿ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಥವಾ ಸರ್ಕಾರಿ ಸೌಮ್ಯದಲ್ಲಿರುವ ವಸತಿಶಾಲೆಗಳಿಗೆ ದಾಖಲಿಸಿ, ರಕ್ಷಣೆಯ ಜೊತೆಗೆ ಪುನರ್ವಸತಿ ಯು ಸಹ ಅತಿಮುಖ್ಯ ಎಂದರು.

### ಆತ್ಮವಿಶ್ವಾಸದಿಂದ ಬದುಕನ್ನು ಎದುರಿಸಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಪಿರಿಯಾಪಟ್ಟಣ

ಆತ್ಮ ವಿಶ್ವಾಸದ ಮೂಲಕ ಬದುಕನ್ನು ಎದುರಿಸಿ ಗೆಲ್ಲುವ ಮನಸ್ಥಿತಿಯನ್ನು ಅಂಗವಿಕಲರು ಬೆಳೆಸಿಕೊಳ್ಳಬೇಕು. ಅದಕ್ಕೆ ಪೂರಕವಾಗಿ ಸರ್ಕಾರ ವಿವಿಧ ಯೋಜನೆಗಳ ಮೂಲಕ ಅವರನ್ನು ಪ್ರೋತ್ಸಾಹಿಸುವ ಕೆಲಸ ಮಾಡುತ್ತದೆ ಎಂದು ಶಾಸಕ ಕೆ.ವೆಂಕಟೇಶ್ ತಿಳಿಸಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ತಾಲ್ಲೂಕು ಪಂಚಾಯಿತಿ ಅನುದಾನದಲ್ಲಿ ವಿಕಲಚೇತನರಿಗೆ ತ್ರಿಚಕ್ರ ವಾಹನ, ಸ್ಮಾರ್ಟ್ ಫೋನ್, ಎಲೆಕ್ಟ್ರಿಕಲ್ ಬೈಸಿಕಲ್ ಸೇರಿದಂತೆ ವಿವಿಧ ಸೌಲಭ್ಯಗಳನ್ನು ವಿತರಿಸಿ ಮಾತನಾಡಿದರು.

ಅಂಗವಿಕಲತೆ ಎಂದರೆ ದೌರ್ಬಲ್ಯವಲ್ಲ, ಅದು ಸಮಾಜದ ಜವಾಬ್ದಾರಿ. ತ್ರಿಚಕ್ರ ವಾಹನ ನಿಮ್ಮ ಸ್ವಾತಂತ್ರ್ಯದ ಸಂಕೇತ. ನಿಮ್ಮ ಕನಸುಗಳನ್ನು ಸಾಧಿಸಲು ತ್ರಿಚಕ್ರ ವಾಹನ ಸಹಾಯಕವಾಗಲಿ. ಬದುಕಿನಲ್ಲಿ ಹೊಸ ಬೆಳಕು ತರುವಂತಾಗಲಿ. ವಾಹನ ಚಾಲನೆ ಮಾಡುವಾಗ ಹೆಚ್ಚು ಜಾಗೃತಿ ವಹಿಸಬೇಕು. ಅಂಗವಿಕಲರು ಆತ್ಮವಿಶ್ವಾಸ ಮತ್ತು ವೃತ್ತಿಪರ ಕೌಶಲದಿಂದ ಸ್ವಾವಲಂಬಿ ಜೀವನ ನಡೆಸಬೇಕು. ಸ್ವಾವಲಂಬಿ ಬದುಕಿಗಾಗಿ ಸರ್ಕಾರಿ ಸೌಲಭ್ಯ, ಉದ್ಯೋಗ ತರಬೇತಿ ಮತ್ತು ಆರ್ಥಿಕ ನೆರವು ಅತ್ಯಗತ್ಯ. ಕೌಶಲ ತರಬೇತಿ ಕೇಂದ್ರ, ವಿಕಲಚೇತನರ ಅಭಿವೃದ್ಧಿ ನಿಗಮದ ಸಾಲ ಸೌಲಭ್ಯ ಪಡೆದು ಮುಖ್ಯವಾಹಿನಿಗೆ ಬರಲು ಸಹಕಾರಿಯಾಗಿವೆ. ಉದ್ಯೋಗ ಹಾಗೂ ಇತರೆ ಅಗತ್ಯಗಳಿಗೆ ಓಡಾಡಲು ಅಂಗವಿಕಲರಿಗೆ ತ್ರಿಚಕ್ರ ವಾಹನ ಜೊತೆಗೆ, ಮನೆ ದುರಸ್ತಿಗೆ ಸಹಾಯಧನ, ಸೋಲಾರ್ ದೀಪ, ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ನೀಡಲಾಗುತ್ತಿದೆ ಎಂದರು.

### ಮಡಿಲಲ್ಲಿ 10 ತಿಂಗಳ ಮಗುವನ್ನಿಟ್ಟುಕೊಂಡು ಮಹಿಳೆ ಬೇಡಿಕೊಂಡರೂ ದಾಳಿ ನಡೆಸಿದ ದುಷ್ಕರ್ಮಿಗಳು

• ಉದಯವಾಹಿನಿ, ಮಂಡ್ಯ

ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಕುಟುಂಬದ ಮೇಲೆ ಅಪರಿಚಿತರ ಗುಂಪೊಂದು ಹಲ್ಲೆ ಎಸಗಿರುವ ಘಟನೆ ಜುಲೈ 5ರಂದು ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇಯಲ್ಲಿ ನಡೆದಿದ್ದು, ಇದಕ್ಕೆ ಸಂಬಂಧಿಸಿದಂತೆ ಇನ್ನಷ್ಟು ಬೆಚ್ಚಿಬೀಳಿಸುವ ವಿವರ ಹೊರ ಬಿದ್ದಿದೆ. ಕಾರ್‌ನಲ್ಲಿ ಮಹಿಳೆ ತಮ್ಮಲ್ಲಿದ್ದ ಚಿನ್ನ ತೆಗೆದುಕೊಳ್ಳುವಂತೆ ಹೇಳಿದರೂ ಆಕ್ರಮಣಕಾರರು ಸುಮ್ಮನಾಗಲಿಲ್ಲ. ಕ್ಷುಲ್ಲಕ ಕಾರಣಕ್ಕೆ ಮಹಿಳೆ, ಅವರ ಪತಿ ಮತ್ತು ಕುಟುಂಬಸ್ಥರ ಮೇಲೆ ದಾಳಿ ನಡೆಸಿದರು ಎಂದು ಪೊಲೀಸರು ತಿಳಿಸಿದ್ದಾರೆ. ಸದ್ಯ ರೋಡ್ ರೇಜ್ ನಡೆಸಿದ ಐವರನ್ನು ಬಂಧಿಸಲಾಗಿದ್ದು, ಸಂತ್ರಸ್ತ. ಕಾರ್ ಮಾಲಕ ಸಾಗರ್ ಕುಮಾರ್ ತಮಗಾದ ಭೀಕರ ಅನುಭವವನ್ನು ವಿವರಿಸಿದ್ದಾರೆ. ಜುಲೈ 5ರ ರಾತ್ರಿ ಸುಮಾರು 10.30ರ ವೇಳೆಗೆ ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಈ ಘಟನೆ ನಡೆದಿದ್ದು, ಹಿಂದೆ ಚಲಿಸುತ್ತಿದ್ದ ವಾಹನದ ಡ್ಯಾಶ್‌ಕ್ಯಾಮ್‌ನಲ್ಲಿ ದುಷ್ಕರ್ಮಿಗಳ ಕೃತ್ಯ ಸೆರೆಯಾಗಿದೆ.

ಸಂತ್ರಸ್ತ ಸಾಗರ್ ಕುಮಾರ್ ಎನ್‌ಡಿಟಿವಿ ಜತೆ ಮಾತನಾಡಿ, ಸುಮಾರು 9 ಮಂದಿಯ ಗುಂಪು ತಮ್ಮ ಮೇಲೆ ದಾಳಿ ನಡೆಸಿತು ಎಂದಿದ್ದಾರೆ. ಕುಟುಂಬಸ್ಥರೊಂದಿಗೆ ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಸಾಗುತ್ತಿದ್ದಾಗ ಇದ್ದಕ್ಕಿದ್ದಂತೆ ದಾಳಿ ಗುಂಪು ದಾಳಿ ನಡೆಸಿದ್ದು, ಇದರಿಂದ ಪತ್ನಿ ಆಘಾತಕ್ಕೊಳಗಾಗಿದ್ದಾರೆ ಎಂದು ಸಾಗರ್ ವಿವರಿಸಿದ್ದಾರೆ. ನಾನು, ಪತ್ನಿ ಮತ್ತು 10 ತಿಂಗಳ ಮಗು ಕುಟುಂಬಸ್ಥರೊಂದಿಗೆ ಪ್ರಯಾಣಿಸುತ್ತಿದ್ದಾಗ ಅವರು ಕಾರ್ ಅಡ್ಡಗಟ್ಟಿ ದಾಳಿ ನಡೆಸಿದರು.

### ಎಸ್‌ಐಆರ್ ಜಾರಿಗೆ ತಂದ ಬಿಜೆಪಿಯಿಂದಲೇ ವಿರೋಧ..! : ಎಸ್.ಆರ್. ಶ್ರೀನಿವಾಸ್

• ಉದಯವಾಹಿನಿ, ಗುಬ್ಬಿ

ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕಾರ್ಯಕ್ರಮ ದೇಶದಲ್ಲಿ ಜಾರಿಗೆ ತಂದ ಬಿಜೆಪಿ ಪಕ್ಷ ನಮ್ಮ ರಾಜ್ಯದಲ್ಲಿ ವಿರೋಧ ವ್ಯಕ್ತಪಡಿಸಿರುವುದು ಹಾಸ್ಯಾಸ್ಪದ ಎನಿಸುತ್ತದೆ. ಎಲ್ಲಾ ಪಕ್ಷದಲ್ಲಿ ಬೂತ್ ಮಟ್ಟದ ಏಜೆಂಟ್ ನೇಮಕ ಮಾಡಿ ತರಬೇತಿ ನೀಡಿ ಪರಿಷ್ಕರಣೆ ನಡೆಸಿದ್ದರೂ ಇಲ್ಲಸಲ್ಲದ ಆರೋಪ ಮಾಡುವುದು ಸರಿಯಲ್ಲ ಎಂದು ಶಾಸಕ ಎಸ್.ಆರ್. ಶ್ರೀನಿವಾಸ್ ಹೇಳಿದರು. ತಾಲ್ಲೂಕಿನ ಕಸಬ ಹೋಬಳಿ ಪತ್ರೆ ಮತ್ತಿಘಟ್ಟ ಹಾಗೂ ಕರೆಕುರಿಹಟ್ಟಿ ಗ್ರಾಮದಲ್ಲಿ ಒಂದು ಕೋಟಿ ರೂಗಳ ಸಿಸಿರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದ ಅವರು ಈಗಾಗಲೇ ಮ್ಯಾಪಿಂಗ್ ಮೂಲಕ ಶೇ.98.07 ರಷ್ಟು ಮತದಾರರು ಅರ್ಹರು ಎನ್ನಲಾಗಿದೆ. ಉಳಿದ ಒಂದು ಪರ್ಸೆಂಟ್ ಮತದಾರರು ತಮ್ಮ ದಾಖಲಾತಿ ನೀಡುತ್ತಾರೆ. ಅಚ್ಚುಕಟ್ಟಾಗಿ ನಡೆದ ಎಸ್‌ಐಆರ್ ಕಾರ್ಯದಲ್ಲಿ ಗೊಂದಲ ಮೂಡಿಸುವ ಬಿಜೆಪಿಯ ಡೋಂಗಿ ಆಟ ಏನೂ ಎಂದು ತಿಳಿಯಲಾಗುತ್ತಿಲ್ಲ ಎಂದು ಛೇಡಿಸಿದರು. ಪಶ್ಚಿಮ ಬಂಗಾಳದಲ್ಲಿ ಮಾಡಿದಂತೆ ಬಿಜೆಪಿಗೆ ಬಾರದ ಮತಗಳನ್ನು ಕಿತ್ತು ಹಾಕಲು ನಮ್ಮಲ್ಲಿ ಆಗುತ್ತಿಲ್ಲ ಎಂದು ನೋವು ಪಡುತ್ತಿರುವ ಬಿಜೆಪಿ ಪಕ್ಷದವರು ನಮ್ಮ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವ ಕಾರಣವನ್ನೇ ಮುಂದಿಟ್ಟುಕೊಂಡು ಸಲ್ಲದ ಆರೋಪಕ್ಕೆ ಮುಂದಾಗಿದೆ.


ಕಾಂಗ್ರೆಸ್ ಕಾರ್ಯಕರ್ತರು ಎಲ್ಲೆಡೆ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದಾರೆ. ಅವರ ಪಕ್ಷದ ಬಿಎಲ್‌ಎ 2 ಕೆಲಸ ಮಾಡಬೇಕಿದೆ ಎಂದರು. ಕುಮಾರಸ್ವಾಮಿ ಅವರು ಹತ್ತು ಸಾವಿರ ಓಟು ಅನರ್ಹ ಎಂದು ಒಂದು ಕೋಮಿನವರನ್ನು ದೂರುತ್ತಿದ್ದಾರೆ. ಜೆಡಿಎಸ್ ಪಕ್ಷಕ್ಕೆ ಮತ ನೀಡುತ್ತಿದ್ದ ಮುಸ್ಲಿಂ ಬಾಂಧವರು ಈ ಮೊದಲು ಬೇಕಿತ್ತು. ಈಗ ಮತ ಹಾಕಲಿಲ್ಲ ಎಂದು ದೂರುವುದು ಸರಿಯಲ್ಲ ಎಂದ ಅವರು ಶೀಘ್ರದಲ್ಲಿ ನಮ್ಮ ಸರ್ಕಾರ ಸ್ಥಳೀಯ ಚುನಾವಣೆ ನಡೆಸಲಿದೆ. ಮೀಸಲಾತಿ ಮಾತ್ರ ಬಾಕಿ ಇದೆ ಎಂದರು.

# ಅಪ್ರಾಪ್ತ ಗರ್ಭಿಣಿಯರ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಲು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಸೂಚನೆ

• ಉದಯವಾಹಿನಿ ಮಂಗಳೂರು

ಜಿಲ್ಲೆಯಲ್ಲಿರುವ ಎಲ್ಲಾ ಸ್ಕ್ಯಾನಿಂಗ್ ಕೇಂದ್ರಗಳು ಗರ್ಭಿಣಿಯರು ಸ್ಕ್ಯಾನಿಂಗ್ ಬಂದಾಗ ಅವರ ವಯಸ್ಸನ್ನು ದೃಢಪಡಿಸಿಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೂಚಿಸಿದೆ. ಜಿಲ್ಲಾ ಆರೋಗ್ಯ ಅಧಿಕಾರಿ ಕಚೇರಿಯಲ್ಲಿ ಜಿಲ್ಲಾ ಸಲಹಾ ಸಮಿತಿ ಸಭೆಯು (ಪಿ.ಸಿ.ಪಿ.ಎನ್.ಡಿ.ಟಿ) ಡಾ.ಅಮೃತಾ ಭಂಡಾರಿ ಅಧ್ಯಕ್ಷತೆಯಲ್ಲಿ ನಡೆಯಿತು.

ಸ್ಕ್ಯಾನಿಂಗ್‌ಗೆ ಬಂದ ಗರ್ಭಿಣಿಯರ ವಯಸ್ಸಿನ ಬಗ್ಗೆ ದಾಖಲೆಗಳನ್ನು ಪರಿಶೀಲಿಸಬೇಕು. 18 ವರ್ಷದೊಳಗಿನ ಗರ್ಭಿಣಿಯರು ಕಂಡು ಬಂದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.



ಉದಯವಾಹಿನಿ ಚಿತ್ರ

2026 ರಲ್ಲಿ ಏಪ್ರಿಲ್‌ನಿಂದ ಜೂನ್‌ವರೆಗೆ ಜಿಲ್ಲೆಯಲ್ಲಿ 2911 ಗಂಡು, 2872 ಹೆಣ್ಣು ಜನನವಾಗಿದ್ದು, ಲಿಂಗಾನುಪಾತ 987 ಇದೆ ಎಂದು ಸಭೆಗೆ ತಿಳಿಸಲಾಯಿತು.

ಸಭೆಯಲ್ಲಿ ಹೊಸದಾಗಿ ಸ್ಕ್ಯಾನಿಂಗ್ ಉಪಕರಣಗಳನ್ನು ಖರೀದಿಸಿದ ಸಂಸ್ಥೆಗಳ ಅರ್ಜಿಗಳನ್ನು ಪರಿಶೀಲಿಸಲಾಯಿತು.

ಸಲಹಾ ಸಮಿತಿಯು ಆಸ್ಪತ್ರೆಗೆ ತಪಾಸಣೆಗೆ ಭೇಟಿ ನೀಡಿದ ಸಂದರ್ಭ ಕಂಡುಬಂದ ನ್ಯೂನತೆಗಳ ಕುರಿತು ಚರ್ಚಿಸಲಾಯಿತು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ಆಸ್ಪತ್ರೆ ಹಾಗೂ ಕ್ಲಿನಿಕ್‌ಗಳು ''ಪ್ರಾಣಿಗಳಿಗೆ ಮಾತ್ರ ಸ್ಕ್ಯಾನ್' ಎಂಬ ಫಲಕವನ್ನು ತಮ್ಮ ಸಂಸ್ಥೆಯಲ್ಲಿ ಪ್ರದರ್ಶನ ಮಾಡಲು ಹಾಗೂ ಪ್ರಾಣಿಗಳನ್ನು ಹೊರತುಪಡಿಸಿ ಮನಷ್ಯರಿಗೆ ಸ್ಕ್ಯಾನ್ ಮಾಡಲಾಗುವುದಿಲ್ಲ ಎಂಬ ನೋಟರಿ ಅಫಿದಾವಿತ್‌ನ್ನು ಸಂಸ್ಥೆಯವರು ನೀಡಬೇಕಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು.

ಏಪ್ರಿಲ್ 2025 ರಿಂದ ಮಾರ್ಚ್ 2026 ರವರೆಗೆ ಖಾಸಗಿ 681 ಹಾಗೂ ಸರ್ಕಾರಿ 39 ಸ್ಕ್ಯಾನಿಂಗ್ ಸೆಂಟರ್‌ಗಳ ತಪಾಸಣೆ ನಡೆಸಲಾಗಿರುತ್ತದೆ. ತಾಲ್ಲೂಕು ಆರೋಗ್ಯಾಧಿಕಾರಿಗಳು ಖಾಸಗಿ 75 ಹಾಗೂ ಸರ್ಕಾರಿ 9 ಸ್ಕ್ಯಾನಿಂಗ್ ಸೆಂಟರ್‌ಗಳ ತಪಾಸಣೆ ನಡೆಸಿದ್ದಾರೆ ಎಂದು ಜಿಲ್ಲಾ ಅನುಷ್ಠಾನ ಅಧಿಕಾರಿ ಡಾ.ದೀಪಾ ಪ್ರಭು ಸಭೆಗೆ ಮಾಹಿತಿ ನೀಡಿದರು.

# ಡೆಂಗ್ಯೂ ನಿಯಂತ್ರಣಕ್ಕೆ ಜನ ಸಮುದಾಯದ ಸಹಕಾರ ಮುಖ್ಯ ಮಹೇಶ ಡಿ.

## ಡೆಂಗ್ಯೂ ತಪ್ಪಿಸಲು ನೀವು ಎಷ್ಟೇ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡರೂ, ಕೆಲವೊಮ್ಮೆ ಅದು ದಾಳಿ ಮಾಡುತ್ತದೆ

• ಉದಯವಾಹಿನಿ ಚಿತ್ರದುರ್ಗ:

ಸೊಳ್ಳೆಗಳ ನಿಯಂತ್ರಣ ಮಾಡದೆ, ಸೊಳ್ಳೆಗಳ ಕಡಿತ ನಿರ್ಲಕ್ಷ್ಯ ಮಾಡಿದರೆ ಡೆಂಗ್ಯೂ ಹಾಗೂ ಇತರೇ ಕೀಟಜನ್ಯ ಸಾಂಕ್ರಾಮಿಕ ರೋಗಗಳು ಖಚಿತವಾಗಿ ಬರುತ್ತವೆ, ಸೊಳ್ಳೆ ಕೀಟ ಚಿಕ್ಕದಾದರೂ ಕಾಟ ದೊಡ್ಡದು ಎಂಬಂತೆ ಸೊಳ್ಳೆಗಳ ಉತ್ಪತ್ತಿ, ನಿಯಂತ್ರಣದಿಂದ ಮಾತ್ರ ಕೀಟಜನ್ಯ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಸಾಧ್ಯ

- ಡೆಂಗ್ಯೂ ವಿರೋಧಿ ಮಾಸಚರಣೆ
- ಸೊಳ್ಳೆಗಳ ಉತ್ಪತ್ತಿ ತಾಣಗಳ
- ನೈಸರ್ಗಿಕ ನೀರಿನ ತಾಣಗಳಿಗೆ

ಸೊಳ್ಳೆಗಳ ನಿಯಂತ್ರಣದಲ್ಲಿ ಜನ ಸಮುದಾಯದ ಸಹಕಾರ ಮುಖ್ಯ ಎಂದು ಅರೋಗ್ಯ ನೀರಿಕ್ಷಣಾಧಿಕಾರಿ ಮಹೇಶ ಡಿ ಅವರು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ, ಬೆಳಗಟ್ಟ ಅರೋಗ್ಯ ಕೇಂದ್ರ ಮತ್ತು ಸರ್ಕಾರಿ ಪ್ರೌಡಶಾಲೆಯ ಇವರ ಸಹಯೋಗದೊಂದಿಗೆ ಶಾಲೆಯಲ್ಲಿ ಡೆಂಗ್ಯೂ ವಿರೋಧಿಮಾಸಚರಣೆ ಕಾರ್ಯಕ್ರಮ ಹಮ್ಮಿಕೊಂಡು ಡೆಂಗಿ ಸೊಳ್ಳೆ ಸಂತಾನೋತ್ಪತ್ತಿ ತಡೆಗೆ ಡೆಂಗಿ ಹಾಗೂ ಇನ್ನಿತರ ಕೀಟಜನ್ಯ ಸಾಂಕ್ರಾಮಿಕ ರೋಗಗಳ ನಿಯಂತ್ರಣದ, ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತ ತಿಳಿಸಿದರು.

**ಡೆಂಗ್ಯೂ ವಿರೋಧಿ ಮಾಸಚರಣೆ**

ಡೆಂಗಿ ಮುಂಗಾರು ಮಳೆಯ ಸಂದರ್ಭದಲ್ಲಿ ಹೆಚ್ಚುವುದು ಸಾಮಾನ್ಯ, ಅದ್ದರಿಂದ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ, ಟೈರು, ಚಿಪ್ಪು, ಖಾಲಿ ಬಾಟಲಿಗಳಲ್ಲಿ, ಪ್ಲಾಸ್ಟಿಕ್, ಘನ ತಾಜ್ಯಗಳಲ್ಲಿ ನೀರು ನಿಲ್ಲದಂತೆ, ಪರಿಸರ ಸ್ವಚತೆಯಿಂದ, ಮನೆಯಲ್ಲಿ ಇರುವ



ಉದಯವಾಹಿನಿ ಚಿತ್ರ

ನೀರಿನ ಸಂಗ್ರಹ ಮಾಡುವ ಪರಿಕರಗಳನ್ನು ಸರಿಯಾಗಿಮುಚ್ಚುವುದರಿಂದ, ಸೊಳ್ಳೆ ಪರದೆಗಳನ್ನು ಬಳಸುವುದರಿಂದ, ಸೊಳ್ಳೆಗಳ ಉತ್ಪತ್ತಿ ತಾಣಗಳ ನಾಶ ಮಾಡುವುದರಿಂದ, ಸೊಳ್ಳೆ ಕಡಿತವನ್ನು ತಪ್ಪಿಸಲು ಪೂರ್ಣ ಪ್ರಮಾಣದ ತೋಳುಗಳನ್ನು ಹೊಂದಿರುವ ಉಡುಪುಗಳನ್ನು ಧರಿಸುವುದರಿಂದ ಡೆಂಗ್ಯೂದತಂಹ ಕೀಟಜನ್ಯ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಮಾಡಬಹುದು.

ಕೀಟಜನ್ಯ ಸಾಂಕ್ರಾಮಿಕ ರೋಗಗಳು ಹೆಚ್ಚಾಗದಂತೆ ಅರೋಗ್ಯ ಇಲಾಖೆಯಿಂದ ನಿರಂತರವಾಗಿ ಲಾರ್ವ ಸಮೀಕ್ಷೆ ನಡೆಸಿ ಅರೋಗ್ಯ ಸಿಬ್ಬಂದಿ ವರ್ಗದವರು ಮತ್ತು ಅಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ಅರಿವು ಮೂಡಿಸಿವುದರ ಜತೆಗೆ ಶಾಲೆ ಕಾಲೇಜುಗಳಲ್ಲಿ, ಅರೋಗ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಡೆಂಗಿಯಂತಹ ಮಾರಕ ಸಾಂಕ್ರಾಮಿಕ ರೋಗಗಳ ಬಗ್ಗೆ ಮಾಹಿತಿ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಹಮ್ಮಿಕೊಳ್ಳಲಾಗಿದೆ.

> ಡೆಂಗ್ಯೂ ತಪ್ಪಿಸಲು ನೀವು ಎಷ್ಟೇ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡರೂ, ಕೆಲವೊಮ್ಮೆ ಅದು ದಾಳಿ ಮಾಡುತ್ತದೆ.ಡೆಂಗ್ಯೂ ಜ್ವರದ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯಕೀಯ ಚಿಕಿತ್ಸೆ ಪಡೆಯುವುದರಿಂದ ಸ್ಥಿತಿ ಹದಗೆಡುವುದನ್ನು ತಡೆಯಬಹುದು.
>
> -ಅರೋಗ್ಯ ನೀರಿಕ್ಷಣಾಧಿಕಾರಿ ಮಹೇಶ ಡಿ

ಅರೋಗ್ಯ ಕೇಂದ್ರ ವ್ಯಾಪಿಯ ಗ್ರಾಮೀಣ ಪ್ರದೇಶಗಳಲ್ಲಿ ಅಶಾ ಕಾರ್ಯಕರ್ತೆಯರಿಂದ ತಿಂಗಳಲ್ಲಿ ಎರಡು ಬಾರಿ ಲಾರ್ವ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ, ಗ್ರಾಮ ಅರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕಾಹಾರ ಸಮಿತಿಯ ಸಭೆಗಳಲ್ಲಿ, ಶಾಲೆ ಕಾಲೇಜುಗಳಲ್ಲಿ, ಗುಂಪು ಸಭೆಗಳು, ತಾಯಂದಿರ ಸಭೆಗಳನ್ನು ನಡೆಸಿ ಕರಪತ್ರಗಳನ್ನು ವಿತರಿಸಿ, ಅರೋಗ್ಯ ಮಾಹಿತಿ ಶಿಕ್ಷಣ ನೀಡಿ ಡೆಂಗ್ಯೂ ಜಾಗೃತಿಯನ್ನು ಮೂಡಿಸಲಾಗುತ್ತಿದೆ.

**ಪಪ್ಪಾಯಿ ಎಲೆಯ ರಸ ತುಂಬಾ ಜನಪ್ರಿಯ**

ಡೆಂಗ್ಯೂ ಸಮಯದಲ್ಲಿ ಕೆಲವರು ಪಪ್ಪಾಯಿ ಎಲೆಯ ರಸವನ್ನು ಸೇವಿಸುತ್ತಾರೆ. ಇದು ತುಂಬಾ ಜನಪ್ರಿಯವಾಗಿದೆ. ಆದರೆ ಇದು ಪರ್ಯಾಯವಲ್ಲ. ಅಲ್ಲದೆ, ಮಸಾಲೆಯುಕ್ತ ಮತ್ತು ಕರಿದ ಆಹಾರಗಳನ್ನು ತಪ್ಪಿಸಬೇಕು. ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಆಹಾರವನ್ನು ಸೇವಿಸಿ. ಇವೆಲ್ಲವೂ ಡೆಂಗ್ಯೂನಿಂದ ಬೇಗನೆ ಚೇತರಿಸಿಕೊಳ್ಳಲು ನಿಮಗೆ ಸಹಾಯ ಮಾಡುತ್ತದೆ.


ಮನೆಮನೆಗಳಲ್ಲಿ ನೀರಿನ ಸಂಗ್ರಹ ಪರಿಕಾರಗಳ, ಸ್ವಚ್ಚತೆಯ ಬಗ್ಗೆ ಒಣ ದಿನಗಳನ್ನು ಆಚರಿಸುವ ಬಗ್ಗೆ, ಮುಂಜಾನೆ ಮತ್ತು ಮುಸ್ಸಂಜೆಯಲ್ಲಿ ಸೊಳ್ಳೆ ಬತ್ತಿಗಳನ್ನು ಉರಿಸುವ ಕುರಿತು, ಮನೆಯ ಕಿಟಕಿಗಳಿಗೆ ಜಾಲರ ಅಳವಡಿಸುವ, ಸೊಳ್ಳೆ ಪರದೆ ಉಪಯೋಗಿಸುವ ಬಗ್ಗೆ, ಘನ ತ್ಯಾಜ್ಯ ವಸ್ತುಗಳನ್ನು ಸರಿಯಾದ ಕ್ರಮದಲ್ಲಿ ಮತ್ತು ಸೂಕ್ತ ಸ್ಥಳಗಳಲ್ಲಿ ವಿಲೇವಾರಿ ಮಾಡುವ ಬಗ್ಗೆ ನೈಸರ್ಗಿಕ ನೀರಿನ ತಾಣಗಳಿಗೆ ಲಾರ್ವ ಹಾರಿ ಮೀನುಗಳಾದ ಗಪ್ಪಿ ಗಂಬೂಸ್ಯಿದಂತಹ ಮೀನುಗಳನ್ನು ಬಿಡುವ ಕುರಿತು ಮಾಹಿತಿ ಶಿಕ್ಷಣ ನೀಡಲಾಗುತ್ತಿದೆ ಎಂದು ತಿಳಿಸಿದರು.

# ಬಸರಕೋಡದ ಪವಾಡ ಬಸವೇಶ್ವರ ದೇವಸ್ಥಾನದ 32 ಕೆಜಿ ಬೆಳ್ಳಿ ಮುಖವಾಡ ಕಳ್ಳತನ: ತನಿಖೆ ತೀವ್ರಗೊಳಿಸಿದ ಪೊಲೀಸ್ ವಿಶೇಷ ತಂಡ ರಚನೆ

• ಉದಯವಾಹಿನಿ ಮುದ್ದೇಬಿಹಾಳ:

ತಾಲ್ಲೂಕಿನ ಐತಿಹಾಸಿಕ ಹಿನ್ನೆಲೆಯುಳ್ಳ ಬಸರಕೋಡ ಗ್ರಾಮದ ಶ್ರೀ ಪವಾಡ ಬಸವೇಶ್ವರ ದೇವಾಲಯದ ಕರ್ತೃ ಗದ್ದುಗೆ ಮೇಲಿದ್ದ 32 ಕೆಜಿ ತೂಕದ ಬೆಳ್ಳಿಯ ದೇವರ ಮುಖವಾಡ ಪ್ರತಿಮೆ ಕಳ್ಳತನವಾಗಿರುವ ಆಘಾತಕಾರಿ ಘಟನೆ ಜುಲೈ 6ರ ಸೋಮವಾರ ಬೆಳಕಿಗೆ ಬಂದಿತ್ತು. ಲಕ್ಷಾಂತರ ಭಕ್ತರ ಆರಾಧ್ಯ ದೈವದ ಪ್ರತಿಮೆ ಕಳ್ಳತನವಾಗಿರುವುದರಿಂದ ಭಕ್ತ ವಲಯದಲ್ಲಿ ತೀವ್ರ ಆಕ್ರೋಶ ಮತ್ತು ಆತಂಕ ಮೂಡಿಸಿದ್ದು, ಪೊಲೀಸರು ಕಳ್ಳರ ಪತ್ತೆಗಾಗಿ ಚುರುಕಿನ ಕಾರ್ಯಾಚರಣೆ ಆರಂಭಿಸಿದ್ದಾರೆ.

ಘಟನಾ ಸ್ಥಳವಾದ ಪವಾಡ ಬಸವೇಶ್ವರ ದೇವಾಲಯಕ್ಕೆ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಲಕ್ಷ್ಮಣ ನಿಂಬರಗಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಪೊಲೀಸ್ ಅಧಿಕಾರಿಗಳಿಂದ ಘಟನೆಯ ಸಂಪೂರ್ಣ ಮಾಹಿತಿ ಪಡೆದುಕೊಂಡರು ಕಳ್ಳತನ ಪ್ರಕರಣದ ತನಿಖೆಗಾಗಿ ಬಾಗೇವಾಡಿ ಡಿವೈಎಸ್ಪಿ ಚಂದ್ರಕಾಂತ ನಂದರೆಡ್ಡಿ ನೇತೃತ್ವದಲ್ಲಿ ವಿಶೇಷ ತಂಡವನ್ನು ರಚಿಸಲಾಗಿದೆ. ಈ ತಂಡದಲ್ಲಿ ಮುದ್ದೇಬಿಹಾಳ ಸಿಪಿಐ ಮಹಮ್ಮದ್ ಫಸಿಯುದ್ದಿನ ಹಾಗೂ ಪಿಎಸೈ ಸಂಜಯ ತಿಪ್ಪರೆಡ್ಡಿ ಕಾರ್ಯನಿರ್ವಹಿಸುತ್ತಿದ್ದು, ಈಗಾಗಲೇ ತನಿಖೆಯನ್ನು ತೀವ್ರಗೊಳಿಸಲಾಗಿದೆ ಎಂದರು.



ಉದಯವಾಹಿನಿ ಚಿತ್ರ

ದೇವಾಲಯದ ಸಿಸಿ ಕ್ಯಾಮೆರಾಗಳು ಜೂನ್ 27ರಿಂದಲೇ ಬಂದ್ ಆಗಿದ್ದವು ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಎಸ್‌ಪಿ, ಕ್ಯಾಮೆರಾಗಳು ಯಾವ ಕಾರಣಕ್ಕಾಗಿ ಬಂದ್ ಆಗಿದ್ದವು ಎಂಬುದರ ಕುರಿತು ತನಿಖೆ ನಡೆಸಲಾಗುತ್ತಿದೆ.

ಅಲ್ಲದೆ, ಕಳ್ಳತನ ನಡೆದ ದಿನ ದೇವಾಲಯದಲ್ಲಿ 10 ರಿಂದ 11 ಜನರು ಮಲಗಿದ್ದರು. ತನಿಖೆಯ ವೇಳೆ ಹಲವು ಪ್ರಶ್ನೆಗಳು ಏಳುತ್ತಿದ್ದು, ಎಲ್ಲದಕ್ಕೂ ಉತ್ತರ ಹುಡುಕುವ ಪ್ರಾಮಾಣಿಕ ಪ್ರಯತ್ನವನ್ನು ಪೊಲೀಸ್ ಇಲಾಖೆ ಮಾಡುತ್ತಿದೆ, ಎಂದರು.

ಇದೇ ವೇಳೆ ಸಾರ್ವಜನಿಕರಲ್ಲಿ ಮನವಿ ಮಾಡಿದ ಅವರು, ದೇವಾಲಯ, ಮಸೀದಿ, ಚರ್ಚ್, ಬಂಗಾರದ ಅಂಗಡಿಗಳು, ಶಾಲೆ ಹಾಗೂ ಮನೆಗಳಲ್ಲಿ ಕಡ್ಡಾಯವಾಗಿ ನೈಟ್ ವಿಜನ್ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳಬೇಕು. ಈ ಬಗ್ಗೆ ಪೊಲೀಸ್ ಇಲಾಖೆ ನಿರಂತರವಾಗಿ ಜಾಗೃತಿ ಮೂಡಿಸುತ್ತಿದ್ದು, ಸಾರ್ವಜನಿಕರೂ ಸಹ ಜಾಗೃತರಾಗಬೇಕು, ಎಂದರು.

ಎಸ್‌ಪಿ ಭೇಟಿಯ ಸಂದರ್ಭದಲ್ಲಿ ಬಸರಕೋಡ ಗ್ರಾಮದ ನೂರಾರು ಮಹಿಳೆಯರು ಹಾಗೂ ಗ್ರಾಮಸ್ಥರು ದೇವಾಲಯದ ಪ್ರಾಂಗಣದಲ್ಲಿ ಜಮಾಯಿಸಿದ್ದರು. ನಮ್ಮ ಪವಾಡ ಮುತ್ಯಾ (ದೇವರ ಪ್ರತಿಮೆ) ನಮಗೆ ಮರಳಿ ಸಿಗಬೇಕು, ಕಳ್ಳರನ್ನು ಕೂಡಲೇ ಬಂಧಿಸಬೇಕೆಂದು ಮಾತನಾಡುತ್ತಿದ್ದ ದೃಶ್ಯಗಳು ಕಂಡು ಬಂದವು.

ಸದ್ಯ ಕರ್ತೃ ಗದ್ದುಗೆಯ ಮೇಲೆ ಹಳೆಯ ಬೆಳ್ಳಿಯ ವಿಗ್ರಹವನ್ನು ಪ್ರತಿಷ್ಠಾಪಿಸಿ ಪೂಜಾ ಕೈಂಕರ್ಯಗಳನ್ನು ಮುಂದುವರಿಸಲಾಗಿದೆ.

ಈ ಸಂದರ್ಭದಲ್ಲಿ ಬಾಗೇವಾಡಿ ಡಿವೈಎಸ್ಪಿ ಚಂದ್ರಕಾಂತ ನಂದರೆಡ್ಡಿ, ಸಿಪಿಐ ಮಹಮ್ಮದ್ ಫಸಿಯುದ್ದಿನ, ಪಿಎಸೈ ಸಂಜಯ ತಿಪ್ಪರೆಡ್ಡಿ, ಪಿಐ ಗುರುಶಾಂತ ಬಾಶ್ಯಾಳ, ದೇವಾಲಯ ಆಡಳಿತ ಮಂಡಳಿ ಅಧ್ಯಕ್ಷ ಕೆ. ವೈ. ಬಿರಾದಾರ ಹಾಗೂ ಸದಸ್ಯರಾದ ಎಸ್. ಬಿ. ನಾಡಗೌಡರ, ಎಸ್. ಎಸ್. ಹಂಡರಗಲ್ಲ ಉಪಸ್ಥಿತರಿದ್ದರು.



> ಲಕ್ಷಾಂತರ ಭಕ್ತರ ಭಾವನೆಗಳಿಗೆ ಈ ಘಟನೆಯಿಂದ ಧಕ್ಕೆಯಾಗಿದೆ. ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ಅತ್ಯಂತ ಮುತುವರ್ಜಿಯಿಂದ ಕಳ್ಳರ ಪತ್ತೆ ಕಾರ್ಯ ನಡೆಸುತ್ತಿದ್ದೇವೆ. ಕಳ್ಳರನ್ನು ಹಿಡಿಯುವುದು ನಮಗೆ ಸವಾಲಾಗಿದ್ದು, ನಮ್ಮ ಪೊಲೀಸ್ ತಂಡಗಳು ಶೀಘ್ರದಲ್ಲೇ ಆರೋಪಿಗಳನ್ನು ಪತ್ತೆ ಹಚ್ಚಲಿವೆ.
>
> -ಎಸ್‌ಪಿ ಲಕ್ಷ್ಮಣ ನಿಂಬರಗಿ

# ನಾಗರಹೊಳೆ ಹುಲಿ ಅಂಕೋಲಾ ಅರಣ್ಯದಲ್ಲಿ ಪತ್ತೆ !

• ಉದಯವಾಹಿನಿ ಅಂಕೋಲಾ:

ಕ್ಯಾಮೆರಾ ಟ್ರ್ಯಾಪ್‌ಗಳ ಮೂಲಕ ನಡೆಸಿದ ಹುಲಿ ಗಣತಿಯ ಪ್ರಕಾರ, ಅಂಕೋಲಾ ಅರಣ್ಯ ಪ್ರದೇಶದಲ್ಲಿ ಎರಡು ಹುಲಿಗಳಿರುವುದು ದೃಢಪಟ್ಟಿದೆ. ವಿಶೇಷವೆಂದರೆ, ಈ ಎರಡೂ ಹುಲಿಗಳು ವಲಸೆ ಬಂದದ್ದಾಗಿವೆ. ಒಂದು ಹುಲಿ 350 ಕಿಲೋಮೀಟರ್‌ಗಿಂತಲೂ ಹೆಚ್ಚು ದೂರದ ನಾಗರಹೊಳೆ ರಾಷ್ಟ್ರೀಯ ಉದ್ಯಾನದಿಂದ ಬಂದಿದ್ದರೆ, ಮತ್ತೊಂದು ಪಕ್ಕದ ಕಾಳಿ ಹುಲಿ ಸಂರಕ್ಷಿತ ಪ್ರದೇಶದಿಂದ ಬಂದಿದೆ. ಇತ್ತೀಚಿನ ಕೆನರಾ ವೃತ್ತದ ಹುಲಿ ಗಣತಿಯಲ್ಲಿ, ಅಂಕೋಲಾ ಅರಣ್ಯದಲ್ಲಿನ ಈ ಎರಡು ಹುಲಿಗಳು ಗುಳೆ ಮತ್ತು ಕೋಟಿಬಾವಿ ಅರಣ್ಯ ಪ್ರದೇಶಗಳಲ್ಲಿ ಪತ್ತೆಯಾಗಿವೆ.

ಸಾಮಾನ್ಯವಾಗಿ ಹುಲಿಗಳು ತಮ್ಮ ಮೂಲ ವಾಸಸ್ಥಳವನ್ನು ಬಿಟ್ಟು ಹೊಸ ಪ್ರದೇಶದಲ್ಲಿ ನೆಲೆಸುವುದು ಅಪರೂಪ ಹುಲಿಗಳು ತಮ್ಮ ಪ್ರದೇಶದ ಮೇಲೆ ಅತ್ಯಂತ ಪ್ರಬಲ ಸ್ವಾಮ್ಯಭಾವ ಹೊಂದಿರುವ ಪ್ರಾಣಿಗಳು. ಸಾಮಾನ್ಯವಾಗಿ ಅವು 6 ರಿಂದ 12 ಕಿಲೋಮೀಟರ್ ವ್ಯಾಪ್ತಿಯ ತಮ್ಮ ವಾಸಸ್ಥಳವನ್ನು ಕಾಪಾಡಿಕೊಳ್ಳುತ್ತವೆ.

ಆದರೆ ಇತ್ತೀಚಿನ ವರ್ಷಗಳಲ್ಲಿ ಅವು ಸಮೀಪದ ಅರಣ್ಯಗಳಿಗೆ ಪ್ರವೇಶಿಸುತ್ತಿರುವುದು ಹಾಗೂ ಕೆಲವು ಸಂದರ್ಭಗಳಲ್ಲಿ ನೂರಾರು ಕಿಲೋಮೀಟರ್ ದೂರ ಪ್ರಯಾಣಿಸುತ್ತಿರುವುದು ಗಮನಕ್ಕೆ ಬಂದಿದೆ ಎಂದು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಮುಖ್ಯ ವನ್ಯಜೀವಿ ಪಾಲಕ ಕುಮಾರ್ ಪುಷ್ಕರ್ ಹೇಳುತ್ತಾರೆ.

ಇಂತಹ ವರ್ತನೆಯನ್ನು ಅಧ್ಯಯನ ಮಾಡಲು ವಿಶೇಷವಾಗಿ ಕ್ಯಾಮೆರಾ ಟ್ರ್ಯಾಪ್‌ಗಳಂತಹ ತಂತ್ರಜ್ಞಾನ ಬಹಳ ಸಹಕಾರಿಯಾಗಿದೆ ಎಂದು ಅವರು ಹೇಳಿದರು.



ಉದಯವಾಹಿನಿ ಚಿತ್ರ

**ಕಾಳಿ ಹುಲಿ ಸಂರಕ್ಷಿತ ಪ್ರದೇಶ**

ಇತ್ತೀಚಿನ ವರ್ಷಗಳಲ್ಲಿ ಅಂಕೋಲಾ ಅರಣ್ಯದಲ್ಲಿ ಹುಲಿಗಳ ಉಪಸ್ಥಿತಿ ದಾಖಲಾಗಿರುವುದು ಇದೇ ಮೊದಲ ಬಾರಿ. ಕಾರವಾರ ಅರಣ್ಯ ಪ್ರದೇಶವು ಸುಮಾರು 1,18,561.352 ಹೆಕ್ಟೇರ್ ವಿಸ್ತೀರ್ಣ ಹೊಂದಿದ್ದು, ಇದು ಕಾಳಿ ಹುಲಿ ಸಂರಕ್ಷಿತ ಪ್ರದೇಶಕ್ಕೆ ಹೊಂದಿಕೊಂಡಿದೆ. ಇಲ್ಲಿ ಪೊದೆ ಅರಣ್ಯ, ಒಣ ಪರ್ಣಪಾತಿ, ತೇವಾಂಶಯುಕ್ತ ಪರ್ಣಪಾತಿ, ಅರೆ ಸದಾಹರಿದ್ವರ್ಣ ಹಾಗೂ ಸದಾಹರಿದ್ವರ್ಣ ಅರಣ್ಯಗಳ ಮಿಶ್ರಣವಿದೆ.

# 'ಗೃಹಜ್ಯೋತಿ' ಮಾಹಿತಿ ಸಂಗ್ರಹಕ್ಕೆ ಸರ್ವರ್ ಡೌನ್ ಸಮಸ್ಯೆ

• ಉದಯವಾಹಿನಿ ಶಿವಮೊಗ್ಗ,

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ 200 ಯೂನಿಟ್ ಉಚಿತ ವಿದ್ಯುತ್ ನೀಡುವ 'ಗೃಹಜ್ಯೋತಿ' ಯೋಜನೆಯಡಿ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳ ಮಾಹಿತಿ ಸಂಗ್ರಹಣೆ ಕಾರ್ಯವು, ಶಿವಮೊಗ್ಗ ಜಿಲ್ಲೆಯಾದ್ಯಂತ ಬಿರುಸಿನಿಂದ ನಡೆಯಲಾರಂಭಿಸಿದೆ. ಆದರೆ 'ಸರ್ವರ್ ಡೌನ್' ಸಮಸ್ಯೆಯು ಮಾಹಿತಿ ಸಂಗ್ರಹಣೆ ಕಾರ್ಯಕ್ಕೆ ಎಡರುತೊಡರಾಗಿ ಪರಿಣಮಿಸಿರುವ ದೂರುಗಳು ಮೆಸ್ಕಾಂ ಸಿಬ್ಬಂದಿಗಳ ವಲಯದಿಂದ ಕೇಳಿಬರಲಾರಂಭಿಸಿದೆ.ಮಾಹಿತಿ ಸಂಗ್ರಹಣೆಗಾಗಿ ಹೊಸ ಮೊಬೈಲ್ ಫೋನ್ ಆಪ್ ವೊಂದನ್ನು ಸರ್ಕಾರ ಪರಿಚಯಿಸಿದೆ. ಸದರಿ ಆಪ್ ನಲ್ಲಿ ಮನೆ ಮನೆಗೆ ತೆರಳಿ ದಾಖಲಾತಿಗಳ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಸುಮಾರು 5 ಹಂತಗಳಲ್ಲಿ ಮಾಹಿತಿ ಸಂಗ್ರಹಣೆ ಮಾಡಲಾಗುತ್ತಿದೆ.

ಆಪ್‌ನಲ್ಲಿ ಆಧಾರ್, ವೋಟರ್ ಐಡಿ, ರೇಷನ್ ಕಾರ್ಡ್ ಮಾಹಿತಿ ಪಡೆಯುವುದರ ಜೊತೆಗೆ ಫಲಾನುಭವಿಯ ಫೋಟೋ ತೆಗೆದುಕೊಳ್ಳುವ ಪ್ರಕ್ರಿಯೆಗಳು ಸೇರ್ಪಡೆಯಾಗಿವೆ. ನಂತರ ಅರ್ಜಿಯಲ್ಲಿ ಕೈಬರಹದ ಮೂಲಕ ಸದರಿ ಮಾಹಿತಿ ಭರ್ತಿಗೊಳಿಸಿ ಫಲಾನುಭವಿಯ ಸಹಿ ಪಡೆಯಲಾಗುತ್ತದೆ.

ಆದರೆ ಮೊಬೈಲ್ ಫೋನ್ ಆಪ್‌ನಲ್ಲಿ ಮಾಹಿತಿ ಸಂಗ್ರಹಣೆ ವೇಳೆ ಸರ್ವರ್ ಡೌನ್ ಸಮಸ್ಯೆ ಎದುರಾಗುತ್ತಿದೆ. ಇದರಿಂದ ಮಾಹಿತಿ ಸಂಗ್ರಹಣೆ ಕಾರ್ಯದಲ್ಲಿ ತೊಡಗಿರುವ ಮೆಸ್ಕಾಂ ಲೈನ್'ಮ್ಯಾನ್ ಗಳು ತೀವ್ರ ತೊಂದರೆ ಎದುರಿಸುವಂತಾಗಿದೆ. ಹಾಗೆಯೇ ನಾಗರಿಕರು ಕೂಡ ಕಿರಿಕಿರಿ ಅನುಭವಿಸುವಂತಾಗಿರುವ ದೂರುಗಳು ಕೇಳಿಬರುತ್ತಿವೆ. 'ಸರ್ವರ್ ಡೌನ್' ಸಮಸ್ಯೆಯಿಂದ ಆಪ್‌ನಲ್ಲಿ ಮಾಹಿತಿ ಸಂಗ್ರಹ ವೇಳೆ ಏಕಾಏಕಿ ಲಾಗ್ ಔಟ್ ಆಗುತ್ತಿದೆ. ಮತ್ತೆ ಸಿಬ್ಬಂದಿ ಒಟಿಪಿ ಸಂಖ್ಯೆ ನಮೂದಿಸಿ ಲಾಗ್ ಇನ್ ಆಗಿ, ಮಾಹಿತಿ ಅಪ್ಲೋಡ್ ಮಾಡಬೇಕಾಗುತ್ತದೆ.




ಉದಯವಾಹಿನಿ ಚಿತ್ರ

ಈ ಕಾರಣದಿಂದ ಆಪ್‌ನಲ್ಲಿ ಮಾಹಿತಿ ಸಂಗ್ರಹಣೆ ಕಾರ್ಯವು ಸಾಕಷ್ಟು ವಿಳಂಬವಾಗುತ್ತಿದೆ. ಸಾಕಷ್ಟು ಸಮಯ ವ್ಯಯವಾಗುತ್ತಿದೆ. ಈ ಕಾರಣದಿಂದ ಕೆಲ ಸಿಬ್ಬಂದಿಗಳು ಮುಂಜಾನೆ ಹಾಗೂ ರಾತ್ರಿ ವೇಳೆಯೂ ಮಾಹಿತಿ ಸಂಗ್ರಹಣೆ ಮಾಡುವಂತಾಗಿದೆ. ಈ ವೇಳೆ ಆಪ್‌ನಲ್ಲಿ ಸರ್ವರ್ ಡೌನ್ ಸಮಸ್ಯೆಯಿರುವುದಿಲ್ಲ ಎಂದು ಕೆಲ ಸಿಬ್ಬಂದಿಗಳು ಹೇಳುತ್ತಾರೆ

# ನಿವೃತ್ತಿಯಾದ ಸುಪ್ರೀಂ ನ್ಯಾಯಾಧೀಶರಿಂದ ತನಿಖೆ- ಕೆಪಿಸಿಸಿ ವಕ್ತಾರ ಅಮಳ ರಾಮಚಂದ್ರ

## ತನಿಖಾದಳಗಳನ್ನು ಕೈಯಲ್ಲಿಟ್ಟುಕೊಂಡಿರುವ ವ್ಯವಸ್ಥೆಯಲ್ಲಿ ನಿಜವಾದ ಸತ್ಯ ಹೊರಬರಲು ಸಾಧ್ಯವೇ ಇಲ್ಲ

• ಉದಯವಾಹಿನಿ ಪುತ್ತೂರು;

ವಿಶ್ವದಲ್ಲಿಯೇ ಭಾರತದ ಅಭಿಮಾನಕ್ಕೆ ಭಂಗ ತಂದ ದೇಶವೇ ನಾಚಿಕೆಯಿಂದ ತಲೆತಗ್ಗಿಸುವಂತೆ ಮಾಡಿದ ರಾಮಮಂದಿರದ ಖಜಾನೆ ಲೂಟಿ ಮಾಡಿದ ಪ್ರಕರಣವನ್ನು ಕಳೆದ 10 ವರ್ಷಗಳ ಹಿಂದೆ ನಿವೃತ್ತರಾದ ಸುಪ್ರೀಂ ಕೋರ್ಟಿನ ನ್ಯಾಯಾಧೀಶರಿಂದ ತನಿಖೆ ಮಾಡಿಸಬೇಕು. ಆಗ ಮಾತ್ರ ಇದರ ಹಿಂದಿರುವ ಕಾಣದ ಕೈಗಳು ಹಾಗೂ ಸತ್ಯ ಹೊರಬರಲಿದೆ ಎಂದು ಕೆಪಿಸಿಸಿ ವಕ್ತಾರ ಅಮಳ ರಾಮಚಂದ್ರ ಹೇಳಿದರು.

**1 : 'ಜೈಸ್ವಾಹಾ' ಘೋಷಣೆ ಬೆಸ್ಟ್**

**2 : ನಂಬಿಕೆಯ ನೆಲೆಯಲ್ಲಿ ಲೂಟಿ**

**3 : ಚಿನ್ನ, ಬೆಳ್ಳಿ ಮತ್ತು ನಗದು**

ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, 1989ರಲ್ಲಿ ಶಿಲಾಪೂಜನಾ ಹೆಸರಲ್ಲಿ ಮನೆ ಮನೆಯಿಂದ ಸಂಗ್ರಹಿಸಿದ ಅಂದಾಜು 1400 ಕೋಟಿ ಈಗದರ ಮಾರುಕಟ್ಟೆ ಮೌಲ್ಯ 17400 ಕೋಟಿ, ರಾಮಮಂದಿರ ತೀರ್ಥಕ್ಷೇತ್ರ ಟ್ರಸ್ಟ್ ಹೆಸರಲ್ಲಿ ದೇಶವಿದೇಶಗಳಿಂದ ಸಂಗ್ರಹಿಸಿದ 3264 ಕೋಟಿ ಹಾಗೂ ಈ ಭಕ್ತರು ರಾಮದೇವರಿಗೆ ಅರ್ಪಿಸಿದ ಕೋಟಿಗಟ್ಟಲೆ ಮೌಲ್ಯದ ಚಿನ್ನ, ಬೆಳ್ಳಿ ಮತ್ತು ನಗದು ಹಣವನ್ನು ಆರ್‌ಎಸ್‌ಎಸ್ ಮತ್ತು ಪರಿವಾರ ಸಂಘಟನೆಗಳು ನುಂಗಿ ನೀರು ಕುಡಿದಿವೆ ಎಂದು ಆರೋಪಿಸಿದ ಅವರು ಈ ಲೂಟಿ ಪ್ರಕರಣ ಬೆಳಕಿಗೆ ಬಂದ ಮೇಲೆ 3,264 ಕೋಟಿಯಲ್ಲಿ 2070 ಕೋಟಿ ಮಂದಿರ ನಿರ್ಮಾಣಕ್ಕೆ, ಇತರ ಖರ್ಚು ನೆಲೆಯಲ್ಲಿ 391 ಕೋಟಿ, ಉಳಿಕೆಯಾದ 800 ಕೋಟಿ ಬ್ಯಾಂಕಿನಲ್ಲಿ ಉಳಿತಾಯ ಮಾಡಲಾಗಿದೆ ಎಂಬ ಲೆಕ್ಕ ಕೊಟ್ಟಿದ್ದಾರೆ. ಹಾಗಾದರೆ ಮನೆ ಮನೆಗೆ ಇಟ್ಟಿಗೆ ಹೊತ್ತುಕೊಂಡು ಹೋಗಿ ಸಂಗ್ರಹಿಸಿದ 17400 ಕೋಟಿ ಎಲ್ಲಿ ಹೋಗಿದೆ ಎಂದು ಅವರು ಪ್ರಶ್ನಿಸಿದರು.



ಉದಯವಾಹಿನಿ ಚಿತ್ರ

> ಈಗ 8 ಮಂದಿಯನ್ನು ಬಂಧಿಸಿದ್ದಾರೆ. ಅವರೆಲ್ಲಾ ಅಲ್ಲಿನ ಕೆಲಸಗಾರರು. ಆದರೆ ಇದರ ಸೂತ್ರಧಾರಿಗಳಾದ 'ಕಿಂಗ್‌ಪಿನ್'ಗಳನ್ನು ತನಿಖಾದಾರರು ಮುಟ್ಟಲೂ ಹೋಗಿಲ್ಲ. ಅಂದರೆ ಪ್ರಕರಣದ ದಾರಿಯನ್ನು ಪೂರ್ಣವಾಗಿ ತಪ್ಪಿಸಲು ನಡೆಸುವ ಹುನ್ನಾರವೇ ಈ ತನಿಖೆಯ ನಾಟಕ ಎಂದು ಅವರು ಹೇಳಿದರು.
>
> -ವಕ್ತಾರ ಅಮಳ ರಾಮಚಂದ್ರ

> 40 ವರ್ಷಗಳಿಂದ ಶ್ರೀರಾಮ ಹೆಸರಲ್ಲಿ ಮಾಡುತ್ತಿರುವ ರಾಜಕೀಯ, ಧರ್ಮ-ಧರ್ಮಗಳ ನಡುವೆ ದ್ವೇಷ ಹುಟ್ಟಿಸಿದ ಈ ಬಿಜೆಪಿ ಸಂಘಪರಿವಾರಗಳು ರಾಮಮಂದಿರದಲ್ಲಿಯೇ ನಡೆಸಲಾದ ಹಗಲು ದರೋಡೆ ಬಗ್ಗೆ ವಿಚಾರದ ಬಗ್ಗೆ ಮಾತೇ ಆಡುತ್ತಿಲ್ಲ. ಪುತ್ತೂರಿನ ಹಿಂದೂ ರಕ್ಷಕರು ಮೌನಾಚರಣೆ ಮಾಡುತ್ತಿದ್ದಾರೆ.
>
> - ವಕ್ತಾರ ಅಮಳ ರಾಮಚಂದ್ರ

ರಾಮಮಂದಿರ ತೀರ್ಥಕ್ಷೇತ್ರ ಟ್ರಸ್ಟ್ ನಿರ್ಮಾಣ ಮಾಡಿದವರು ಪ್ರಧಾನಿ ಮೋದಿ. ಇದರಲ್ಲಿರುವ ಎಲ್ಲರೂ ಆರ್‌ಎಸ್‌ಎಸ್ ಮೂಲದವರು. ಕೋಟ್ಯಾನುಕೋಟಿ ಭಕ್ತರ ನಂಬಿಕೆಯ ನೆಲೆಯಲ್ಲಿ ಲೂಟಿ ಮಾಡುತ್ತಿರುವಾಗ ಈ ಚೌಕೀದಾರನೇ ಮೌನವಾಗಿದ್ದಾನೆ ಎಂದರೆ ಅದರಲ್ಲಿ ಶಾಮೀಲಾಗಿದ್ದಾನೆ ಎಂದೇ ಅರ್ಥ. ಇದೊಂದು ಆರ್‌ಎಸ್‌ಎಸ್ ಪ್ರೇರಿತ ವಿಷವರ್ತುಲ.

**ರಶೀದಿ ಹಿಡಿದುಕೊಂಡು ತನಿಖೆ ನಡೆಸಲಿ**

ಸಿ.ಟಿ.ರವಿ ದೇಶದಲ್ಲಿ ಮನೆ ಮನೆ ಸರ್ವೆ ಮಾಡಲಿ. ಯಾರು ಹಣ ಕೊಟ್ಟಿದ್ದಾರೆ. ಯಾರು ಕೊಟ್ಟಿಲ್ಲ ಎಂದು ರಶೀದಿ ಹಿಡಿದುಕೊಂಡು ತನಿಖೆ ನಡೆಸಲಿ. ಬಾಯಿಗೆ ಬಂದಂತೆ ಮಾತನಾಡುವುದಲ್ಲ. ಈ ದೇಶದ ಪ್ರತಿಯೊಬ್ಬ ಪ್ರಜೆಗೂ ಇದನ್ನು ಪ್ರಶ್ನಿಸುವ ಅಧಿಕಾರ ಇದೆ ಎಂಬುವುದನ್ನು ಅವರು ಅರಿತುಕೊಳ್ಳಲಿ ಎಂದು ತಿರುಗೇಟು ನೀಡಿದರು.

ತನಿಖಾದಳಗಳನ್ನು ಕೈಯಲ್ಲಿಟ್ಟುಕೊಂಡಿರುವ ವ್ಯವಸ್ಥೆಯಲ್ಲಿ ನಿಜವಾದ ಸತ್ಯ ಹೊರಬರಲು ಸಾಧ್ಯವೇ ಇಲ್ಲ. ಕಳೆದ 40 ವರ್ಷಗಳಿಂದ ರಾಮಮಂದಿರ ಹೆಸರಲ್ಲಿ ರಾಜಕೀಯ ಲಾಭ ಮಾಡುತ್ತಿರುವ ಬಿಜೆಪಿ ಸಂಘಪರಿವಾರ ಈಗ ಸಂಘಟಿತ ಲೂಟಿ ಮಾಡಿದೆ. ಶಿಲಾಪೂಜನಾ, ರಾಮಮಂದಿರ ತೀರ್ಥಕ್ಷೇತ್ರ ಟ್ರಸ್ಟ್ ಹಾಗೂ ದೇವಳಕ್ಕೆ ಬಂದ ಭಕ್ತರ ಕಾಣಿಕೆಯನ್ನು ಲಪಟಾಯಿಸಿದ ಈ ಸಂಘಪರಿವಾರಕ್ಕೆ ಈಗ 'ಜೈ ಶ್ರೀರಾಮ್ ಎಂಬ ಘೋಷಣೆ ಹಾಕುವ ನೈತಿಕ ಹಕ್ಕಿಲ್ಲ. ಅವರು ಇನ್ನುಮುಂದೆ 'ಜೈಸ್ವಾಹಾ' ಘೋಷಣೆ ಕೂಗುವುದೇ ಹೆಚ್ಚು ಸಮಂಜಸ ಎಂದು ಕೆಪಿಸಿಸಿ ವಕ್ತಾರ ಅಮಳ ರಾಮಚಂದ್ರ ಅವರು ವ್ಯಂಗ್ಯವಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಪುತ್ತೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಪಿ.ಆಳ್ವ, ಪ್ರಧಾನಕಾರ್ಯದರ್ಶಿ ರವಿಪ್ರಸಾದ್ ಶೆಟ್ಟಿ ಬನ್ನೂರು, ಪದಾಧಿಕಾರಿಗಳಾದ ರವೀಂದ್ರ ರೈ ನೆಕ್ಕಿಲು ಮತ್ತು ಅಮರ್‌ನಾಥ್ ಗೌಡ ಉಪಸ್ಥಿತರಿದ್ದರು.

# ಮಿನಿ ನ್ಯೂಸ್

## ಆರೋಪಿಗಳನ್ನು ಬಂಧಿಸಿದ ಪೊಲೀಸರು

• ಉದಯವಾಹಿನಿ ಬಳ್ಳಾರಿ :

ನಗರದ ಗುಗ್ಗರಹಟ್ಟಿ ಪ್ರದೇಶದಲ್ಲಿ ಇತ್ತೀಚಿಗೆ ನಡೆದಿದ್ದ ಪತ್ನಿ ಹಾಗೂ ಮಾವನ ಭೀಕರ ಹತ್ಯೆಯ ಪ್ರಕರಣವನ್ನು ಎಪಿಎಂಸಿ ಯಾರ್ಡ್ ಪೊಲೀಸರು ಭೇದಿಸಿದ್ದಾರೆ. ಪ್ರಕರಣದಲ್ಲಿ ಮೂವರು ಆರೋಪಿಗಳನ್ನು ಬಂಧಿಸಿರುವ ಪೊಲೀಸರು, ಕೊಲೆಗೆ ಬಳಸಿದ್ದ ಮಾರಕಾಸ್ತ್ರಗಳನ್ನು ವಶಪಡಿಸಿಕೊಂಡಿದ್ದಾರೆ. ಪತ್ನಿಯ ಶೀಲದ ಬಗ್ಗೆ ಅನುಮಾನವೇ ಈ ಭೀಕರ ಕೃತ್ಯಕ್ಕೆ ಕಾರಣ ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಬಳ್ಳಾರಿಯ ಗುಗ್ಗರಹಟ್ಟಿ ಪ್ರದೇಶದಲ್ಲಿ ನಡೆದಿದ್ದ ಇಬ್ಬರ ಕೊಲೆ ಪ್ರಕರಣ ಇಡೀ ಜಿಲ್ಲೆಯನ್ನು ಬೆಚ್ಚಿಬೀಳಿಸಿತ್ತು. ಪ್ರಮುಖ ಆರೋಪಿ ತೇಜ ಸೇರಿದಂತೆ ವೆಂಕಟೇಶ್ ಹಾಗೂ ಗುರುಶಂಕರ್ ಎಂಬ ಮೂವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

## ಭ್ರೂಣಲಿಂಗ ಪತ್ತೆ: ನಿರ್ದಾಕ್ಷಿಣ್ಯ ಕ್ರಮಕ್ಕೆ ಡಿಸಿ ಸೂಚನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ವಿಜಯಪುರ

ವಿಜಯಪುರ ಗಡಿ ಜಿಲ್ಲೆಯಾಗಿರುವುದರಿಂದ ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಹಾಗೂ ಹತ್ಯೆ ನಡೆಯದಂತೆ ಕಣ್ಗಾವಲು ಇರಿಸಲು ಈ ಕಾಯ್ದೆಯಡಿ ರಚಿತವಾದ ತಂಡ ನಿಯಮಿತವಾಗಿ ತಪಾಸಣೆ ಮತ್ತು ದಿಢೀರ ಕಾರ್ಯಾಚರಣೆಯನ್ನು ಕೈಗೊಂಡು ಇಂತಹ ಪ್ರಕರಣ ಜಿಲ್ಲೆಯಲ್ಲಿ ನಡೆಯದಂತೆ ನೋಡಿಕೊಳ್ಳಬೇಕು. ಆಸ್ಪತ್ರೆ ಹಾಗೂ ಸ್ಕ್ಯಾನಿಂಗ್ ಕೇಂದ್ರಗಳ ಪರಿಶೀಲನೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಕೆಪಿಎಂಇ ಜಿಲ್ಲಾ ನೋಂದಣಿ ಮತ್ತು ಕುಂದುಕೊರತೆ ನಿವಾರಣೆ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಾಲ ಗರ್ಭಿಣಿಯರು ಕಂಡು ಬಂದರೆ ಅಂಥವರ ಮಾಹಿತಿಯನ್ನು ಸಹಾಯವಾಣಿ 1098 ಗೆ ಕರೆ ಮಾಡಲು ತಿಳಿಸಿ ಜಿಲ್ಲೆಯಲ್ಲಿ ಬಾಲ ಗರ್ಭಿಣಿಯರ ಪ್ರಕರಣಗಳು ಕಡಿಮೆ ಮಾಡುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯಪ್ರವೃತ್ತವಾಗಿ ಕೆಲಸ ನಿರ್ವಹಿಸಬೇಕೆಂದು ಸೂಚಿಸಿದರು.

ವಿಜಯಪುರ ತಾಲ್ಲೂಕಿನಲ್ಲಿ 742 ಖಾಸಗಿ ಆರೋಗ್ಯ ಸಂಸ್ಥೆಗಳು ಜಿಲ್ಲಾ ಕೆ.ಪಿ.ಎಂ.ಇ ಅಡಿಯಲ್ಲಿ ನೋಂದಣಿ ಆಗಿರುತ್ತದೆ. ಬ.ಬಾಗೇವಾಡಿ ತಾಲ್ಲೂಕಿನಲ್ಲಿ 109, ಮುದ್ದೇಬಿಹಾಳ ತಾಲ್ಲೂಕಿನಲ್ಲಿ 115, ಇಂಡಿ ತಾಲ್ಲೂಕಿನಲ್ಲಿ 152. ಸಿಂದಗಿ ತಾಲ್ಲೂಕಿನಲ್ಲಿ 157, ಒಟ್ಟು 1275 ಖಾಸಗಿ ಆಸ್ಪತ್ರೆಗಳು ನೋಂದಣಿ ಆಗಿರುತ್ತವೆ. ಜಿಲ್ಲೆಯಲ್ಲಿ ನೋಂದಣಿಗೊಂಡ ಪ್ರತಿಯೊಂದು ಖಾಸಗಿ ಆರೋಗ್ಯ ಸಂಸ್ಥೆಗಳು ಕಡ್ಡಾಯವಾಗಿ ನಿರ್ದಿಷ್ಟಪಡಿಸಿದ ವೈದ್ಯಕೀಯ ಚಿಕಿತ್ಸಾ ಪದ್ಧತಿ, ಸಂಸ್ಥೆಯ ಹೆಸರು, ಮಾಲಿಕರು, ನೋಂದಣಿ ಸಂಖ್ಯೆಗಳ ಬಣ್ಣದ ಫಲಕವನ್ನು ಪ್ರದರ್ಶಿಸುವಂತೆ ಸಭೆಯಲ್ಲಿ ಹಾಜರಿದ್ದ ತಾಲ್ಲೂಕಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

## ಜು.9ರಿಂದ 15ರವರೆಗೆ ಶ್ರೀ ಕಾಳಿಕಾದೇವಿ ಜಾತ್ರಾ ಮಹೋತ್ಸವ

• ಉದಯವಾಹಿನಿ ವಿಜಯಪುರ

ತೊರವಿ ಸಮೀಪದ ಕೆಸರಾಳ ತಾಂಡಾದಲ್ಲಿರುವ ಪ್ರಸಿದ್ಧ ಶ್ರೀ ಕಾಳಿಕಾದೇವಿ ಜಾತ್ರಾ ಮಹೋತ್ಸವ ಜುಲೈ 9ರಿಂದ 15ರವರೆಗೆ ವೈಭವದಿಂದ ನಡೆಯಲಿದ್ದು, ದೇವಾಲಯ ಸೇವಾ ಸಮಿತಿ ಅಧ್ಯಕ್ಷ ಧನಸಿಂಗ್ ಮಹಾರಾಜ ಅವರ ನೇತೃತ್ವದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಂಜಾರಾ ಸಮಾಜದ ಮುಖಂಡ ಡಾ. ಬಾಬು ರಾಜೇಂದ್ರ ನಾಯಕ ತಿಳಿಸಿದ್ದಾರೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಕ್ಷೇತ್ರ ಕೆಸರಾಳ ತಾಂಡಾದ ಶ್ರೀ ಕಾಳಿಕಾದೇವಿ ದೇವಾಲಯವು ಬಂಜಾರಾ ಸಮುದಾಯದ ಪ್ರಮುಖ ಆರಾಧನಾ ಕೇಂದ್ರವಾಗಿದ್ದು, ಪ್ರತಿವರ್ಷ ಸಾವಿರಾರು ಭಕ್ತರ ಸಮ್ಮುಖದಲ್ಲಿ ಜಾತ್ರೆ ವಿಜೃಂಭಣೆಯಿಂದ ನಡೆಯುತ್ತದೆ ಎಂದು ಹೇಳಿದರು.

ಜುಲೈ 9ರಂದು ಕಾಳಿಕಾದೇವಿಯ ಪಲ್ಲಕ್ಕಿ ಗಂಗಾಸ್ನಾನಕ್ಕೆ ತೆರಳಲಿದ್ದು, ಜುಲೈ 14ರಂದು ಮಣ್ಣೆತ್ತಿನ ಅಮಾವಾಸ್ಯೆ ಅಂಗವಾಗಿ ಮೂಲಮಂತ್ರ ಪಠಣ, ಹೋಮ-ಹವನ, ಪುಷ್ಪಾರ್ಚನೆ, ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ಜರುಗಲಿವೆ. ದೇಶದ ವಿವಿಧ ಭಾಗಗಳಿಂದ ಆಗಮಿಸುವ ಬಂಜಾರಾ ಭಜನಾ ತಂಡಗಳು ಭಕ್ತಿಗೀತೆಗಳ ಮೂಲಕ ಜಾತ್ರೆಯ ಮೆರುಗನ್ನು ಹೆಚ್ಚಿಸಲಿವೆ ಎಂದು ತಿಳಿಸಿದರು.

## ವಿದ್ಯಾರ್ಥಿಗಳಿಗೆ ಎಚ್‌ಪಿವಿ ಲಸಿಕೆ

• ಉದಯವಾಹಿನಿ ತಾಳಿಕೋಟೆ,:

ಪಟ್ಟಣದ ಸರ್ವಜ್ಞ ವಿದ್ಯಾಪೀಠ ಶಿಕ್ಷಣ ಸಂಸ್ಥೆಯಲ್ಲಿಯ ಹದಿನಾಲ್ಕು ವರ್ಷದ ವಿದ್ಯಾರ್ಥಿನಿಯರಿಗೆ ಸರ್ಕಾರಿ ಮಾರ್ಗಸೂಚಿಗಳ ಪ್ರಕಾರ ಎಚ್ ಪಿವಿ (ಹ್ಯೂಮನ್ ಪ್ಯಾಪಿ ಲೋನ್ ವೈರಸ್) ಲಸಿಕೆ ನೀಡಲಾಯಿತು. ಇದು ಗರ್ಭಕಂಟಕದ ಕ್ಯಾನ್ಸರ್ ತಡೆಗಟ್ಟಲು ಸುರಕ್ಷಿತ ಮತ್ತು ಪರಿಣಾಮಕಾರಿ ಲಸಿಕೆಯಾಗಿದೆ. ಅದಕ್ಕಾಗಿ 14 ವರ್ಷ ಮೇಲ್ಪಟ್ಟು 15 ವರ್ಷದ ಒಳಗಿನ ವಿದ್ಯಾರ್ಥಿನಿಯರಿಗೆ ಹಾಕಿಸಲಾಯಿತು.

ಪ್ರಾಥಮಿಕ ಆರೋಗ್ಯ ಕೇಂದ್ರದ ಮಧು ಟಕ್ಕಳಕಿ, ಪ್ರಾಥಮಿಕ ಆರೋಗ್ಯ ಸುರಕ್ಷಿತ ಅಧಿಕಾರಿ ನೂರ್ ಜಾನ್ ಬೋರಗಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ವಿದ್ಯಾವತಿ ಬೂದಿಹಾಳ, ಆಶಾ ಕಾರ್ಯಕರ್ತೆಯರು, ಮತ್ತು ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಬ.ಮಂಗಳೂರ, ಮುಖ್ಯಗುರುಗಳಾದ ಸಂತೋಷ ಪವಾರ, ಶಾಂತಗೌಡ ಬಿರಾದಾರ, ಚೇತನ ನಾವದಗಿ, ಮತ್ತು ವಿದ್ಯಾರ್ಥಿನಿಯರು ಇದ್ದರು.

## ಸೇವೆಯ ಸಂತೋಷ ಅದಮ್ಯ: ಡಾ. ಹೆಗ್ಗಡೆ

• ಉದಯವಾಹಿನಿ ಬೆಳ್ತಂಗಡಿ:

ಉಜಿರೆ ಎಸ್‌ಡಿಎಂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಅತಿ ಶೀಘ್ರ ಎಂಆರ್ ಐ ಸ್ಕ್ಯಾನಿಂಗ್ ಸೇವೆ ಆರಂಭಗೊಳ್ಳಲಿದೆ. ಸೇವೆಯಲ್ಲಿರುವ ಸಂತೋಷ ಬೇರೆಲ್ಲಿಯೂ ಸಿಗಲಾರದು.

ನಮ್ಮೆಲ್ಲ ವೈದ್ಯರಲ್ಲಿ ಆ ಸೇವಾ ಮನೋಭಾವವಿದೆ ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಹೇಳಿದ್ದಾರೆ. ಆಸ್ಪತ್ರೆಯಲ್ಲಿ ನಡೆದ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವೈದ್ಯರಿಗೆ ಅವರ ಪರಿವಾರದವರ ಸಹಕಾರ ಇರುವುದರಿಂದ ಮಾತ್ರ ಇಂತಹ ಗ್ರಾಮೀಣ ಪ್ರದೇಶದಲ್ಲಿ ಸೇವೆ ಸಲ್ಲಿಸಲು ಸಾಧ್ಯವಾಗಿದೆ. ಕೇವಲ ವೈದ್ಯಕೀಯ ಸಲಕರಣೆಗಳು ಇದ್ದರೆ ಸಾಲದು ಸರಿಯಾಗಿ ಬಳಸುವ ಮೂಲಕ ರೋಗಿಗಳಿಗೆ ಉಪಯುಕ್ತವಾಗಬೇಕು ಎಂದರು. ಹೆಮ್ಮರವಾಗಿ ಬೆಳೆಯುವಂತೆ ನಮ್ಮ ಉಜಿರೆಯ ಈ ಆಸ್ಪತ್ರೆ ಬೆಳೆಯುತ್ತಿದೆ 2025-26ರ ಸಾಲಿನಲ್ಲಿ 4 ಕೋಟಿ ರು.ಗೂ ಹೆಚ್ಚು ಮೊತ್ತದ ವೈದ್ಯಕೀಯ ಸೇವೆಯನ್ನು ಉಚಿತವಾಗಿ ನೀಡಲಾಗಿದೆ ಎಂದರು.

